RNI No. **KARBIL/2001/47147**

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೮ **Volume 148**	ಬೆಂಗಳೂರು, ಗುರುವಾರ, ಆಗಸ್ಟ್ ೨೨, ೨೦೧೩ (ಶ್ರಾವಣ ೩೧, ಶಕ ವರ್ಷ ೧೯೩೫) **Bangalore, Thursday, August 22, 2013 (Shravana 31, Shaka Varsha 1935)**	ಸಂಚಿಕೆ ೩೪ **Issue 34**

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

HEATH AND FAMILY WELFARE SECRETARIAT

SUB : Constituting District Level Enforcement Committee in the State for Implementation of orders of Prohibition of Gutkha and Panmasala containing Tobacco and Nicotine.

READ : Notification No. PHI/FSSA/Notification/01/2013-14, dt. 30-05-2013.

Preamble:

Government of India has enacted Food Safety and Standards Act, 2006 in order to regulate under law the manufacture, storage, distribution and sale of food articles, in accordance with the said Act, Food Safety and Standards Regulations 2011 came into effect from 5-8-2011 in the entire state.

In accordance with the provisions under regulation 2,3,4 of Act, Food Safety and Standards Regulations 2011. manufacture, storage, sale or distribution of Gutkha and Panmasala containing Tobacco and Nicotine or any product with any other name or brand available in the market containing tobacco and Nicotine has been banned in the State completely by the Food Safety Commission vide Notification dated 30-5-2013 read above in the interest of general public at large.

Since, In view of the directions of the Hon'ble Supreme Court Gutkha and Panmasala containing Tobacco and Nicotine has been banned in the State. In order to implement the ban completely and effectively in the State. It is necessary to constitute a District Level Enforcement Committee.

Government has considered the proposal in detail and orderd as under.

GOVERNMENT ORDER NO.HFW 156 CGE 2012, BANGALORE, DATED : 04.07.2013

Government has constituted a District Level Enforcement Committee under the Chairmanship of concerned Deputy Commissioner with the following members in order to implement the ban imposed on the manufacture, storage, sale and distribution of Gutkha and Panmasala containing Tobacco and Nicotine or any product with any other name available in the market in the interest of general public.

• Deputy Commissioner	Chairman
• Chief Executive Officer, Zilla Panchayath	Member
• District Superintendent of Police	Member
• Commissioner, Bruhath Mahanagara Palike/Mahanagara Palike/City Municipal Council	Member
• District Health and Family Welfare Officer	Member
• Commercial Tax Officer	Member
• Senior Regional Transport Officer	Member
• Deputy Director, Food and Civil Supplies	Member

- Deputy Director, Information Department — Member
- Deputy Director, Agricultural Marketing Committee — Member
- District Designated Officer, Food Safety and Standards Act. — Member Secretary

This committee shall initiate the following action :

- To impart awareness with strict warning regarding the ban among the businessmen involved in manufacture, storage, marketing and distribution of Gutkha and Panmasala containing Tobacco and Nicotine or any such product with any other name available in the market containing tobacco and Nicotine.
- Action to be initiated under Section 57, 58 and 59 of Food Safety and Standards Act, 2006 against the businessmen manufacturing. Storing and marketing these banned products. Vide publicity be given to the effect that, anybody violating these provision will be punished with a fine up to Rs. 10.00 Lakhs and imposition of maximum imprisonment.
- Gutkha and Panmasala containing Tobacco and Nicotine are unhealthy food products. Marketing of these unhealthy food products or beverage is an offence under Section 273 IPC. Further, those who market these unhealthy food products are liable to be punished under this Section and may face legal proceedings and also liable to be imprisoned up to 6 months or fine of Rs. 1000/- or both and hence, action is to be initiated under section against the violators.
- A notification dated 30-5-2013 has been issued in the State banning manufacture, storage and marketing Gutkha and Panmasala containing Tobacco and Nicotine Case may be filed against the offenders of the provisions of this Act under Section 188 IPC. This section provides to order for imprisonment for a period of one month or and fine of Rs. 200/- or both and If they cause any threat or difficulty to the health and life of the general public. 6 months imprisonment or a fine of Rs. 1000/- or both may be imposed. Action may be initiated under this provision against the offenders of the above Notification.
- Details of persons involved in Manufacture and storage of Gutkha and Panmasala may be obtained from Industries and Commerce Department and submitted to Superintendent of Police of the District and Designated Officer.
- Seized Gutkha and Panmasala shall be disposed without causing damage to the environment.
- Action be initiated to send the samples of seized Gutkha and Panmasala suspected containing Tobacco and Nicotine for analysis, if found on prima facie.

In the monthly report that is being submitted to the Government under COTPA Act, action be taken to include data on the number of raids conducted on manufacturing units and marketing shops, collection of fine and articles seized has to be incorporated in the prescribed form immediately after imposing ban on Gutkha and Panmasala containing tobacco and nicotine be submitted to the Principal Secretary to Government, Home Department, Health and Family Welfare Department, Urban Development Department and Director and Inspector General of Police from time to time.

By Order and in the name of the Governor of Karnataka,
P. NARAYANA
Under Secretary to Government,
Health and Family Welfare Department (Health 1 & 2).

P.R. 777

ಇಂಧನ ಸಚಿವಾಲಯ

ವಿಷಯ : ಮೆ॥ ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಟ್ಟೆಪುರ ಕಿರು ಜಲ ವಿದ್ಯುತ್ ಯೋಜನೆಗೆ ಕಾಲಾವಕಾಶ ವಿಸ್ತರಣೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರಿ ಆದೇಶ ಸಂಖ್ಯೆ : ಡಿಇ 28 ಎನ್‌ಸಿಇ 1996(15), ದಿನಾಂಕ : 24-07-1996.
2. ಸರ್ಕಾರಿ ಆದೇಶ ಸಂಖ್ಯೆ : ಡಿಇ 46 ಎನ್‌ಸಿಇ 1997, ದಿನಾಂಕ : 24-06-1999.
3. ಸರ್ಕಾರಿ ಆದೇಶ ಸಂಖ್ಯೆ : ಡಿಇ 3 ಎನ್‌ಸಿಇ 2002, ದಿನಾಂಕ : 01-04-2002.
4. ಸರ್ಕಾರಿ ಆದೇಶ ಸಂಖ್ಯೆ : ಡಿಇ 248 ಎನ್‌ಸಿಇ 2004, ದಿನಾಂಕ : 26-08-2004.
5. ಸರ್ಕಾರಿ ಆದೇಶ ಸಂಖ್ಯೆ ಇಎನ್ 520 ಎನ್‌ಸಿಇ 2008, ದಿನಾಂಕ : 29-06-2010.
6. ಸರ್ಕಾರಿ ಆದೇಶ ಸಂಖ್ಯೆ : ಇಎನ್ 428 ಎನ್‌ಸಿಇ 2011, ದಿನಾಂಕ : 29-12-2012.
7. ಸರ್ಕಾರಿ ಆದೇಶ ಸಂಖ್ಯೆ : ಇಎನ್ 307 ಎನ್‌ಸಿಇ 2012, ದಿನಾಂಕ : 22-10-2012.
8. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/SH-30/ಕಟ್ಟೆಪುರ ಎಂಹೆಚ್‌ಎಸ್/2012/806, ದಿನಾಂಕ : 01-04-2013.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮೆ॥ ಪೇಪರ್ ಪ್ಯಾಕಿಂಗ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಕಟ್ಟೆಪುರದಲ್ಲಿ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಮೆ॥ ಪೇಪರ್ ಪ್ಯಾಕಿಂಗ್ ಪ್ರೈವೇಟ್ ಲಿಮಿಟೆಡ್ ಎಂಬ ಕಂಪನಿಯ ಹೆಸರನ್ನು ಮೆ॥ ಬ್ರೈಟ್ ವಿದ್ಯುತ್ ಕಂಪನಿ ಪ್ರೈವೇಟ್ ಲಿಮಿಟೆಡ್ ಎಂದು ಬದಲಾಯಿಸಿ 5.00 ಮೆ.ವ್ಯಾ. ಸಾಮರ್ಥ್ಯದ ಕಟ್ಟೆಪುರ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ಮೆ॥ ಬ್ರೈಟ್ ವಿದ್ಯುತ್ ಕಂಪನಿ ಪ್ರೈವೇಟ್ ಲಿಮಿಟೆಡ್ ಎಂಬ ಕಂಪನಿಯ ಹೆಸರನ್ನು ಮೆ॥ ಕಾವೇರಿ ಹೈಡ್ರೊ ಎನರ್ಜಿ ಲಿಮಿಟೆಡ್ ಎಂದು ಬದಲಾಯಿಸಿ 5.00 ಮೆ.ವ್ಯಾ. ಸಾಮರ್ಥ್ಯದ ಕಟ್ಟೆಪುರ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ ಮೇಲ್ಕಂಡ ಯೋಜನೆಯನ್ನು ಮೆ॥ ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾಯಿಸಿ ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆದೇಶದಲ್ಲಿ ಮೆ॥ ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಕಟ್ಟೆಪುರ ಎಂಬಲ್ಲಿ ಹಂಚಿಕೆಯಾಗಿದ್ದ ಮೇಲ್ಕಂಡ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾಲಾವಕಾಶವನ್ನು ದಿನಾಂಕ : 1–10–2009 ರಿಂದ ಮುಂದಿನ 2 ವರ್ಷಗಳ ಅವಧಿಗೆ ವಿಸ್ತರಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಆದೇಶದಲ್ಲಿ ಮೆ॥ ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಕಟ್ಟೆಪುರ ಎಂಬಲ್ಲಿ ಹಂಚಿಕೆಯಾಗಿದ್ದ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಕೊನೆಯದಾಗಿ ಕಾಲಾವಕಾಶವನ್ನು ದಿನಾಂಕ : 01–10–2011 ರಿಂದ 30–09–2012 ರವರೆಗೆ ಕೆಲವೊಂದು ಷರತ್ತಿಗೊಳಪಟ್ಟು ವಿಸ್ತರಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (7)ರ ಆದೇಶದಲ್ಲಿ ಮೆ॥ ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಕಟ್ಟೆಪುರ ಎಂಬಲ್ಲಿ ಹಂಚಿಕೆಯಾಗಿರುವ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಅಂತಿಮವಾಗಿ ಕಾಲಾವಕಾಶವನ್ನು ದಿನಾಂಕ : 01–10–2012 ರಿಂದ 31–03–2013ರವರೆಗೆ ವಿಸ್ತರಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (8)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಮೆ॥ ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಕಟ್ಟೆಪುರ ಎಂಬಲ್ಲಿ ಹಂಚಿಕೆಯಾಗಿರುವ 5.00 ಮೆ.ವ್ಯಾ. ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯ ಸಿವಿಲ್ ಕಾಮಗಾರಿಗಳು ಪೂರ್ಣಗೊಂಡಿರುವುದಾಗಿ ಯೋಜನೆಯನ್ನು ವಿದ್ಯುತ್ ಜಾಲಕ್ಕೆ ಸಂಪರ್ಕ ನೀಡಲು ಕಾವೇರಿ ನದಿಯಲ್ಲಿ ನೀರಿನ ಹರಿವು ಇಲ್ಲದೆ ಇರುವುದರಿಂದ ಸಂಪರ್ಕ ನೀಡಲು ಸಾಧ್ಯವಾಗದಿರುವುದರಿಂದ ಯೋಜನೆಯ ಅನುಷ್ಠಾನಕ್ಕೆ 01–04–2013 ರಿಂದ 30–09–2013 ರವರೆಗೆ ಕಾಲಾವಕಾಶವನ್ನು ಮತ್ತು ಈಗಾಗಲೇ ಪಾವತಿಸಿರುವ ರೂ. 15.00 ಲಕ್ಷಗಳ ನೆರೆವೇರಿಕೆ ಖಾತರಿಯನ್ನು ಈ ಅವಧಿಯಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸದಿದ್ದಲ್ಲಿ ನಗದೀಕರಿಸಿಕೊಳ್ಳುವ ಷರತ್ತಿಗೊಳಪಟ್ಟು ಕಾಲಾವಕಾಶವನ್ನು ವಿಸ್ತರಿಸುವ ಅಭಿಪ್ರಾಯದೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ :–

ಸರ್ಕಾರದ ಆದೇಶ ಸಂಖ್ಯೆ : ಇಎನ್ 130 ಎನ್‌ಸಿಇ 2013, ಬೆಂಗಳೂರು, ದಿನಾಂಕ : 21–05–2013.

ಮೆ॥ ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಕಟ್ಟೆಪುರ ಎಂಬಲ್ಲಿ ಹಂಚಿಕೆಯಾಗಿರುವ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ : 01–04–2013 ರಿಂದ 30–09–2013 ರವರೆಗೆ ಕಾಲಾವಕಾಶವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ವಿಸ್ತರಿಸಲಾಗಿದೆ.

ಷರತ್ತುಗಳು :

1. ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಈಗಾಗಲೇ ಪಾವತಿಸಿರುವ ರೂ. 15.00 ಲಕ್ಷಗಳ ನೇರೆವೇರಿಕೆ ಖಾತರಿ ಮೊತ್ತದ ಅವಧಿಯನ್ನು ದಿನಾಂಕ : 01–04–2013 ರಿಂದ 30–09–2013 ರವರೆಗೆ ವಿಸ್ತರಿಸಿದೆ. ಈ ಕಾಲಾವಕಾಶ ವಿಸ್ತರಣಾ ಅವಧಿಯೊಳಗಾಗಿ ಯೋಜನೆಯನ್ನು ಅನುಷ್ಠಾನಗೊಳಿಸದಿದ್ದಲ್ಲಿ ರೂ. 15.00 ಲಕ್ಷಗಳ ನೆರೆವೇರಿಕೆ ಖಾತರಿ (Performance Guarantee) ಮೊತ್ತವನ್ನು ಕೆ.ಆರ್.ಇ.ಡಿ.ಎಲ್. ನಗದೀಕರಿಸಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ನಿಯಮಾನುಸಾರ ಕಾಲಾವಧಿ ವಿಸ್ತಾರಣಾ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಪಾವತಿಸತಕ್ಕದ್ದು.
3. ಈ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

P.R. 766

ಎ.ಎ. ಚಪ್ಪರಬಂದ್

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಹಂಚಿಕೆಯಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ 10.00 ಮೆ.ವ್ಯಾ. ಸಾಮರ್ಥ್ಯವನ್ನು ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾವಣೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 254 ಎನ್‌ಸಿಇ 2010, ದಿನಾಂಕ : 19-04-2011.
2. ಸರ್ಕಾರಿ ಆದೇಶ ಸಂಖ್ಯೆ : ಇಎನ್ 454 ಎನ್‌ಸಿಇ 2011, ದಿನಾಂಕ : 05-03-2012.
3. ಸರ್ಕಾರಿ ಆದೇಶ ಸಂಖ್ಯೆ : ಇಎನ್ 109 ಎನ್‌ಸಿಇ 2012, ದಿನಾಂಕ : 05-03-2012.
4. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : KRED/08/RWE(AP)PL-10MW/Gamesa-25.5 MW/2013/1176 ದಿನಾಂಕ : 16/20-05-2013.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ, ಚಿಕ್ಕೋಡಿ ತಾಲ್ಲೂಕಿನ ಕರೋಶಿ ಗ್ರಾಮದ ಆಸುಪಾಸಿನಲ್ಲಿ 25.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಯಾಗಿರುವ 25.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ 3.40 ಮೆಗಾ ವ್ಯಾಟ್ ಸಾಮರ್ಥ್ಯವನ್ನು ಮೆ: ಗೋಲ್ಡನ್ ಹ್ಯಾಚರೀಸ್ ಕಂಪನಿಯವರಿಗೆ ಟರ್ಬೈನ್ ಸಂಖ್ಯೆ : GKR-17 ರ ಸ್ಥಳವನ್ನು ಟರ್ಬೈನ್ ಸಂಖ್ಯೆ : GKR-01ರ ಸರ್ವೆ ಸಂಖ್ಯೆ 31ಕ್ಕೆ ಸ್ಥಳ ಬದಲಾವಣೆ ಮಾಡಿ ವರ್ಗಾಯಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರಿ ಆದೇಶದಲ್ಲಿ ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಯಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ 3.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ॥ ಮಂಜುಶ್ರೀ ಟೆಕ್ನೋಪ್ಯಾಕ್ ಲಿಮಿಟೆಡ್ ಕಂಪನಿಯವರಿಗೆ ವರ್ಗಾವಣೆ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕರೋಶಿ ಗ್ರಾಮದ ಆಸುಪಾಸಿನಲ್ಲಿ ಮಂಜೂರಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಈಗಾಗಲೇ 6.8 ಮೆ.ವ್ಯಾ. ಸಾಮರ್ಥ್ಯವನ್ನು ವಿವಿಧ ಕಂಪನಿಗಳಿಗೆ ವರ್ಗಾಯಿಸಿ ಅನುಷ್ಠಾನಗೊಳಿಸಿರುವುದಾಗಿ, ಉಳಿದ 18.7 ಮೆ.ವ್ಯಾ. ಸಾಮರ್ಥ್ಯದಿಂದ 10.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ಕಂಪನಿಗೆ ವರ್ಗಾಯಿಸುವ ಕುರಿತಂತೆ ಅಭಿವೃದ್ಧಿದಾರರು ನಿಗದಿತ ವರ್ಗಾವಣೆ ಶುಲ್ಕ ಪಾವತಿಸಿರುವುದಾಗಿ ತಿಳಿಸುತ್ತಾ, ಯೋಜನೆಯು ಖಾಸಗಿ ಜಮೀನಿನಲ್ಲಿ ಬರುತ್ತಿರುವುದಾಗಿ, ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ ಮಾರಾಟ ಮಾಡುವ ಮತ್ತು ಭಾಗಶಃ ಸಾಮರ್ಥ್ಯವನ್ನು ಸ್ವಂತ ಬಳಕೆಗೆ ಉಪಯೋಗಿಸಿಕೊಳ್ಳುವ ಮತ್ತು ಈ ಯೋಜನೆಯನ್ನು ಡಿಸೆಂಬರ್ 2013ರೊಳಗಾಗಿ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ವರ್ಗಾಯಿಸಬಹುದೆಂದು ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ :-

ಸರ್ಕಾರದ ಆದೇಶ ಸಂಖ್ಯೆ : ಇಎನ್ 145 ಎನ್‌ಸಿಇ 2013, ಬೆಂಗಳೂರು, ದಿನಾಂಕ : 27-05-2013.

ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕರೋಶಿ ಗ್ರಾಮದ ಆಸುಪಾಸಿನಲ್ಲಿ ಮಂಜೂರಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ 10.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ. ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ವರ್ಗಾಯಿಸಲಾಗಿದೆ.

Schedule

Topo sheet No.	Proposed capacity in MW	Near by villages of the proposed area and district	Description
471/11	25.5 MW	Chikkodi, Karoshi & Hathati of Belgaum District	The proposed are is situated on the East & South-East of Chikkodi Town and as the reference wind monitoring station Chikkodi. It is a plain area and mostly has agricultural activities. Further, as per the topographic map. The area appears to be private and the general elevation of the area varies from 680 to 700 mtrs amsl. The proposed area encomphases the earlier sanctioned area and the same is deleted The remaining area of the project is held in the following Geographical Co-ordinates : Latitude : $16^0 21' 56"$-$16^0 25' 38"$ N Longitude : $74^0 35' 0"$-$74^0 37' 6"$ E Elevation : 680 to 700 m Amsl. Special Note : Execluding the area allotted to Private firm in the following Geographical Co-ordinates : Latitude : $16^0 22' 53"$-$16^0 23' 26"$ N Longitude : $74^0 35' 25"$-$74^0 37' 6"$ E Ridge peaks : 772 M Amsl.

Land details of the project

Village Name	Taluk & District	MW	Land Sy. No.	WTGs No.	Extent of Land Per WTG (Acres)	Latitude/Langitude Ridge Peaks &
Umrani	Chikkodi/Belgaum	2.00	302/3	GKCD-02	4.00	Lat-16^{0}24'29^{0}73"N Long-74^{0}36'52.37"E Ridge Peak : 710m
		2.00	303/2	GKCD-03	4.00	Lat-16^{0}24'21.24"N Long-74^{0}36'50.90"E Ridge Peak : 712m
		2.00	268	GKCD-04	4.00	Lat-16^{0}24'13.37"N Long-74^{0}36'49.43"E Ridge Peak : 714m
		2.00	265	GKCD-05	4.00	Lat-16^{0}24'5.22"N Long-74^{0}36'46.21" E Ridge Peak : 719m
		2.00	273/1+2+3/2	GKCD-06	4.00	Lat-16^{0}23'43.15"N Long-74^{0}36'38.65"E Ridge Peak : 722m
Total		**10.00**				

1. ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ : 06-01-2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ರವರು ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲು ಮತ್ತು ಸ್ವಂತಕ್ಕೆ ಬಳಸಿಕೊಳ್ಳಲು ಅನುಮತಿಸಿದೆ.
3. ಸದರಿ ಯೋಜನೆಯನ್ನು ದಿನಾಂಕ : 31-12-2013 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
4. ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎ.ಎ. ಚಪ್ಪರಬಂದ್

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ.

P.R. 767

ಇಂಧನ ಸಚಿವಾಲಯ

ವಿಷಯ : ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಹಂಚಿಕೆಯಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ 8.00 ಮೆ.ವ್ಯಾ. ಸಾಮರ್ಥ್ಯವನ್ನು ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾವಣೆ ಮಾಡುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 254 ಎನ್‌ಸಿಇ 2010, ದಿನಾಂಕ : 19-04-2011.
2. ಸರ್ಕಾರಿ ಆದೇಶ ಸಂಖ್ಯೆ : ಇಎನ್ 454 ಎನ್‌ಸಿಇ 2011, ದಿನಾಂಕ : 05-03-2012.
3. ಸರ್ಕಾರಿ ಆದೇಶ ಸಂಖ್ಯೆ : ಇಎನ್ 109 ಎನ್‌ಸಿಇ 2012, ದಿನಾಂಕ : 05-03-2012.
4. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : KRED/ =08/RWE(AP)PL-8MW/(GWTPL-25.5 MW)/2013/1177 ದಿನಾಂಕ : 20-05-2013.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ, ಚಿಕ್ಕೋಡಿ ತಾಲ್ಲೂಕಿನ ಕರೋಶಿ ಗ್ರಾಮದ ಆಸುಪಾಸಿನಲ್ಲಿ 25.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಯಾಗಿರುವ 25.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ 3.40 ಮೆಗಾ ವ್ಯಾಟ್ ಸಾಮರ್ಥ್ಯವನ್ನು ಮೆ: ಗೋಲ್ಡನ್ ಹ್ಯಾಚರೀಸ್ ಕಂಪನಿಯವರಿಗೆ ಟರ್ಬೈನ್ ಸಂಖ್ಯೆ : GKR-17 ರ ಸ್ಥಳವನ್ನು ಟರ್ಬೈನ್ ಸಂಖ್ಯೆ : GKR-01 ರ ಸರ್ವೆ ಸಂಖ್ಯೆ 31ಕ್ಕೆ ಸ್ಥಳ ಬದಲಾವಣೆ ಮಾಡಿ ವರ್ಗಾಯಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರಿ ಆದೇಶದಲ್ಲಿ ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಯಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ 3.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ॥ ಮಂಜುಶ್ರೀ ಟೆಕ್ನೋಪ್ಯಾಕ್ ಲಿಮಿಟೆಡ್ ಕಂಪನಿಯವರಿಗೆ ವರ್ಗಾವಣೆ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕರೋಶಿ ಗ್ರಾಮದ ಆಸುಪಾಸಿನಲ್ಲಿ ಮಂಜೂರಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಈಗಾಗಲೇ 6.8 ಮೆ.ವ್ಯಾ. ಸಾಮರ್ಥ್ಯವನ್ನು ವಿವಿಧ ಕಂಪನಿಗಳಿಗೆ ವರ್ಗಾಯಿಸಿ ಅನುಷ್ಠಾನಗೊಳಿಸಿರುವುದಾಗಿ ತಿಳಿಸುತ್ತಾ, ಉಳಿದ 18.7 ಮೆ.ವ್ಯಾ. ಸಾಮರ್ಥ್ಯದಿಂದ 8.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ಕಂಪನಿಗೆ ವರ್ಗಾಯಿಸುವ ಕುರಿತಂತೆ ಅಭಿವೃದ್ಧಿದಾರರು ನಿಗದಿತ ವರ್ಗಾವಣೆ ಶುಲ್ಕ ಪಾವತಿಸಿರುವುದಾಗಿ ತಿಳಿಸುತ್ತಾ, ಯೋಜನೆಯು ಖಾಸಗಿ ಜಮೀನಿನಲ್ಲಿ ಬರುತ್ತಿರುವುದಾಗಿ, ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ ಮಾರಾಟ ಮಾಡುವ ಮತ್ತು ಭಾಗಶಃ ಸಾಮರ್ಥ್ಯವನ್ನು ಸ್ವಂತ ಬಳಕೆಗೆ ಉಪಯೋಗಿಸಿಕೊಳ್ಳುವ ಮತ್ತು ಈ ಯೋಜನೆಯನ್ನು 31-12-2013 ರೊಳಗಾಗಿ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ವರ್ಗಾಯಿಸಬಹುದೆಂದು ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ :-

ಸರ್ಕಾರದ ಆದೇಶ ಸಂಖ್ಯೆ : ಇಎನ್ 144 ಎನ್‌ಸಿಇ 2013, ಬೆಂಗಳೂರು, ದಿನಾಂಕ : 27-05-2012.

ಮೆ॥ ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕರೋಶಿ ಗ್ರಾಮದ ಆಸುಪಾಸಿನಲ್ಲಿ ಮಂಜೂರಾಗಿರುವ 25.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ 8.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ. ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ವರ್ಗಾಯಿಸಲಾಗಿದೆ.

Schedule

capacity in MW	Description
25.5 MW	The proposed area is situated on the East & South-East of Chikkodi Town and as the reference wind monitoring station Chikkodi. It is a plain area and mostly has agricultural activities. Further, as per the topographic map. The area appears to be private and the general elevation of the area varies from 680 to 700 mtrs amsl. The proposed area encomphases the earlier sanctioned area and the same is deleted. The remaining area of the project is held in the following Geographical Co-ordinates : Latitude : $16^0 21' 56"$-$16^0 25' 38"$ N Longitude : $74^0 35' 0"$-$74^0 37' 24"$ E Ridge peaks : 680 to 700 m Amsl. Special Note : Execluding the area allotted to Private firm in the following Geographical Co-ordinates : Latitude : $16^0 22' 53"$-$16^0 23' 26"$ N Longitude : $74^0 35' 25"$-$74^0 37' 6"$ E Ridge peaks : 772 m Amsl. Toposheet : 47 L/11

Land details of the project

Village Name	Taluk & District	MW	Land Sy. No.	WTGs No.	Extent of Land Per WTG (Acres)	Latitude and Langitude
Umrani	Chikkodi/Belgaum	2.00	84/1 and 84/2	GKCD-01	4.00	Lat-$16^0$24'37.85" N Long-$74^0$36'54.20"E
		2.00	155/2A	GKCD-07	4.00	Lat-$16^0$23'49.24"N Long-$74^0$36'40.40"E
		2.00	96/1	GKCD-08	4.00	Lat-$16^0$25'00.79"N Long-$74^0$36'54.93"E
		2.00	117	GKCD-09	4.00	Lat-$16^0$23'57.28"N Long-$74^0$36'42.54" E
Total		**8.00**			**16.00**	

1. ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ : 06-01-2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಮೆ॥ ರಿನಿವ್ ವಿಂಡ್ ಎನರ್ಜಿ (ಎಪಿ) ಪ್ರೈವೇಟ್ ಲಿಮಿಟೆಡ್ ರವರು ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲು ಮತ್ತು ಸ್ವಂತಕ್ಕೆ ಬಳಸಿಕೊಳ್ಳಲು ಅನುಮತಿಸಿದೆ.
3. ಸದರಿ ಯೋಜನೆಯನ್ನು ದಿನಾಂಕ : 31-12-2013 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
4. ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎ.ಎ. ಚಪ್ಪರಬಂದ್

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ.

P.R. 769

ಇಂಧನ ಸಚಿವಾಲಯ

ವಿಷಯ : ವಿದ್ಯುತ್ ಪರಿವೀಕ್ಷಣಾ ಇಲಾಖೆಯಲ್ಲಿ ತಾಂತ್ರಿಕ ಮತ್ತು ತಾಂತ್ರಿಕೇತರ ಹೆಚ್ಚುವರಿ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ವಿದ್ಯುತ್ ಪರಿವೀಕ್ಷಕರ ಪತ್ರ ಸಂಖ್ಯೆ : ಮುವಿಪ/ಸಿಸ1/29047/11-12, ದಿನಾಂಕ : 15-12-2011.

ಪ್ರಸ್ತಾವನೆ :

ವಿದ್ಯುತ್ ಪರಿವೀಕ್ಷಣಾ ಇಲಾಖೆಯ ಪ್ರಮುಖ ಕಾರ್ಯವು ರಾಜ್ಯದಲ್ಲಿ ಸ್ಥಾಪಿತವಾಗಿರುವ ಯಾವುದೇ ಕಾರ್ಖಾನೆ, ವಿದ್ಯುತ್ ಉತ್ಪಾದನಾ ಕೇಂದ್ರಗಳು, ಬಹುಮಹಡಿ ಕಟ್ಟಡಗಳು, ಚಲನಚಿತ್ರ ಮಂದಿರ, ಪ್ರದರ್ಶನಗಳು, ಲಿಫ್ಟ್‌ಗಳು, ಟ್ರಾನ್ಸ್‌ಫಾರ್ಮರ್‌ಗಳು, ಜನರೇಟರ್‌ಗಳು ಮುಂತಾದವುಗಳ ಪರಿಶೀಲನೆ ಮತ್ತು ಪ್ರಮಾಣೀಕರಿಸುವ ಕಾರ್ಯವನ್ನು ಕಡ್ಡಾಯವಾಗಿ ಕೈಗೊಳ್ಳುವುದಾಗಿದೆ. ರಾಜ್ಯದಲ್ಲಿ ವಿದ್ಯುತ್ ಸ್ಥಾವರಗಳು ದಿನೇದಿನಕ್ಕೆ ಅತೀ ಹೆಚ್ಚಾಗುತ್ತಿದ್ದು, ಇಲಾಖೆಯಲ್ಲಿನ ಅಧಿಕಾರಿ/ನೌಕರರ ಮೇಲೆ ಕೆಲಸದ ಒತ್ತಡ ಅತೀ ಹೆಚ್ಚಾಗಿದ್ದು ಸಾರ್ವಜನಿಕರ ಹಿತ ದೃಷ್ಟಿಯಿಂದ ಕೈಗೊಳ್ಳಬೇಕಾದ ಅಗತ್ಯ ಸೇವೆಗಳನ್ನು ನಾಗರೀಕ ಸನ್ನದ್ದು ಹಾಗೂ ಸೇವಾ ಖಾತರಿ ಅಧಿನಿಯಮದಡಿಯಲ್ಲಿ ನಿಗಧಿಪಡಿಸಲಾಗಿರುವ ಕಾಲಾವಕಾಶದೊಳಗೆ ಮಾಡಬೇಕಾಗುತ್ತದೆ. ಅತೀ ದೊಡ್ಡ ಸ್ಥಾವರಗಳನ್ನು ವ್ಯವಸ್ಥಿತವಾಗಿ ಪರಿವೀಕ್ಷಣೆ ನಡೆಸುವ ಅಗತ್ಯವಿದ್ದು, ಬಹು ಸಂಖ್ಯೆಯ ಸಾರ್ವಜನಿಕರು ಸೇರಿರುವ ವಾಣಿಜ್ಯ ಸಂಕೀರ್ಣಗಳು, ಮಾಲ್ ಹಾಗೂ ಸಿನಿಮಾ ಮಂದಿರಗಳನ್ನು ಸಹ ವ್ಯವಸ್ಥಿತವಾಗಿ ಪರಿವೀಕ್ಷಣೆ ನಡೆಸುವ ಅವಶ್ಯಕತೆ ಇರುತ್ತದೆ. ಹಾಗೂ ಸರ್ಕಾರಕ್ಕೆ ಪಾವತಿಸಬೇಕಾಗಿರುವ ತೆರಿಗೆಯನ್ನು ವ್ಯವಸ್ಥಿತವಾಗಿ ವಸೂಲಿ ಮಾಡಲು ಹೆಚ್ಚಿನ ಅಧಿಕಾರಿಗಳ ಅವಶ್ಯಕತೆ ಇರುತ್ತದೆ. ಈ ಕಾರಣಗಳಿಂದಾಗಿ ಇಲಾಖೆಯಲ್ಲಿ ಇರುವ 32 ಕಛೇರಿಗಳನ್ನು 38 ಕಛೇರಿಗಳನ್ನಾಗಿ ವಿಂಗಡಿಸುತ್ತಿದ್ದು, ಇದರಿಂದ ಗ್ರಾಹಕರಿಗೆ ಅನುಕೂಲವಾಗುವುದರ ಜೊತೆಗೆ ಇಲಾಖೆಯಲ್ಲಿ ಆಡಳಿತವನ್ನು ಕ್ರಮಬದ್ಧಗೊಳಿಸಲು ಸಾಧ್ಯವಾಗುತ್ತದೆ. ಈ ಕಾರಣಗಳಿಂದಾಗಿ ಮುಖ್ಯ ವಿದ್ಯುತ್ ಪರಿವೀಕ್ಷಕರವರು ಮೇಲೆ ಓದಲಾದ ಪತ್ರದಲ್ಲಿ ತಾಂತ್ರಿಕ ಮತ್ತು ಲಿಪಿಕ ವರ್ಗದ ಒಟ್ಟು 228 ಹುದ್ದೆಗಳ ಸೃಜನೆಗೆ ಸರ್ಕಾರದ ಅನುಮತಿಯನ್ನು ಕೋರಿ ಪ್ರಸ್ತಾವನೆ ಸಲ್ಲಿಸಿದ್ದಾರೆ. ಈ ಹೆಚ್ಚುವರಿ ಹುದ್ದೆಗಳಿಗೆ ವಾರ್ಷಿಕವಾಗಿ ಸುಮಾರು 3.37 ಕೋಟಿಗಳಷ್ಟು ಹೆಚ್ಚುವರಿ ವೆಚ್ಚವಾದರೂ ಸಹ ಈ ಹುದ್ದೆಗಳ ಸೃಜನೆಯಿಂದ ಕಾರ್ಯ ಕ್ಷಮತೆಯಲ್ಲಿ ಉತ್ತಮ ಪ್ರಗತಿ ಸಾಧಿಸಿ ಸರ್ಕಾರಕ್ಕೆ ಸುಮಾರು 7 ಕೋಟಿಗಳಷ್ಟು ಹೆಚ್ಚುವರಿ ಆದಾಯ ನಿರೀಕ್ಷಿಸಬಹುದಾಗಿದೆ ಎಂದು ಮುಖ್ಯ ವಿದ್ಯುತ್ ಪರಿವೀಕ್ಷಕರವರು ತಿಳಿಸಿರುತ್ತಾರೆ.

ಮುಖ್ಯ ವಿದ್ಯುತ್ ಪರಿವೀಕ್ಷಕರವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಿದ ನಂತರ 50 ತಾಂತ್ರಿಕ ಹುದ್ದೆಗಳನ್ನು ಹಾಗೂ 10 ತಾಂತ್ರಿಕೇತರ ಹುದ್ದೆಗಳನ್ನು ಸೃಜಿಸಲು ತೀರ್ಮಾನಿಸಲಾಗಿದ್ದು, ಆದ್ದರಿಂದ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 47 ಇಇಬಿ 2010, ಬೆಂಗಳೂರು, ದಿನಾಂಕ : 29-06-2012

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಗಮನಿಸಿ ವಿದ್ಯುತ್ ಪರಿವೀಕ್ಷಣಾ ಇಲಾಖೆಗೆ ಈ ಕೆಳಗೆ ನಮೂದಿಸಲಾದ ತಾಂತ್ರಿಕ ಮತ್ತು ತಾಂತ್ರಿಕೇತರ ವೃಂದದ ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ.

ತಾಂತ್ರಿಕ ಹುದ್ದೆಗಳು

ಕ್ರಮ ಸಂಖ್ಯೆ	ಪದನಾಮ	ಹುದ್ದೆಗಳ ಸಂಖ್ಯೆ
1.	ಅಪರ ಮುಖ್ಯ ವಿದ್ಯುತ್ ಪರಿವೀಕ್ಷಕರು ವೇತನ ಶ್ರೇಣಿ (ರೂ. 44,250-60,000)	5
2.	ಉಪ ಮುಖ್ಯ ವಿದ್ಯುತ್ ಪರಿವೀಕ್ಷಕರು	8
3.	ವಿದ್ಯುತ್ ಪರಿವೀಕ್ಷಕರು	4
4.	ಸಹಾಯಕ ವಿದ್ಯುತ್ ಪರಿವೀಕ್ಷಕರು	33
ಒಟ್ಟು		**50**

ತಾಂತ್ರಿಕೇತರ ಹುದ್ದೆಗಳು

ಕ್ರಮ ಸಂಖ್ಯೆ	ಪದನಾಮ	ಹುದ್ದೆಗಳ ಸಂಖ್ಯೆ
1.	ಮ್ಯಾನೇಜರ್	1
2.	ಅಧೀಕ್ಷಕರು	2
3.	ಪ್ರಥಮ ದರ್ಜೆ ಸಹಾಯಕರು	3
4.	ದ್ವಿತೀಯ ದರ್ಜೆ ಸಹಾಯಕರು	4
ಒಟ್ಟು		**10**

ಮೇಲ್ಕಂಡ ಹುದ್ದೆಗಳಿಗೆ ತಗಲುವ ವೆಚ್ಚವನ್ನು ಭರಿಸಲು ಆಯವ್ಯಯದಲ್ಲಿ ಹೆಚ್ಚಿನ ಆರ್ಥಿಕ ಬೆಂಬಲದ ಅವಶ್ಯಕತೆ ಇದ್ದಲ್ಲಿ ಸೂಕ್ತ ಪ್ರಸ್ತಾವನೆಯನ್ನು ಇಲಾಖೆಯು ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 73 ವೆಚ್ಚ-1/2012, ದಿನಾಂಕ : 25-01-2012, ಆಇ 147 ವೆಚ್ಚ-1/2012, ದಿನಾಂಕ : 19-04-2012 ಮತ್ತು ಸಂಖ್ಯೆ : ಆಇ/624/ವೆಚ್ಚ-1/2012, ದಿನಾಂಕ : 19-06-2012 ರಲ್ಲಿ ನೀಡಿದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಸಮೀರ್ ಮಡಿಮನ್

ಪೀಠಾಧಿಕಾರಿ,

ಇಂಧನ ಇಲಾಖೆ.

P.R. 768

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಸಂಜೀವ ಎಂ ಕಾಂಬಳೆ, ಪಿ.ಎಸ್.ಐ., ನಿಪ್ಪಾಣಿ ಶಹರ ಪೊಲೀಸ್ ಠಾಣೆ, ಬೆಳಗಾವಿ ಜಿಲ್ಲೆ, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:

1. ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ, ಇವರ ಆದೇಶ ಸಂಖ್ಯೆ: ಸಿಬ್ಬಂದಿ–2ಎ/ಪಿಆರ್/13/2012 (ಆ.ಪು. ಸಂಖ್ಯೆ: 635/2012) ದಿನಾಂಕ: 04–8–2012
2. ಮೇಲ್ಮನವಿ ಪ್ರಾಧಿಕಾರ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ: ಅಪೀಲು/107/ಉವ/2012 ದಿನಾಂಕ: 22–10–2012
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 20–11–2012
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2) 47/2012–13 ದಿನಾಂಕ: 16–01–2013

ಪ್ರಸ್ತಾವನೆ:

ಶ್ರೀ ಸಂಜೀವ ಎಂ ಕಾಂಬಳೆ, ಪಿ.ಎಸ್.ಐ., ನಿಪ್ಪಾಣಿ ಶಹರ ಪೊಲೀಸ್ ಠಾಣೆ, ಬೆಳಗಾವಿ ಜಿಲ್ಲೆ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಅತೀವ ನಿಷ್ಕಾಳಜಿತನ, ಬೇಜವಾಬ್ದಾರಿತನ, ಹಾಗೂ ಕರ್ತವ್ಯ ಲೋಪವನ್ನು ಎಸಗಿರುವ ಕಾರಣದ ಮೇಲೆ ಇವರ ವಿರುದ್ದ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 7 ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

> " ಅಪಾದಿತ ಪೊಲೀಸ್ ಅಧಿಕಾರಿಯಾದ ನೀವು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ವಸತಿ ಗೃಹಗಳಲ್ಲಿ ನಡೆಯುತ್ತಿರುವ ಅನೈತಿಕ ಸಂಬಂಧಗಳ ಪ್ರಕರಣಗಳನ್ನು ತಡೆಯುವಂತೆ ಸಾಕಷ್ಟು ಬಾರಿ ನಿಮಗೆ ತಿಳಿಸಿದ್ದರೂ ಸಹ ವೇಶ್ಯಾವಾಟಿಕೆಗೆ ಪ್ರಚೋದನೆ ನೀಡುತ್ತಿರುವ ಹೆಣ್ಣು ಮಕ್ಕಳ ಬಗ್ಗೆ ನಿಗಾವಹಿಸಿ ಅನೈತಿಕ ಚಟುವಟಿಕೆಗಳನ್ನು ಹತ್ತಿಕ್ಕಲು ವಿಫಲರಾಗಿದ್ದರಿಂದ ಕೂಡಾ ದಿನಾಂಕ: 12–01–2012 ರಂದು ನಿಪ್ಪಾಣಿ ಶಹರದ ಕೃಷ್ಣ ಲಾಜ್ ದಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿರುವ ಬಗ್ಗೆ ಜಿಲ್ಲಾ ವಿಶೇಷ ಅಪರಾಧ ಘಟಕದ ಅಧಿಕಾರಿಗಳು ಖಚಿತ ಮಾಹಿತಿ ಪಡೆದು ದಾಳಿ ಮಾಡಿ ಅನೈತಿಕ ಚಟುವಟಿಕೆಯಲ್ಲಿ ತೊಡಗಿದವರನ್ನು ಸೆರೆ ಹಿಡಿದಿರುತ್ತಾರೆ. ಇಂತಹ ಚಟುವಟಿಕೆಗಳನ್ನು ತಡೆಯುವಲ್ಲಿ ಸಂಪೂರ್ಣ ವಿಫಲರಾಗಿ ನಿಮ್ಮ ಕರ್ತವ್ಯದಲ್ಲಿ ಅತೀವ ನಿಷ್ಕಾಳಜಿತನ, ಬೇಜವಾಬ್ದಾರಿತನ, ಹಾಗೂ ಕರ್ತವ್ಯ ಲೋಪವನ್ನು ಎಸಗಿರುತ್ತೀರಿ."

ಮೇಲಿನ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 04–08–2012ರ ಆದೇಶದಲ್ಲಿ ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮುಂಬರುವ ವಾರ್ಷಿಕ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರದಂತೆ ಮೂರು ತಿಂಗಳ ಕಾಲ ಮುಂದೂಡಲಾದ ದಂಡನೆಯನ್ನು ವಿಧಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 22–10–2012ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕರ್ತವ್ಯದಲ್ಲಿ ಅತೀವ ನಿಷ್ಕಾಳಜಿತನ, ಬೇಜವಾಬ್ದಾರಿತನ, ಹಾಗೂ ಕರ್ತವ್ಯ ಲೋಪ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 128 ಪೊಸಿಅ 2012 ಬೆಂಗಳೂರು, ದಿನಾಂಕ: 15.07.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಂಜೀವ ಎಂ ಕಾಂಬಳೆ, ಪಿ.ಎಸ್.ಐ., ನಿಪ್ಪಾಣಿ ಶಹರ ಪೊಲೀಸ್ ಠಾಣೆ, ಬೆಳಗಾವಿ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

P.R. 793

SC – 30

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವಾಲಯ

ವಿಷಯ: ಶ್ರೀ ಸಿ.ಎಸ್. ಜಯರಾಮ್, ಉಪ ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ – ಪ್ರಸ್ತುತ ನಿಯೋಜನೆ ಮೇರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ: (1) ಕಾರಣ ಕೇಳುವ ನೋಟೀಸ್ ಸಂಖ್ಯೆ: ಸಕಇ 199 ಪಕಸೇ 2003, ದಿನಾಂಕ:30.11.2004 ಮತ್ತು ದಿನಾಂಕ:05.04.2008

(2) ಶ್ರೀ ಸಿ.ಎಸ್.ಜಯರಾಮ್ ಇವರ ಸಮಜಾಯಿಷಿ ಮನವಿ ದಿನಾಂಕ:19.9.2005.

(3) ಸರ್ಕಾರಿ ಆದೇಶ ಸಂಖ್ಯೆ:ಸಕಇ 199 ಪಕಸೇ 2003, ದಿನಾಂಕ:16.09.2006.

(4) ಶ್ರೀ ಟಿ.ಎಸ್.ಪಾಲನೇತ್ರ, (ನಿವೃತ್ತ ಜಿಲ್ಲಾ ನ್ಯಾಯಾಧೀಶರು)ವಿಚಾರಣಾಧಿಕಾರಿ, ಇವರ ಅಂತಿಮ ವರದಿ ದಿನಾಂಕ:08.10.2007.

(5) ಅನಧಿಕೃತ ಟಿಪ್ಪಣಿ ಸಂಖ್ಯೆ:ಸಕಇ 199 ಪಕಸೇ 2003, ದಿನಾಂಕ:19.10.2010.

(6) ಸರ್ಕಾರದ ಅಧಿಸೂಚನೆ ಸಂಖ್ಯೆ:ಸಕಇ 199 ಪಕಸೇ 2003, ದಿನಾಂಕ:19.10.2010.

(7) ಸರ್ಕಾರದ ಅಧಿಸೂಚನೆ ಸಂಖ್ಯೆ:ಪಿಡಿ 94 ಎಸ್ಎಸ್ಎಂ 2011, ದಿನಾಂಕ:08.07.2011.

(8) ಸರ್ಕಾರದ ಪತ್ರ ಸಂಖ್ಯೆ:ಯೋಇ 122 ಎಸ್ಎಸ್ಎಂ 2011, ದಿನಾಂಕ:05.07.2012.

(9) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ:ಪಿಎಸ್‌ಸಿ 79 ಸಿಎನ್ಎಸ್ 12, ದಿನಾಂಕ:29.09.2012.

ಪ್ರಸ್ತಾವನೆ:

ಶ್ರೀ ಸಿ.ಎಸ್.ಜಯರಾಮ್, ಉಪ ನಿರ್ದೇಶಕರು ಇವರು ಮೂಲತ: ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯ ಅಧಿಕಾರಿಯಾಗಿದ್ದು, ಇವರು ದಿನಾಂಕ:16–01–1998 ರಿಂದ 05–03–2003ರವರೆಗೆ ನಿಯೋಜನೆ ಮೇರೆಗೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಕೋಲಾರ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಸಮಾಜ ಕಲ್ಯಾಣ ಆಯುಕ್ತರ ನೇತೃತ್ವದಲ್ಲಿ ಕೇಂದ್ರ ಕಛೇರಿಯ ಇತರೆ ಸಿಬ್ಬಂದಿಗಳ ತನಿಖಾ ತಂಡವು ಅನಿರೀಕ್ಷಿತ ಭೇಟಿ ನೀಡಿ ಕೂಲಂಕಷವಾಗಿ ಇಲಾಖೆಯ ಎಲ್ಲಾ ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಿರುವ ಬಗ್ಗೆ ವಿವರವಾಗಿ ಪರಿಶೀಲನೆ ಮಾಡಿ ಸದರಿ ಅಧಿಕಾರಿಯವರು ಕೆಳಕಂಡ 18 ಲೋಪಗಳನ್ನು ಎಸಗಿರುವುದಾಗಿ ವರದಿ ಮಾಡಿರುತ್ತದೆ.

1. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಯೋಜನೆ/ಯೋಜನೇತರ ಅಡಿಯಲ್ಲಿ ಒದಗಿಸಿದ್ದ ಹಣದಲ್ಲಿ ಉಳಿದ ರೂ.56.45 ಲಕ್ಷಗಳಿಗೆ ಲೆಕ್ಕ ಇಡದೆ ದುರುಪಯೋಗ ಮಾಡಿರುವುದು.
2. ಭಾರತ ಸರ್ಕಾರದ ವಿದ್ಯಾರ್ಥಿ ವೇತನಕ್ಕೆ ಬಿಡುಗಡೆಯಾದ ಹಣದಲ್ಲಿ ನಿಯಮಗಳನ್ನು ಉಲ್ಲಂಘಿಸಿ ರೂ.6.92ಲಕ್ಷಗಳನ್ನು ಜನತಾ ಬಜಾರ್ ಬಿಲ್ಲುಗಳನ್ನು ಪಾವತಿಸಿರುವುದು.
3. ಜಿಲ್ಲಾ ವಲಯ ಯೋಜನೆಯಡಿ ನಿಗದಿಯಾದ 100 ಲಕ್ಷ ರೂಗಳ ಬದಲಿಗೆ ರೂ.105.80 ಲಕ್ಷಗಳನ್ನು ಖರ್ಚು ಮಾಡಿರುವುದು.
4. ಕಾಲೇಜು ನಿರ್ವಹಣಾ ವೆಚ್ಚಕ್ಕೆ ನಿಗದಿಯಾದ ಹಣದಲ್ಲಿ ಇತರೆ ಬಾಬ್ತು ಪಾವತಿಸುವ ಸಂಬಂಧ ಬಿಲ್ಲುಗಳಿಗೆ ಮೇಲು ಸಹಿ ಮಾಡಿರುವುದು ಹಾಗೂ ಕಾಲೇಜು ವಿದ್ಯಾರ್ಥಿಗಳ ನಿರ್ವಹಣಾ ವೆಚ್ಚಕ್ಕಾಗಿ ಒದಗಿಸಿದ್ದ ಮೊತ್ತದಲ್ಲಿ ರೂ.13,41,100/–ಗಳ ಖರೀದಿಗಳನ್ನು ಟೆಂಡರ್ ಕರೆಯದೇ ಮತ್ತು ಆಡಳಿತಾತ್ಮಕ ಮಂಜೂರಾತಿ ಪಡೆಯದೇ ಖರೀದಿಸಿರುವುದು.
5. ಭಾರತ ಸರ್ಕಾರದ ವಿದ್ಯಾರ್ಥಿ ವೇತನ ಯೋಜನೆಯಡಿ ಬಿಡುಗಡೆಯಾದ ರೂ.56.45 ಲಕ್ಷಗಳನ್ನು ಖರ್ಚು ಮಾಡದೆ ವ್ಯಪಗತವಾಗಲು ಅವಕಾಶ ಮಾಡಿರುವುದು.
6. ಕೋಟೇಷನ್ ಟೆಂಡರ್ ಪಡೆಯದೆ ಜಿಲ್ಲಾ ಪಂಚಾಯತ್‌ನಿಂದ ಅನುಮೋದನೆ ಪಡೆಯದೇ ಪ್ರಿಂಟ್ ಮಾಡಿಸಿ ದಾಸ್ತಾನು ಪಡೆಯದೇ ರೂ.97,750/– ರೂ.ಚೆಕ್‌ನ್ನು ವಿದ್ಯಾರ್ಥಿ ವೇತನದ ಹಣದಲ್ಲಿ ಮೆ:ಮುಂಗೋಳಿಪ್ರಿಂಟರ್ಸ್ ಗೌರಿಪೇಟೆಗೆ ನೀಡಿರುವುದು.
7. ಪಿ.ಹೆಚ್.ಡಿ.ವ್ಯಾಸಂಗದ ವಿದ್ಯಾರ್ಥಿಗಳ ಸಹಾಯ ಧನವನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಹಣದಲ್ಲಿ ಪಾವತಿಸಿ ನಿಯಮಗಳನ್ನು ಉಲ್ಲಂಘಿಸಿರುವುದು.
8. ಕು.ಮಂಜುಳಾರವರಿಗೆ ವಾರ್ಷಿಕ 2,300/–ರೂಗಳ ಬೋಧನಾ ವೆಚ್ಚಕ್ಕೆ ಬದಲಾಗಿ ರೂ.6,240/–ಗಳನ್ನು ಹೆಚ್ಚುವರಿಯಾಗಿ ಮಂಜೂರು ಮಾಡಿ ನಿಯಮ ಉಲ್ಲಂಘಿಸಿರುವುದು.
9. ಸ್ಟುಡಿಯೋ ಇರುವ ಸ್ಥಳದಲ್ಲಿ 33 ಅಭ್ಯರ್ಥಿಗಳಿಗೆ ತರಬೇತಿ ನೀಡಲು ಅವಕಾಶವಿಲ್ಲ ಹಾಗೂ ತರಬೇತಿ ನೀಡಿರುವ ಬಗ್ಗೆ ದೃಢಪಟ್ಟಿಲ್ಲದ ಕಾರಣ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು.
10. 8 ವಿದ್ಯಾರ್ಥಿ ನಿಲಯ ಕಟ್ಟಡಕ್ಕೆ ಬಿಡುಗಡೆಯಾದ ಸುಮಾರು 76 ಲಕ್ಷ ರೂ.ಗಳನ್ನು ಕರ್ನಾಟಕ ಭೂಸೇನಾ ನಿಗಮಕ್ಕೆ ನೀಡಿ ಅನಾವಶ್ಯಕವಾಗಿ ಸಂಸ್ಥೆಯಲ್ಲಿ ಬಾಕಿ ಉಳಿಯಲು ಜವಾಬ್ದಾರರಾಗಿರುವುದು.
11. 95–96ರ ಸಾಲಿನಲ್ಲಿ ಮಿನಿ ಅಂಬೇಡ್ಕರ್ ಭವನಕ್ಕಾಗಿ ಶ್ರೀನಿವಾಸಪುರಕ್ಕೆ ಹಾಗೂ 98–99ರ ಸಾಲಿನಲ್ಲಿ ಮಾಲೂರಿಗೆ ಮಂಜೂರಾಗಿದ್ದು ಇದುವರೆಗೂ ನಿವೇಶನಗಳನ್ನು ಪಡೆಯದೇ ಕರ್ತವ್ಯಲೋಪ ಎಸಗಿರುವುದು.
12. ಅಂತರ ಜಾತಿ ವಿವಾಹದ ಪರಿಹಾರ ಧನ ರೂ.20.00 ಲಕ್ಷಗಳಲ್ಲಿ ರೂ.9.75 ಲಕ್ಷಗಳನ್ನು ಬಿಡುಗಡೆ ಮಾಡಿದ್ದು ಉಳಿದ ಹಣವನ್ನು ಉಳಿತಾಯ ಖಾತೆಯಲ್ಲಿ ಇರಿಸಿಕೊಂಡು ಕಾರ್ಯಕ್ರಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿರುವುದಿಲ್ಲ.
13. ಕಛೇರಿ ಆಡಳಿತದಲ್ಲಿ ನಿರ್ಲಕ್ಷ್ಯ ತೋರಿ, ಜಿಲ್ಲೆಯ ಆಡಳಿತ ಕುಂಠಿತಗೊಳಿಸಿರುವುದು.
14. ದಿನಾಂಕ:05.02.2003 ರಿಂದ 01.06.2003 ರವರೆಗೆ ಅಮಾನತ್ತಿನಲ್ಲಿದ್ದರೂ ಸಹ ಕಛೇರಿಯಿಂದ ಕಡತಗಳನ್ನು ಅನಧಿಕೃತವಾಗಿ ತರಿಸಿಕೊಂಡು ಹಿಂದಿನ ದಿನಾಂಕಕ್ಕೆ ಅಂದರೆ 1.6.2003ಕ್ಕೆ ಜಾರಿಗೆ ಬರುವಂತೆ ದಿನಾಂಕ:01.07.84ರ ನಂತರ ನೇಮಕಾತಿಗೊಂಡಿರುವ ಸಾಂದರ್ಭಿಕ ನೌಕರರಿಗೆ ಕನಿಷ್ಠ ವೇತನ ನಿಗದಿಪಡಿಸಿ ಆದೇಶಿಸಿರುವುದು.

15. 2001–02 ಮತ್ತು 2002–03ನೇ ಸಾಲಿನಲ್ಲಿ ಪ್ರವಾಸದ ಮಾಹಿತಿ, ಆದೇಶ ಮತ್ತು ವಿವರಗಳನ್ನು ನೀಡದೆ ಪ್ರವಾಸ ಭತ್ಯೆಉಪಯೋಗಿಸಿ–ಕೊಂಡಿರುವುದು ಸಂಶಯಾಸ್ಪದವಾಗಿರುತ್ತದೆ. ಅಲ್ಲದೆ ಕಛೇರಿಗೆ 10 ದಿನಪತ್ರಿಕೆಗಳನ್ನು ತರಿಸಿ ಸರ್ಕಾರದ ಹಣ ದುರುಪಯೋಗ ಪಡಿಸಿರುವುದು.
16. ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಬೋಧನಾ ವೆಚ್ಚ ಭರಿಸಲು ಅವಕಾಶವಿಲ್ಲದಿದ್ದರೂ ಸಹ ಬೋಧನಾ ವೆಚ್ಚ ರೂ.25,000/–ಗಳ ಬಿಲ್ಲನ್ನು ಮೇಲು ಸಹಿ ಮಾಡಿರುವುದು.
17. ದಿನಾಂಕ:29.01.90ರಲ್ಲಿ ದಿನಗೂಲಿ ಆಧಾರದ ಮೇಲೆ ನೇಮಕಾತಿಯನ್ನು ಮಾಡಬಾರದೆಂದು ಸೂಚನೆ ಇದ್ದಾಗ್ಯೂ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ನೌಕರರಿಗೆ ಕನಿಷ್ಠ ವೇತನ ನಿಗದಿಪಡಿಸಿ ಆದೇಶಿಸಿರುವುದು.
18. ಚಿಕ್ಕಬಳ್ಳಾಪುರದ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ನಿಯಮಗಳನ್ನು ಉಲ್ಲಂಘಿಸಿ ರೂ.1,65,855/–ಗಳ ಸಾಮಗ್ರಿಗಳನ್ನು ವಿಟಗಡ್ಡಪಲ್ಲಿ ಬಳಕೆದಾರರ ಸಹಕಾರ ಸಂಘ, ಜನತಾ ಬಜಾರ್(ನಿ),ಬಾಗೇಪಲ್ಲಿ ತಾಲ್ಲೂಕು ಇವರಿಂದ ಖರೀದಿಸಿ ನೀಡುವಂತೆ ದಿನಾಂಕ: 10–10–2002ರಲ್ಲಿ ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿ, ಚಿಕ್ಕಬಳ್ಳಾಪುರ ಇವರಿಗೆ ಸೂಚಿಸಿರುವುದು.

ಮೇಲೆ ಓದಲಾದ ಕ್ರ.ಸಂ.(1)ರಲ್ಲಿ ಶ್ರೀ ಸಿ.ಎಸ್.ಜಯರಾಮ್ ಇವರ ವಿರುದ್ಧ ಮಾಡಲಾದ ಆರೋಪಗಳಿಗೆ ಲಿಖಿತ ಹೇಳಿಕೆಯನ್ನು ನೀಡುವಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ಅಡಿ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ಶ್ರೀ ಸಿ.ಎಸ್.ಜಯರಾಮ್ ಇವರ ಮೇಲಿನ ಆರೋಪಗಳನ್ನು ಅಲ್ಲಗಳೆದಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(3)ರಲ್ಲಿ ಶ್ರೀ ಸಿ.ಎಸ್.ಜಯರಾಮ್ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಟಿ.ಎಸ್.ಪಾಲನೇತ್ರ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(4)ರಲ್ಲಿ ಈ ಪ್ರಕರಣವನ್ನು ಕುರಿತು ವಿಚಾರಣಾಧಿಕಾರಿಯವರು ತಮ್ಮ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುತ್ತಾ, ಶ್ರೀ ಸಿ. ಎಸ್.ಜಯರಾಮ್ ಇವರ ವಿರುದ್ಧ ಮಾಡಲಾದ ಆರೋಪಗಳಲ್ಲಿ ಕ್ರಮ ಸಂಖ್ಯೆ:1 ರಿಂದ 8 ಹಾಗೂ 15 ರಿಂದ 17ರಲ್ಲಿನ ಆರೋಪಗಳು ಸಾಬೀತಾಗಿದ್ದು, ಕ್ರಮ ಸಂಖ್ಯೆ: 9 ರಿಂದ 14 ಹಾಗೂ 18ರಲ್ಲಿ ನಮೂದಿಸಿರುವ ಆರೋಪಗಳು ಸಾಬೀತಾಗಿರುವುದಿಲ್ಲ ಎಂಬುದಾಗಿ ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(5)ರಲ್ಲಿ ಓದಲಾದ ಅನಧಿಕೃತ ಟಿಪ್ಪಣಿಯೊಂದಿಗೆ ಪ್ರಕರಣದ ಪೂರ್ಣ ದಾಖಲೆಗಳನ್ನು ಲಗತ್ತಿಸಿ ಸಮಾಜ ಕಲ್ಯಾಣ ಇಲಾಖೆಯು ಸೂಕ್ತ ಕ್ರಮವಹಿಸುವಂತೆ ಕೋರಿ ಪ್ರಸ್ತಾವನೆ ಕಳುಹಿಸಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(6)ರಲ್ಲಿನ ಅಧಿಸೂಚನೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಶ್ರೀ ಸಿ.ಎಸ್.ಜಯರಾಮ್ ಇವರ ಸೇವೆಯನ್ನು ಯೋಜನಾ ಇಲಾಖೆಗೆ ಹಿಂತಿರುಗಿಸುತ್ತಾ, ಸದರಿ ಪ್ರಸ್ತಾವನೆಯಲ್ಲಿ ವಜಾಗೊಳಿಸಲು ಶಿಫಾರಸ್ಸು ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(7)ರಲ್ಲಿ ಶ್ರೀ ಸಿ.ಎಸ್.ಜಯರಾಮ್, ಉಪ ನಿರ್ದೇಶಕರು, ಇವರನ್ನು ನಿಯೋಜನೆ ಮೇರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯನಿರ್ವಹಣಾಧಿಕಾರಿ, ಬಾಗೇಪಲ್ಲಿ ಹುದ್ದೆಗೆ ನೇಮಿಸುವ ಸಲುವಾಗಿ ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(8)ರಲ್ಲಿ ಸದರಿಯವರ ವಿರುದ್ಧ ಮಾಡಲಾದ ಆರೋಪ ಸಂಖ್ಯೆ: 1 ರಿಂದ 8, 15 ರಿಂದ 17 ಆರೋಪಗಳು ಸಾಬೀತಾಗಿದ್ದು, ಸರ್ಕಾರಕ್ಕೆ ಇವರಿಂದ ಒಟ್ಟು ರೂ.166.93 ಲಕ್ಷಗಳು ನಷ್ಟವಾಗಿರುವುದು ದೃಢಪಟ್ಟಿರುವುದರಿಂದ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಶಿಫಾರಸ್ಸಿನ ಮೇರೆಗೆ ಶ್ರೀ ಸಿ.ಎಸ್.ಜಯರಾಮ್, ಗ್ರೂಪ್–ಎ ಅಧಿಕಾರಿಯಾಗಿದ್ದು, ಇವರನ್ನು ಸೇವೆಯಿಂದ ವಜಾಗೊಳಿಸುವ ಬಗ್ಗೆ ಕರ್ನಾಟಕ ಲೋಕಸೇವಾ ಆಯೋಗದ ಸಹಮತಿ ಕೋರಲಾಯಿತು.

ಮೇಲೆ ಓದಲಾದ ಕ್ರ.ಸಂ.(9)ರಲ್ಲಿ ಇವರನ್ನು ಸೇವೆಯಿಂದ ವಜಾಗೊಳಿಸಲು ಕರ್ನಾಟಕ ಲೋಕಸೇವಾ ಆಯೋಗವು ಸಹಮತಿ ನೀಡಿದೆ.

ಮೇಲೆ ವಿವರಿಸಿರುವ ಹಿನ್ನೆಲೆಯಲ್ಲಿ ಶ್ರೀ ಸಿ.ಎಸ್.ಜಯರಾಮ್, ಉಪ ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಇವರನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957ರ ನಿಯಮ 8 (viii) ರಡಿ ಸೇವೆಯಿಂದ ವಜಾಗೊಳಿಸಲು ಮತ್ತು ರೂ.166.93 ಲಕ್ಷ ವಸೂಲಿ ಮಾಡಲು ಪ್ರಸ್ತಾಪಿತ ಅಧಿಕಾರಿ ವಿರುದ್ಧ ಸಿವಿಲ್ ದಾವೆ ಹೂಡಲು ಸಚಿವ ಸಂಪುಟ ಅನುಮೋದನೆ ನೀಡಿರುತ್ತದೆ.

ಅದರಂತೆ ಈ ಆದೇಶ ಹೊರಡಿಸಲಾಗಿದೆ.

ಸರ್ಕಾರಿ ಆದೇಶ ಸಂಖ್ಯೆ:ಪಿಡಿ 122 ಎಸ್‌ಎಸ್‌ಎಂ 2010, ಬೆಂಗಳೂರು, ದಿನಾಂಕ: 22.02.2013.

ಶ್ರೀ ಸಿ.ಎಸ್.ಜಯರಾಮ್, (ಉಪ ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು), ಪ್ರಸ್ತುತ ನಿಯೋಜನೆ ಮೇರೆಗೆ ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯತ್, ಬಾಗೇಪಲ್ಲಿ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇವರು ಈ ಹಿಂದೆ ದಿನಾಂಕ:16–01–1998 ರಿಂದ 05–03–2003ರವರೆಗೆ ನಿಯೋಜನೆ ಮೇರೆಗೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಕೋಲಾರ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದ ಲೋಪಗಳ ಹಿನ್ನೆಲೆಯಲ್ಲಿ ಸದರಿ ಅಧಿಕಾರಿಯ ವಿರುದ್ಧ ಮಾಡಲಾದ ಆರೋಪಗಳು ಸಾಭೀತಾಗಿದ್ದು, ಸರ್ಕಾರಕ್ಕೆ ಇವರಿಂದ ಒಟ್ಟು ರೂ.166.93 ಲಕ್ಷಗಳು ನಷ್ಟವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957ರ ನಿಯಮ 8 (viii) ರಡಿ ಇವರನ್ನು ಕೂಡಲೇ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸಲಾಗಿದೆ.

ಸದರಿ ಅಧಿಕಾರಿಯಿಂದ ರೂ.166.93 ಲಕ್ಷ ಮೊತ್ತವನ್ನು ವಸೂಲಿ ಮಾಡಲು ಪ್ರಸ್ತಾಪಿತ ಅಧಿಕಾರಿ ವಿರುದ್ಧ ನ್ಯಾಯಾಲಯದಲ್ಲಿ ಸಿವಿಲ್ ದಾವೆ ಹೂಡಲು ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು ಇವರು ಅಗತ್ಯ ಮುಂದಿನ ಕ್ರಮಕೈಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಜ್ಯೋತಿ ಆರ್.ಜೆ.

ಸರ್ಕಾರದ ಅಧೀನ ಕಾರ್ಯದರ್ಶಿ,

PR.675

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, (ಎಸ್–5)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಇವರುಗಳ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್‌ಸ್ಥಾಪಿಸುವ ಬಗ್ಗೆ.

ಓದಲಾಗಿದೆ : 1) ಪತ್ರ ಸಂಖ್ಯೆ: ಲೋಕ್/ ಐಎನ್‌ವಿ(ಜಿ)/ಸಿಟಿ/ಕ್ರೈಂ.32/2012 ದಿನಾಂಕ 30–04–2012.

2) ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 3 ಸೇಇವಿ 2012 ದಿನಾಂಕ 16–05–2012.

3) ಪತ್ರ ಸಂಖ್ಯೆ: ಲೋಕ್/ ಐಎನ್‌ವಿ(ಜಿ)/ಸಿಟಿ/ಕ್ರೈಂ.32/2012 ದಿನಾಂಕ 10–09–2012.

4) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 3 ಸೇಇವಿ 2012 ದಿನಾಂಕ 04-01–2013.

5) ಪತ್ರ ಸಂಖ್ಯೆ: ಲೋಕ್/ ಐಎನ್‌ವಿ(ಜಿ)/ಸಿಟಿ/ಕ್ರೈಂ.32/2012 ದಿನಾಂಕ 07–02–2013.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಾಂಕ (1)ರ ಪತ್ರದಲ್ಲಿ ಅಪರ ಪೋಲಿಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಇವರು ಶ್ರೀ ಕೆ. ಮಂಜುನಾಥ್, ಗುತ್ತಿಗೆದಾರರು, ಗೋವಿಂದಪುರ, ಬೆಂಗಳೂರು ಇವರು ಲೋಕಾಯುಕ್ತ ಪೋಲಿಸ್ ಠಾಣೆಗೆ ಹಾಜರಾಗಿ ನೀಡಿದ ದೂರಿಗೆ ಸಂಬಂಧಪಟ್ಟಂತೆ ಪ್ರಕರಣದ ಆರೋಪಿ–1 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆರೋಪಿ–2 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ ಇವರುಗಳ ವಿರುದ್ಧದ ಭ್ರಷ್ಟಾಚಾರದ ಆಪಾದನೆಗಳು ಇದುವರೆಗೆ ದೊರೆತಿರುವ ಸಾಕ್ಷ್ಯಾಧಾರಗಳಿಂದ ಸಾಬೀತಾಗಿರುವುದರಿಂದ, ಆರೋಪಿತರುಗಳು ತಮ್ಮ ಸ್ಥಾನದಲ್ಲಿಯೇ ಮುಂದುವರೆದರೆ ತನಿಖೆಯ ಹಾದಿಯನ್ನು ತಪ್ಪಿಸುವ ಮತ್ತು ಸಾಕ್ಷ್ಯಾಧಾರಗಳನ್ನು ನಾಶಪಡಿಸುವ ಅವಕಾಶಗಳಿರುವುದರಿಂದ, ಸದರಿ ಅಧಿಕಾರಿಗಳನ್ನು ಸರ್ಕಾರಿ ಸೇವೆಯಿಂದ ತಕ್ಷಣದಿಂದಲೇ ಅಮಾನತ್ತಿನಲ್ಲಿಡಲು ಶಿಫಾರಸ್ಸು ಮಾಡಿ ಇವರ ಲೀನ್ (ಸ್ಥಾನ) ವನ್ನು ಕೂಡ ಬೇರೆ ಕಡೆಗೆ ವರ್ಗಾಯಿಸಲು ಕೋರಿದ್ದಾರೆ.

ಮೇಲಿನ ಕ್ರಮಾಂಕ(2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ ಇವರುಗಳು ದಿನಾಂಕ: 25–04–2012 ರಂದು ಅಕ್ರಮ ಸಂಭಾವನೆ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದು ಮತ್ತು 48 ಗಂಟೆಗಳಿಗೂ ಮೀರಿ ಹೆಚ್ಚಿನ ಅವಧಿಗೆ ನ್ಯಾಯಾಂಗ ಬಂಧನದಲ್ಲಿದ್ದುದರಿಂದ ಇವರುಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು, ದಿನಾಂಕ 25–04–2012 ರಿಂದಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 10(2)(ಎ)ರೊಡನೆ ಓದಿಕೊಂಡು ಅದೇ ನಿಯಮಾವಳಿಯ ನಿಯಮ 10(1)(ಅ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಇವರುಗಳನ್ನು ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ ಮತ್ತು ಸದರಿ ಅಧಿಕಾರಿಗಳ ಲೀನ್‌ನ್ನು ಕಂದಾಯ ಇಲಾಖೆಯಿಂದ ಸಿಆಸುಇ ಇಲಾಖೆಗೆ ಹಿಂಪಡೆಯಲಾಗಿದೆ.

ಮೇಲಿನ ಕ್ರಮಾಂಕ(3) ರಲ್ಲಿ ಓದಲಾದ ಅಪರ ಪೋಲಿಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಇವರ ಪತ್ರದಲ್ಲಿ ಪ್ರಕರಣದ ಆರೋಪಿ–1 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆರೋಪಿ–2 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ ಇವರುಗಳು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988ರ ಕಲಂ 7, 13(1)(ಡಿ) ಸಹವಾಚನ 13(2) ರಡಿ ಶಿಕ್ಷಾರ್ಹ ಅಪರಾಧವೆಸಗಿರುವುದು ತನಿಖೆಯಿಂದ ಧೃಢಪಟ್ಟಿರುವುದರಿಂದ ಆರೋಪಿತರಗಳು ಸಕ್ಷಮ ನ್ಯಾಯಾಲಯದಲ್ಲಿ ಅಭಿಯೋಜನೆಗೊಳಪಡಿಸಲು ಅರ್ಹರಾಗಿದ್ದು, ಈ ಸಂಬಂಧ ಆರೋಪಿತರ ಸಕ್ಷಮ ಪ್ರಾಧಿಕಾರದ ಅರ್ಥಾತ್ ತನ್ನ ಹುದ್ದೆಯಿಂದ ತೆಗೆದು ಹಾಕುವ/ ವಜಾ ಮಾಡುವ ಅಧಿಕಾರವುಳ್ಳ ಪ್ರಾಧಿಕಾರದ ಪೂರ್ವಾನುಮತಿ ಅಗತ್ಯವಿದ್ದು, ಆದ್ದರಿಂದ ಆರೋಪಿ–1 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆರೋಪಿ–2 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ ಇವರುಗಳನ್ನು ಅಭಿಯೋಜನೆಗೆ ಒಳಪಡಿಸಲು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988ರ ಕಲಂ 19(1)ಬಿ)ರನ್ವಯ ಮಂಜೂರಾತಿಯನ್ನು ನೀಡಲು ಕೋರಿರುತ್ತಾರೆ.

ಮೇಲಿನ ಕ್ರಮಾಂಕ (4)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಇವರುಗಳು ಭ್ರಷ್ಟಾಚಾರ ಪ್ರತಿಬಂಧಕ ಕಾಯಿದೆ, 1988ರ ಕಲಂ 7, 13(1)(ಡಿ) ಸಹವಾಚನ 13(2)ರಡಿ ಶಿಕ್ಷಾರ್ಹ ಅಪರಾಧ ಎಸಗಿರುವುದು ಮೇಲ್ನೋಟಕ್ಕೆ ದೃಢಪಟ್ಟಿರುವುದರಿಂದ ಈ ಅಧಿಕಾರಿಗಳನ್ನು ಹುದ್ದೆಯಿಂದ ತೆಗೆದುಹಾಕುವ (ವಜಾ ಮಾಡುವ) ಅಧಿಕಾರವುಳ್ಳ ಸಕ್ಷಮ ಪ್ರಾಧಿಕಾರವಾದ ಸರ್ಕಾರವು ಇವರುಗಳನ್ನು ಭ್ರಷ್ಟಾಚಾರ ಪ್ರತಿಬಂಧಕ ಕಾಯಿದೆ, 1988ರ ಕಲಂ 19(1)(ಬಿ)ರನ್ವಯ ಸಕ್ಷಮ ನ್ಯಾಯಾಲಯದಲ್ಲಿ ಅಭಿಯೋಜನೆಗೊಳಪಡಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲಿನ ಕ್ರಮಾಂಕ (5)ರಲ್ಲಿ ಓದಲಾದ ಹೆಚ್ಚುವರಿ ಪೋಲಿಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದಲ್ಲಿ, ಆರೋಪಿ–1 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆರೋಪಿ–2 ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ ಇವರುಗಳನ್ನು ಅಮಾನತ್ತಿನಿಂದ ಬಿಡುಗಡೆ ಮಾಡಿ ಸೇವೆಗೆ ಪುನರ್‌ಸ್ಥಾಪಿಸುವ ಬಗ್ಗೆ ತಮಗೆ ಸೂಕ್ತವೆನಿಸುವ ಕ್ರಮವನ್ನು ತೆಗೆದುಕೊಳ್ಳ ಬಹುದಾಗಿದ್ದು, ಆರೋಪಿತರುಗಳನ್ನು ಅಮಾನತ್ತಿನಿಂದ ತೆರವುಗೊಳಿಸಿದ್ದಲ್ಲಿ, ಕೃತ್ಯ ನಡೆದ ಸ್ಥಳದಿಂದ ಬೇರೆ ಕಡೆಗೆ ನೇಮಿಸುವಂತೆ ಹಾಗೂ ಈ ಬಗ್ಗೆ ತೆಗೆದುಕೊಂಡ ಕ್ರಮದ ಮಾಹಿತಿಯನ್ನು ಲೋಕಾಯುಕ್ತ ಕಛೇರಿಗೆ ಒದಗಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 3 ಸೇಇವಿ 2012 ಬೆಂಗಳೂರು, ದಿನಾಂಕ 18ನೇ ಮೇ 2013.

ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಇವರುಗಳನ್ನು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 3 ಸೇಇವಿ 2012, ದಿನಾಂಕ 16–5–2012ರಲ್ಲಿ ಸೇವೆಯಿಂದ ಅಮಾನತ್ತಿನಲ್ಲಿಡಲಾಗಿತ್ತು. ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ ಕರ್ನಾಟಕ ಸರ್ಕಾರದ ಸಚಿವಾಲಯ ಇವರುಗಳ ಅಮಾನತ್ತನ್ನು ತೆರವುಗೊಳಿಸಿ ಇವರನ್ನು ಮತ್ತೆ ಸೇವೆಗೆ ಪುನರ್‌ಸ್ಥಾಪಿಸಲು ಸರ್ಕಾರವು

ತೀರ್ಮಾನಿಸಿರುವುದರಿಂದ, 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳ ನಿಯಮ 10(5)(ಸಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಮತ್ತು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ಸರ್ಕಾರದ ಸಚಿವಾಲಯ ಇವರುಗಳ ವಿರುದ್ಧ ಶಿಸ್ತಿನ ಕ್ರಮವನ್ನು ಬಾಕಿ ಇಟ್ಟು ಇವರುಗಳ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ ಇವರುಗಳನ್ನು ಈ ಮೂಲಕ ಸೇವೆಗೆ ಪುನರ್‌ಸ್ಥಾಪಿಸಿ ಆದೇಶಿಸಿದೆ.

ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಶ್ರೀ ಎಂ. ವೆಂಕಟೇಶಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಇವರುಗಳನ್ನು ಸೂಕ್ತ ಹುದ್ದೆಗೆ ನಿಯುಕ್ತಿಗೊಳಿಸಲು ಪ್ರತ್ಯೇಕವಾಗಿ ಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಚಂದ್ರಶೇಖರ

ಸರ್ಕಾರದ ಅಧೀನ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–6)

PR.756

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಹೆಚ್.ಟಿ. ಜಯರಾಮಯ್ಯ, ಪಿ.ಐ., ಡಿ.ಸಿ.ಆರ್.ಬಿ., ಚಾಮರಾಜನಗರ ಜಿಲ್ಲೆ, ಇವರ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಇವರ ಆದೇಶ ಸಂಖ್ಯೆ: ಸಿಬಿ(8)72/2012–13 ದಿನಾಂಕ: 07–12–2012
2) ಅರ್ಜಿದಾರರ ಮೇಲ್ಮನವಿ ಅರ್ಜಿ ದಿನಾಂಕ: 17–01–2013
3) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿಬಿ(8)72/2012–13 ದಿನಾಂಕ: 08–3–2013

ಪ್ರಸ್ತಾವನೆ:

ಶ್ರೀ ಹೆಚ್.ಟಿ. ಜಯರಾಮಯ್ಯ, ಪಿ.ಐ., ಡಿ.ಸಿ.ಆರ್.ಬಿ., ಚಾಮರಾಜನಗರ ಜಿಲ್ಲೆ, ಇವರು ಈ ಹಿಂದೆ ನಂದಿನಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಅತಿಯಾದ ದುರ್ನಡತೆ ಹಾಗೂ ನಿರ್ಲಕ್ಷ್ಯತೆಯನ್ನು ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

i. ಆ.ಪೊ.ಅ. ಆದ ನೀವು ಈ ಹಿಂದೆ ನಂದಿನಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಾಗ ಶ್ರೀಮತಿ ಹೆಚ್.ವಿ. ನಾಗರತ್ನಮ್ಮ ಕೋಂ ಶ್ರೀ ಕೆ. ಕೃಷ್ಣಾಚಾರ್ ರವರು ನಂದಿನಿ ಪೊಲೀಸ್ ಠಾಣೆಗೆ ತೆರಳಿ ನೀಡಿರುವ ದೂರನ್ನು ಪರಿಶೀಲಿಸಿ, ಕಾನೂನು ರೀತ್ಯಾ ಕ್ರಮ ಜರುಗಿಸದೇ ಕರ್ತವ್ಯದಲ್ಲಿ ನಿರ್ಲಕ್ಷ್ಯತೆ, ಅಧಿಕಾರ ದುರುಪಯೋಗ, ದುರ್ನಡತೆ ಹಾಗೂ ಕರ್ತವ್ಯಚ್ಯುತಿ ಎಸಗಿರುತ್ತೀರಿ ಎಂಬುದಾಗಿರುತ್ತದೆ.

ii. ಆ.ಪೊ.ಅ. ಆದ ನೀವು ಕಾನೂನನ್ನು ಬಲ್ಲವರಾಗಿದ್ದು, ಜವಾಬ್ದಾರಿಯುತ ಠಾಣಾಧಿಕಾರಿಯಾಗಿದ್ದು, 154 ಸಿ.ಆರ್.ಪಿ.ಸಿ. ಪ್ರಕಾರ ಸಂಜ್ಞೇಯ ಅಪರಾಧ ನಡೆದಿರುವ ಬಗ್ಗೆ ದೂರು ಬಂದಾಗ ಅದನ್ನು ಪಿರ್ಯಾದುದಾರರಿಂದ ಸ್ವೀಕರಿಸಿ ಪ್ರಕರಣ ದಾಖಲಿಸುವ ಮುಖಾಂತರ ಕಾನೂನಿನ ಕ್ರಮ ತೆಗೆದುಕೊಳ್ಳಬೇಕಾಗಿದ್ದು, ನಿಮ್ಮ ಆದ್ಯ ಜವಾಬ್ದಾರಿಯಾಗಿರುತ್ತದೆ. ಆದರೆ ನೀವು ಕಾನೂನಿಗೆ ವಿರುದ್ಧವಾಗಿ ಪ್ರಕರಣವನ್ನು ದಾಖಲಿಸದೆ, ಬೇಜವಾಬ್ದಾರಿತನದಿಂದ ಕರ್ತವ್ಯಲೋಪ ಎಸಗಿರುತ್ತೀರಿ ಎಂಬುದಾಗಿದೆ.

iii. ದಿನಾಂಕ: 01–7–2007 ರಂದು ಶ್ರೀಮತಿ ಹೆಚ್.ವಿ. ನಾಗರತ್ನಮ್ಮ ಕೋಂ ಶ್ರೀ ಕೆ. ಕೃಷ್ಣಾಚಾರ್ ರವರು ನಂದಿನಿ ಪೊಲೀಸ್ ಠಾಣೆಗೆ ಹೋಗಿ ಆ ದಿನ ಠಾಣಾಧಿಕಾರಿಯಾಗಿದ್ದ ಶ್ರೀ ಶಿವಣ್ಣ, ಎ.ಎಸ್.ಐ. ರವರಿಗೆ ನಡೆದ ಕೃತ್ಯದ ಬಗ್ಗೆ ದೂರು ನೀಡಿರುತ್ತಾರೆ. ಎ.ಎಸ್.ಐ. ರವರು ಠಾಣಾ ಪ್ರಭಾರದಲ್ಲಿರುವ ನಿಮ್ಮ ಗಮನಕ್ಕೆ ತಕ್ಷಣ ಈ ವಿಚಾರವನ್ನು ತಂದಿರುತ್ತಾರೆ ಆದರೂ ಸಹ ನೀವು ಸದರಿ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸದೆ ಕಾನೂನು ರೀತ್ಯಾ ಸಂಜ್ಞೇಯ ಅಪರಾಧದಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳದೆ ಹಾಗೂ ನಿಮ್ಮ ಅಧೀನ ಅಧಿಕಾರಿಯಾದ ಶ್ರೀ ಶಿವಣ್ಣ, ಎ.ಎಸ್.ಐ. ರವರಿಗೆ ಸೂಕ್ತ ಆದೇಶವನ್ನು ನೀಡಿರುವುದಿಲ್ಲ ಹಾಗೂ ಮಲ್ಲೇಶ್ವರಂ ಎ.ಸಿ.ಪಿ. ರವರು ಕ್ರಮ ತೆಗೆದುಕೊಳ್ಳುವ ಬಗ್ಗೆ ಆದೇಶ ನೀಡಿದ್ದರೂ ಸಹ ನೀವು ಅದಕ್ಕೆ ಸ್ಪಂದಿಸಿರುವುದಿಲ್ಲ. ಆದ್ದರಿಂದ ನೀವು ನಿಮ್ಮ ಅಧೀನ ಅಧಿಕಾರಿಗೆ ಆದೇಶ ಕೊಡುವುದನ್ನು ಮಾಡಿರುವುದಿಲ್ಲ ಹಾಗೂ ಎ.ಸಿ.ಪಿ. ರವರು ಕೊಟ್ಟ ಆದೇಶದಂತೆಯೂ ನಡೆದು–ಕೊಂಡಿರುವುದಿಲ್ಲ. ನೀವು ಅಧೀನ ಅಧಿಕಾರಿಗಳಿಗೆ ಆದೇಶ ಕೊಡುವ ಜವಾಬ್ದಾರಿಯುತ ಅಧಿಕಾರಿಯಾಗಿದ್ದು, ಆದೇಶ ನೀಡದೆ ಬೇಜವಾಬ್ದಾರಿತನದಿಂದ ವರ್ತಿಸಿ, ಕರ್ತವ್ಯ ನಿರ್ಲಕ್ಷ್ಯತೆ ತೋರಿರುತ್ತೀರಿ. ಅದೇ ರೀತಿ ಉನ್ನತ ಅಧಿಕಾರಿಯ ಆದೇಶಗಳನ್ನು ಪಾಲನೆ ಮಾಡಬೇಕಾದ ನೀವು ಅದನ್ನು ಮಾಡದೆ ಬೇಜವಾಬ್ದಾರಿತನದಿಂದ ಅವರ ಆದೇಶಗಳನ್ನು ಉಲ್ಲಂಘನೆ ಮಾಡಿ ಉದಾಸೀನತೆ ತೋರಿರುತ್ತೀರಿ.”

ಮೇಲಿನ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು, ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು,

ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 07-12-2012ರ ಆದೇಶದಲ್ಲಿ ಅರ್ಜಿದಾರರು ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯಲ್ಲಿ ಒಂದು ಹಂತಕ್ಕೆ 6(ಆರು) ತಿಂಗಳ ವರೆಗೆ ಕೆಳಗಿಳಿಸಲಾಗಿದೆ. ದಂಡನೆಯ ಅವಧಿಯಲ್ಲಿ ಇವರುಗಳು ಯಾವುದೇ ವಾರ್ಷಿಕ ವೇತನ ಬಡ್ತಿಗಳಾಗಲಿ ಅಥವಾ ಪದೋನ್ನತಿಯಾಗಲಿ ಪಡೆಯಲು ಅರ್ಹರಿರುವುದಿಲ್ಲ. ದಂಡನಾವಧಿಯಾದ ಆರು ತಿಂಗಳು ಪೂರ್ಣಗೊಂಡ ನಂತರ ಇವರ ವೇತನವನ್ನು ಇವರು ದಂಡನಾವಧಿಯ ಪೂರ್ವದಲ್ಲಿ ಪಡೆಯುತ್ತಿದ್ದ ಮೂಲ ವೇತನ ಹಾಗೂ ಅರ್ಹ ವಾರ್ಷಿಕ/ಸ್ಥಗಿತ ವೇತನ ಬಡ್ತಿಗಳನ್ನು ಸೇರಿಸಿ, ಕಾಲ್ಪನಿಕವಾಗಿ ಮರುನಿಗದಿಗೊಳಿಸುವುದು. ಈ ದಂಡನೆಯು ದಿ: 01-01-2013 ರಿಂದ ಜಾರಿಗೆ ಬರುತ್ತದೆ ಎಂದು ಆದೇಶಿಸಲಾಗಿದೆ.

ಈ ಆದೇಶದ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕರ್ತವ್ಯದಲ್ಲಿ ದುರ್ನಡತೆ, ಬೇಜವಾಬ್ದಾರಿತನ ಹಾಗೂ ಘೋರ ನಿರ್ಲಕ್ಷತನ, ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 14 ಪೊಸಿಅ 2013 ಬೆಂಗಳೂರು, ದಿನಾಂಕ: 17-6-2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಹೆಚ್.ಟಿ. ಜಯರಾಮಯ್ಯ, ಪಿ.ಐ., ಡಿ.ಸಿ.ಆರ್.ಬಿ., ಚಾಮರಾಜನಗರ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.700
SC.30

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಎಸ್.ಎಮ್. ಬೆಂಕಿ, ಪಿ.ಎಸ್.ಐ., ಜೇವರ್ಗಿ ಪೊಲೀಸ್ ಠಾಣೆ, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಗದಗ ಜಿಲ್ಲೆ ಗದಗ, ಇವರ ಆದೇಶ ಸಂಖ್ಯೆ: ಇವಿ/ನಿಯಮ-/114/2012 (ಆ.ಪು. ಸಂಖ್ಯೆ:905/2012) ದಿನಾಂಕ: 18.09.2012
2) ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ: ಅಪೀಲು/112/ಉವ/2012 ದಿನಾಂಕ: 01-11-2012
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 15-01-2013
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)75/2012-13 ದಿನಾಂಕ: 28-3-2013

ಪ್ರಸ್ತಾವನೆ:

ಶ್ರೀ ಎಸ್.ಎಮ್. ಬೆಂಕಿ, ಪಿ.ಎಸ್.ಐ., ಜೇವರ್ಗಿ ಪೊಲೀಸ್ ಠಾಣೆ, ಇವರು ಈ ಹಿಂದೆ ರೋಣ ಪೊಲೀಸ್ ಠಾಣೆ, ಗದಗ ಜಿಲೆಯಲ್ಲಿ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಘೋರ ನಿರ್ಲಕ್ಷ್ಯತನ, ಬೇಜವಾಬ್ದಾರಿತನ ಪ್ರದರ್ಶಿಸಿದ ಕಾರಣದ ಮೇಲೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 7ರಡಿ ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:-

"ಪ್ರಸ್ತುತ ಸಾಲಿನಲ್ಲಿ ರೋಣ ಠಾಣೆಯ ಸರಹದ್ದಿನಲ್ಲಿ 05 ಮರಣಾಂತಿಕ ರಸ್ತೆ ಅಪಘಾತ ಹಾಗೂ 10 ಮರಣಾಂತಿಕವಲ್ಲದ ರಸ್ತೆ ಅಪಘಾತಗಳು ಸಂಭವಿಸಿರುತ್ತವೆ ಮತ್ತು ದಿ: 11-07-2012 ರಂದು ಬೆಳವಣಿಕಿ-ಮಲ್ಲಾಪೂರ ರಸ್ತೆಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ಮತ್ತು ಗೂಡ್ಸ್ ವಾಹನಕ್ಕೆ ಅಪಘಾತವಾದ ಪ್ರಕರಣದಲ್ಲಿ ಗೂಡ್ಸ್ ವಾಹನದಲ್ಲಿ ಪ್ರಯಾಣಿಸುತ್ತಿದ್ದ 07 ಜನರು ಸ್ಥಳದಲ್ಲಿಯೇ ಮೃತರಾಗಿದ್ದು ಮತ್ತು 08 ಜನ ಪ್ರಯಾಣಿಕರಿಗೆ ಸಾದಾ ಗಾಯಗಳಾಗಿದ್ದು ಈ ಬಗ್ಗೆ ರೋಣ ಠಾಣೆಯಲ್ಲಿ ಗುನ್ನಾ ಸಂ. 58/2012 ಕಲಂ. 279, 337, 338, 304(ಎ) ಐಪಿಸಿ ಅಡಿಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ನೀವು ಒಬ್ಬ ಜವಾಬ್ದಾರಿಯುತ ಪೊಲೀಸ್ ಅಧಿಕಾರಿಯಾಗಿದ್ದು ನಿಮ್ಮ ಠಾಣಾ ವ್ಯಾಪ್ತಿಯಲ್ಲಿ ಖಾಸಗಿ ವಾಹನಗಳಾದ ಗೂಡ್ಸಗಾಡಿ, ಟಂಟಂ ಗಾಡಿ. ಕ್ರೂಜರ್ & ಟೆಂಪೊಗಳಲ್ಲಿ ಮಿತಿಗಿಂತ ಹೆಚ್ಚಿನ ಸಂಖ್ಯೆಯ ಪ್ರಯಾಣಿಕರನ್ನು ಕರೆದೊಯ್ಯುವ, ವಾಹನದ ಮೇಲ್ಭಾವಣಿ & ಫುಟ್ ಬೋರ್ಡ್ ಪ್ರಯಾಣಿಕರನ್ನು ಕರೆದೊಯ್ಯುವ ವಾಹನಗಳಿಗೆ ಎಂ.ವಿ.ಆ್ಯಕ್ಟ್ ಅಡಿಯಲ್ಲಿ ಕೇವಲ ದಂಡವನ್ನು ಮಾತ್ರ ವಿಧಿಸಿರುತ್ತೀರಿ. ಅಪಘಾತಗಳನ್ನು ತಡೆಗಟ್ಟುವ ಬಗ್ಗೆ ಯಾವುದೇ ಕ್ರಮಗಳನ್ನು ಜರುಗಿಸಿರುವುದಿಲ್ಲ ಪ್ರತಿ ತಿಂಗಳು ಈ ಕಛೇರಿಯಲ್ಲಿ ಜರುಗುವ ಅಪರಾಧ ಸಭೆಗಳಲ್ಲಿ ಎಂ.ವಿ. ಆ್ಯಕ್ಟ್ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಅಪಘಾತ ಪ್ರಕರಣಗಳನ್ನು ನಿಯಂತ್ರಿಸುವ ಬಗ್ಗೆ ಸಾಕಷ್ಟು ಸೂಚನೆಗಳನ್ನು ನೀಡಲಾಗಿದೆ & ಈ ಕಛೇರಿಯಿಂದ ಜ್ಞಾಪನ/ಸುತ್ತೋಲೆಗಳ ಮೂಲಕ ಸೂಚಿಸಿದರೂ ಕೂಡಾ ನಿಮ್ಮ ಠಾಣಾ ವ್ಯಾಪ್ತಿಯಲ್ಲಿ ಅಪಘಾತಗಳು ಸಂಭವಿಸದಂತೆ ತಡೆಯುವಲ್ಲಿ ವಿಫಲರಾಗಿದ್ದರಿಂದ ನಿಮ್ಮ ಠಾಣಾ ವ್ಯಾಪ್ತಿಯಲ್ಲಿ ಅಪಘಾತಗಳು ಸಂಭವಿಸಲು ಹಾಗೂ ದಿ: 11-07-2012 ರಂದು ಗಂಭೀರ ರಸ್ತೆ ಅಪಘಾತ ಕಾರಣಭೂತರಾಗಿರುತ್ತೀರಿ. ಈ

ರೀತಿಯಾಗಿ ನೀವು ನಿಮ್ಮ ಕರ್ತವ್ಯದಲ್ಲಿ ಘೋರ ನಿರ್ಲಕ್ಷ್ಯತನ, ಬೇಜವಾಬ್ದಾರಿತನ ಪ್ರದರ್ಶಿಸಿ ಮೇಲಾಧಿಕಾರಿಗಳ ಆದೇಶ ಉಲ್ಲಂಘನೆ ಮಾಡಿ ಕರ್ತವ್ಯಚ್ಯುತಿಗೈದ ಅಪರಾಧ."

ಮೇಲಿನ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಗದಗ ಜಿಲ್ಲೆ ಗದಗ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 18.09.2012ರ ಆದೇಶದಲ್ಲಿ ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳ ಮೇಲೆ ಧಕ್ಕೆಯಾಗದಂತೆ ಒಂದು (01) ತಿಂಗಳ ಕಾಲ ಮುಂದೂಡಿ ಆದೇಶಿಸಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 01–11–2012ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿದ್ದಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕರ್ತವ್ಯದಲ್ಲಿ ಘೋರ ನಿರ್ಲಕ್ಷ್ಯತನ, ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 11 ಪೊಸಿಅ 2013 ಬೆಂಗಳೂರು, ದಿನಾಂಕ: 14–6–2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಸ್.ಎಮ್. ಬೆಂಕಿ, ಪಿ.ಎಸ್.ಐ., ಜೇವರ್ಗಿ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.701
SC.30

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಉಮಾಪತಿ, ಪಿ.ಎಸ್.ಐ., ಶಿಕಾರಿಪುರ (ಗ್ರಾ) ಪೊಲೀಸ್ ಠಾಣೆ, ಶಿವಮೊಗ್ಗ, ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ರಾಜ್ಯ ಗುಪ್ತವಾರ್ತೆ, ಇವರ ಆದೇಶ ಸಂಖ್ಯೆ: ಎಸ್‌ಬಿಎ/ ಸಿಬ್ಬಂದಿ–3/ಶಿಕ್ಷೆ–21/2011–12 (ಓ.ಬಿ. ಸಂಖ್ಯೆ:43/2012–13) ದಿನಾಂಕ: 29–5–2012
2) ಮೇಲ್ಮನವಿ ಪ್ರಾಧಿಕಾರ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರ ಆದೇಶ ಸಂಖ್ಯೆ: ಎಸ್‌ಬಿಎ/ ಸಿಬ್ಬಂದಿ–3/ಶಿಕ್ಷೆ–21/2011–12 (ಓ.ಬಿ. ಸಂಖ್ಯೆ: 141/2012–13) ದಿನಾಂಕ: 24–8–2012
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 24–9–2012
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)51/2012–13 ದಿನಾಂಕ: 11–02–2013 ಮತ್ತು 19–4–2013

ಪ್ರಸ್ತಾವನೆ:

ಶ್ರೀ ಉಮಾಪತಿ, ಪಿ.ಎಸ್.ಐ., ಶಿಕಾರಿಪುರ (ಗ್ರಾ) ಪೊಲೀಸ್ ಠಾಣೆ, ಶಿವಮೊಗ್ಗ, ಇವರು ಮೂಡಬಿದ್ರೆ ಪೊಲೀಸ್ ಠಾಣೆಯಲ್ಲಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ದ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

"ಶ್ರೀ ಉಮಾಪತಿ, ಪಿ.ಎಸ್.ಐ., ರಾಜ್ಯ ಗುಪ್ತವಾರ್ತೆ, ಶಿವಮೊಗ್ಗ, ಈ ಹಿಂದೆ ಪಿ.ಎಸ್.ಐ., ಮೂಡಬಿದ್ರೆ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಮೊಕದ್ದಮೆ ಸಂಖ್ಯೆ:10/08 ಕಲಂ 279, 338, ಐಪಿಸಿ ಪ್ರಕರಣಕ್ಕೆ ಸಂಬಂಧಿಸಿದಂತೆ, ಅಪಘಾತ ಮಾಡಿದ ವಾಹನ ಸಂಖ್ಯೆ: ಕೆ.ಎ.19 ಆರ್.9313ರ ಬದಲಾಗಿ ವಾಹನ ಸಂಖ್ಯೆ: ಕೆಎ 19 ವಿ 7812 ಅನ್ನು ದಾಖಲಿಸಿದ್ದು, ನಂತರ ಪಿರ್ಯಾದುದಾರರ ಹೇಳಿಕೆಯ ಮೇರೆಗೆ ವಾಹನ ಸಂಖ್ಯೆಯನ್ನು ಬದಲಾಯಿಸಿ, ಆರೋಪಣ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದು, ವಾಹನದಲ್ಲಿ ವಾಹನ ಸವಾರ (ಆರೋಪಿ) ರವರಿಗೆ ರೂ.2000/– ದಂಡ ವಿಧಿಸಿದ್ದು, ಪ್ರಕರಣ ವಿಚಾರಣೆಯಲ್ಲಿ ಮುಕ್ತಾಯಗೊಂಡಿರುತ್ತದೆ. ಆದರೆ ತಕರಾರು ವಾಹನ ಕೆಎ 09 ವಿ 7812 ಅಲ್ಲಿಗೆ (ಘಟನೆ ನಡೆದ ಸ್ಥಳಕ್ಕೆ) ಹೇಗೆ ಬಂತು? ಎಂಬ ಬಗ್ಗೆ ಯಾವುದೇ ಮಾಹಿತಿ ಸಂಗ್ರಹಿಸದೆ ತನಿಖಾ ಕಾರ್ಯದಲ್ಲಿ ತೀವ್ರ ನಿರ್ಲಕ್ಷ್ಯತೆ ವಹಿಸಿ ವಿಮಾ ಇಲಾಖೆಯವರು ನಿಮ್ಮ ತನಿಖೆಯ ಕುರಿತು ಸಂಶಯ ಪಡಲು ಕಾರಣಕರ್ತರಾಗಿರುತ್ತೀರಿ ಹಾಗೂ ನಿಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುತ್ತೀರಿ ಎಂಬುದು ನಿಮ್ಮ ಮೇಲಿನ ಆರೋಪವಾಗಿರುತ್ತದೆ."

ಮೇಲಿನ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ರಾಜ್ಯ ಗುಪ್ತವಾರ್ತೆ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 29–5–2012ರ ಆದೇಶದಲ್ಲಿ ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗದಂತೆ ಮುಂದೂಡಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 24–8–2012ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 123 ಪೊಸಿಅ 2012 ಬೆಂಗಳೂರು, ದಿನಾಂಕ: 24–6–2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಉಮಾಪತಿ, ಪಿ.ಎಸ್.ಐ., ಶಿಕಾರಿಪುರ (ಗ್ರಾ) ಪೊಲೀಸ್ ಠಾಣೆ, ಶಿವಮೊಗ್ಗ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.737
SC.30

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಹೆಚ್. ವಿಶ್ವನಾಥ್, ಹೆಚ್.ಸಿ. ಚಾಲಕ, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರ ಆದೇಶ ಸಂಖ್ಯೆ: ಎಸ್‌ಬಿಎ/ಸಿಬ್ಬಂದಿ–3/ಶಿಕ್ಷೆ–125/2011–12 (ಓ.ಬಿ. ಸಂಖ್ಯೆ: 39/2012–13) ದಿನಾಂಕ: 26–5–2012
2) ಮೇಲ್ಮನವಿ ಪ್ರಾಧಿಕಾರ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರ ಆದೇಶ ಸಂಖ್ಯೆ: ಎಸ್‌ಬಿಎ/ಸಿಬ್ಬಂದಿ–3/ಶಿಕ್ಷೆ–125/2011–12 (ಓ.ಬಿ. ಸಂಖ್ಯೆ: 120/2012–13) ದಿನಾಂಕ: 09–8–2012
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 04–10–2012
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)43/2012–13 ದಿನಾಂಕ: 31–01–2013 ಮತ್ತು 10–4–2013

ಪ್ರಸ್ತಾವನೆ:

ಶ್ರೀ ಹೆಚ್. ವಿಶ್ವನಾಥ್, ಹೆಚ್.ಸಿ. ಚಾಲಕ, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರು ವಿ.ಐ.ಪಿ. ಶಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಅಶಿಸ್ತು ಹಾಗೂ ನಿರ್ಲಕ್ಷ್ಯತೆ ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

> "ಶ್ರೀ ಹೆಚ್. ವಿಶ್ವನಾಥ್, ಹೆಚ್.ಸಿ. ಚಾಲಕ, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಆದ ನೀವು ವಿ.ಐ.ಪಿ. ಶಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಶ್ರೀ ಎಂ. ಪಾಪಣ್ಣ, ಪಿ.ಐ., ಮಾನ್ಯ ಮುಖ್ಯಮಂತ್ರಿಗಳ ಭದ್ರತಾ ಶಾಖೆ ರವರನ್ನು ದಿ: 18–3–2012 ರಂದು "1 ಬಿ" ಪಾಳಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಭದ್ರತಾ ಕರ್ತವ್ಯಕ್ಕಾಗಿ ಮಧ್ಯಾಹ್ನ 2.00 ಗಂಟೆಯಿಂದ ರಾತ್ರಿ 9.00 ಗಂಟೆಯವರೆಗೆ ನಿಯೋಜಿಸಲಾಗಿದ್ದು, ಅವರನ್ನು ಕಛೇರಿಗೆ ಕರೆತರಲು ಬೆಳಿಗ್ಗೆ 11.00 ಗಂಟೆಗೆ ಕಛೇರಿ ಕರ್ತವ್ಯದಲ್ಲಿದ್ದ ಶ್ರೀ ಶಾಂತರಾಜು ರವರಿಗೆ ಕರೆಮಾಡಿ ತಿಳಿಸಲಾಗಿತ್ತು. ಅದರಂತೆ ನೀವು ಕಛೇರಿಗೆ ಕರೆದುಕೊಂಡು ಬರಲು ತಿಳಿಸಿದಾಗ, ನೀವು ನಿರಾಕರಿಸಿರುತ್ತೀರಿ. ಸದರಿ ವಿಷಯವನ್ನು ಪಿ.ಐ. ರವರಿಗೆ ತಿಳಿಸಲಾಗಿರುತ್ತದೆ. ನಂತರ ಪಿ.ಐ. ರವರೇ ಸ್ವತಃ ಫೋನಿನಲ್ಲಿ ತಮ್ಮನ್ನು ಕರೆದುಕೊಂಡು ಹೋಗಲು ತಿಳಿಸಿದಾಗ ನೀವು "ನಾನು ನಿಮ್ಮಲ್ಲಿಗೆ ಬರುವುದಿಲ್ಲ, ನಿಮಗೋಸ್ಕರ ನಾನು ಮನೆಯನ್ನು ಬೇಗ ಬಿಡಲಾಗುವುದಿಲ್ಲ, ನೀವೇನು ಐ.ಪಿ.ಎಸ್. ಅಧಿಕಾರಿಯೇ ಮನೆಯ ಹತ್ತಿರ ಬಂದು ಕರೆದುಕೊಂಡು ಬರಲು" ಎಂದು ಉದ್ದಟತನದಿಂದ ಮಾತನಾಡಿ, ಗೌರವವನ್ನು ನೀಡದೆ, ಕರ್ತವ್ಯದಲ್ಲಿ ಅಶಿಸ್ತು ನಿರ್ಲಕ್ಷ್ಯತೆಯನ್ನು ಪ್ರದರ್ಶಿಸಿರುತ್ತೀರಿ."

ಮೇಲಿನ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 26–5–2012ರ ಆದೇಶದಲ್ಲಿ ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗದಂತೆ ಮುಂದೂಡಲಾಗಿದೆ ಹಾಗೂ ಇನ್ನು ಮುಂದೆ ಈ ರೀತಿಯ ಅಶಿಸ್ತನ್ನು ಪ್ರದರ್ಶಿಸಿದಲ್ಲಿ, ರಾಜ್ಯ ಗುಪ್ತವಾರ್ತೆಯ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಮಾತೃಘಟಕಕ್ಕೆ ಹಿಂದಿರುಗಿಸಲಾಗುವುದೆಂದು ಎಚ್ಚರಿಕೆ ನೀಡಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 09–8–2012ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕರ್ತವ್ಯದಲ್ಲಿ ಅಶಿಸ್ತು ಹಾಗೂ ನಿರ್ಲಕ್ಷ್ಯತೆ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 104 ಪೊಸಿಅ 2012 ಬೆಂಗಳೂರು, ದಿನಾಂಕ: 24–6–2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಹೆಚ್. ವಿಶ್ವನಾಥ್, ಹೆಚ್.ಸಿ., ಚಾಲಕ, ರಾಜ್ಯ ಗುಪ್ತವಾರ್ತೆ, ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.738
SC.30

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಎಂ.ಎಸ್. ಮಾವರಕರ, ಸಿ.ಪಿ.ಸಿ–64, ಖಡೇಬಜಾರ ಪೊಲೀಸ್ ಠಾಣೆ, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೆಳಗಾವಿ, ಇವರ ಆದೇಶ ಸಂಖ್ಯೆ: ಪಿಯುಎನ್/34/1998 [ಆ.ಪು. ಸಂಖ್ಯೆ: 928/99] ದಿನಾಂಕ: 31–7–1999
2) ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾಂ, ಇವರ ಆದೇಶ ಸಂಖ್ಯೆ: ಅಪೀಲು/99/ಉವ/2010–11 ದಿನಾಂಕ: 09–12–2011
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 24–01–2012
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)67/2011–12 ದಿನಾಂಕ: 31–7–2012 ಮತ್ತು 21–01–2013

ಪ್ರಸ್ತಾವನೆ:

ಶ್ರೀ ಎಂ.ಎಸ್. ಮಾವರಕರ, ಇವರು ಬೆಳಗಾವಿಯ ಯಮಕನಮರಡಿ ಪೊಲೀಸ್ ಠಾಣೆಯಲ್ಲಿ ಸಿ.ಪಿ.ಸಿ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಘೋರ ದುರ್ನಡತೆ ಪ್ರದರ್ಶಿಸಿದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6 ಮತ್ತು 8 ರೊಂದಿಗೆ ಜಂಟಿ ಇಲಾಖಾ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

> " ನೀವು ಸಿಪಿಸಿ ಬ.ನಂ. 64, ಎಮ್.ಎಸ್. ಮಾವರಕರ ಮತ್ತು ಸಿಪಿಸಿ ಬ.ನಂ. 1438 ಎಮ್.ಎಜ್. ವರ್ಗಗೋಳ ನೇಮನೂಕ ಯ.ಮರ್ಡಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಾಗ ದಿ: 23–4–98 ರಂದು ನಿಮಗೆ ನೀಡಲಾದ ಕರ್ತವ್ಯಕ್ಕೆ ಗೈರಹಾಜರ ಉಳಿದು ಆ ದಿನ 0500 ಗಂಟೆಗೆ ಚಿಕಾಲಗುಡ್ಡದ ಹತ್ತಿರ ಇರುವ ಢಾಬಾದ ಹತ್ತಿರ ತಾನಾಜಿ ಜೈಸಿಂಗ್ ಶಿಂದೆ ಸಾ:ಉಮ್ರಜ ಹಾಗೂ ಅವನ ಜೊತೆಗೆ ಇದ್ದ ಅವನ ಗೆಳೆಯನಾದ ವಿಠ್ಠಲ ನಾರಾಯಣ ತುಕ್ಕಾನಾಡೆ ಸಾ: ಉಮರಜ ರವರಿಗೆ ವಿನಾಕಾರಣ ನಿಲ್ಲಿಸಿ ಅವರಿಗೆ ಹೊಡಿಬಡಿ ಮಾಡಿ ಗಾಯಗೊಳಿಸಿ ಅವರಿಗೆ 300–00 ರೂ. ಕೊಟ್ಟರೆ ಬಿಡುತ್ತೇವೆ ಎಂದು ಒತ್ತಾಯಪಡಿಸಿ ನೀವುಗಳು ನಿಮ್ಮ ಕರ್ತವ್ಯದಲ್ಲಿ ಘೋರ ದುರ್ನಡತೆ ಮತ್ತು ವಿಮುಖತೆ ಪ್ರದರ್ಶಿಸುವಿರಿ."

ಮೇಲಿನ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು, ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 31–7–1999ರ ಆದೇಶದಲ್ಲಿ ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯ ಒಂದು ಹಂತವನ್ನು ಮುಂದಿನ ವಾರ್ಷಿಕ

ವೇತನ ಬಡ್ತಿಗಳಿಗೆ ಬಾಧಕವಾಗುವಂತೆ ತಡೆಹಿಡಿಯಲಾಗಿದೆ, ಇವರು ಹೊಸದಾಗಿ ವೇತನ ಬಡ್ತಿಯನ್ನು ಗಳಿಸಬೇಕು, ದಿನಾಂಕ: 05–5–98 ರಿಂದ 16–6–98ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾಂ, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 09–12–2011ರ ಆದೇಶದಲ್ಲಿ ತಿರಸ್ಕರಿಸಲಾಗಿದೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಕರ್ತವ್ಯದಲ್ಲಿ ಘೋರ ದುರ್ನಡತೆ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 8 ಪೊಸಿಅ 2012 ಬೆಂಗಳೂರು, ದಿನಾಂಕ: 24–6–2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ.ಎಸ್. ಮಾವರಕರ, ಸಿ.ಪಿ.ಸಿ–64, ಖಡೇಬಜಾರ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.739
SC.30

ಒಳಾಡಳಿತ ಸಚಿವಾಲಯ

ವಿಷಯ: ಶ್ರೀಮತಿ ರೇವತಿ ಕೋಂ ದಿವಂಗತ ರಾಜೇಂದ್ರ ಪ್ರಸಾದ್, ನಿವೃತ್ತ ಪಿ.ಸಿ–297, 4ನೇ ಪಡೆ, ಕೆ.ಎಸ್.ಆರ್.ಪಿ. ಬೆಂಗಳೂರು, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ: ಡಿಇ/20/2010–11 ದಿನಾಂಕ: 21–9–2010
2) ಮೇಲ್ಮನವಿ ಪ್ರಾಧಿಕಾರ ಹಾಗೂ ಇನ್ಸ್‌ಪೆಕ್ಟರ್ ಆಫ್ ಜನರಲ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ:ಡಿಇ/20/2010–11 ದಿನಾಂಕ: 31–01–2011
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 25–02–2012
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)12/2012–13 ದಿನಾಂಕ: 26–9–2012 ಮತ್ತು 09–01–2013

ಪ್ರಸ್ತಾವನೆ:

ಶ್ರೀ ಬಿ. ರಾಜೇಂದ್ರ ಪ್ರಸಾದ, ಪೊಲೀಸ್ ಕಾನ್ಸ್‌ಟೇಬಲ್, ಇವರು 4ನೇ ಪಡೆ, ಕೆ.ಎಸ್.ಆರ್.ಪಿ. ಬೆಂಗಳೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾಗಿ ಕರ್ತವ್ಯದಲ್ಲಿ ಬೇಜವಾಬ್ದಾರಿತನ, ಅಶಿಸ್ತು ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6 ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

i. ಪೊಲೀಸ್ ಕಾನ್ಸ್‌ಟೇಬಲ್, ಸಂ: 297 ಶ್ರೀ ಬಿ.ರಾಜೇಂದ್ರ ಪ್ರಸಾದ್, 'ಬಿ' ದಳ, 4ನೇ ಪಡೆಯಾದ ನೀವು ದಿನಾಂಕ: 11–09–2009 ರಿಂದ ಇದುವರೆವಿಗೂ ಕರ್ತವ್ಯಕ್ಕೆ ಗೈರುಹಾಜರಾಗಿರುತ್ತೀರಿ. ಈ ನಿಮ್ಮ ಗೈರುಹಾಜರಾತಿಯು 21 ದಿವಸಗಳನ್ನು ಮೀರಿದ ಕಾರಣ ದಿನಾಂಕ: 26–10–2009 ರಂದು ಕೆಪಿಎಂ ನ ಆದೇಶ 525ರ ಪ್ರಕಾರ ನಿಮ್ಮನ್ನು ಹಂಗಾಮಿ ಕರ್ತವ್ಯ ಪರಿತ್ಯಾಜಕರೆಂದು ಪರಿಗಣಿಸಿ ಸೂಚನಾ ಪತ್ರವನ್ನು ಹೊರಡಿಸಲಾಯಿತು. ಈ ಸೂಚನಾ ಪತ್ರವನ್ನು ದಿನಾಂಕ: 27–10–2009 ರಂದು ನೀವೇ ಸ್ವತ: ಸ್ವೀಕರಿಸಿ, ನಂತರ ದಿನಾಂಕ: 11–11–09 ರಂದು ಮಾನ್ಯ ಕಛೇರಿಗೆ ಹಾಜರಾಗಿ ಕರ್ತವ್ಯಕ್ಕೆ ತೆಗೆದುಕೊಳ್ಳುವುದಕ್ಕೆ ಅರ್ಜಿ ಸಲ್ಲಿಸಿದ ಮೇರೆಗೆ ಮಾನ್ಯ ಕಮಾಂಡೆಂಟ್ ರವರ ಮುಂದೆ (ಆರ್ಡಲಿ ರೂಂ) ಹಾಜರುಪಡಿಸಲಾಗಿದ್ದರೂ ಸಹ ಇದುವರೆವಿಗೂ ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ.

ii. ಇದುವರೆವಿಗೂ ನೀವು ಸಲ್ಲಿಸಿದ 09 ವರ್ಷಗಳ ಸೇವೆಯಲ್ಲಿ ಅನೇಕ ಬಾರಿ ಗೈರುಹಾಜರಾಗಿದ್ದು, ಪದೇ ಪದೇ ಗೈರು ಹಾಜರಾಗುವ ಪ್ರವೃತ್ತಿಯನ್ನು ಹೊಂದಿರುತ್ತೀರಿ. ಆ ಮೂಲಕ ನಿಮ್ಮ ಕರ್ತವ್ಯದಲ್ಲಿ ಬೇಜವಾಬ್ದಾರಿ, ಅಶಿಸ್ತು ಹಾಗೂ ಅದಕ್ಷತೆಯಂತಹ ಅಪರಾಧವನ್ನು ಪ್ರದರ್ಶಿಸಿರುತ್ತೀರಿ."

ಮೇಲಿನ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು, ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 21–09–2010ರ ಆದೇಶದಲ್ಲಿ ಅರ್ಜಿದಾರರರನ್ನು ಸೇವೆಯಿಂದ

ಕಡ್ಡಾಯ ನಿವೃತ್ತಿಗೊಳಿಸಲಾಗಿದೆ ಅನಧೀಕೃತವಾಗಿ ಗೈರು ಹಾಜರಾದ ದಿನಾಂಕದಿಂದ ಈ ಆದೇಶವು ಜಾರಿಯಾಗುವ ದಿನಾಂಕದವರೆಗಿನ ಅವಧಿಯನ್ನು ಅವರ ಖಾತೆಯಲ್ಲಿ ಲಭ್ಯವಿರುವಷ್ಟು ರಜೆಯನ್ನು ಉಳಿದ ಅವಧಿಯನ್ನು ವೇತನ ರಹಿತ ರಜೆ ಎಂದು ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಆಫ್ ಜನರಲ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 31–01–2011ರ ಆದೇಶದಲ್ಲಿ ತಿರಸ್ಕರಿಸಲಾಗಿದೆ.

ಆ.ಪೊ.ಅ. ರವರು ದಿನಾಂಕ: 10–9–2011 ರಂದು ನಿಧನ ಹೊಂದಿರುವುದರಿಂದ ಅವರ ಪತ್ನಿ ಶ್ರೀಮತಿ ರೇವತಿ, ಇವರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿಯನ್ನು ಸಲ್ಲಿಸಿದ್ದಾರೆ.

ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾಗಿ ಕರ್ತವ್ಯದಲ್ಲಿ ಬೇಜವಾಬ್ದಾರಿತನ, ಅಶಿಸ್ತು ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 46 ಪೊಸಿಅ 2012 ಬೆಂಗಳೂರು, ದಿನಾಂಕ: 24–6–2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀಮತಿ ರೇವತಿ ಕೋಂ ದಿವಂಗತ ರಾಜೇಂದ್ರ ಪ್ರಸಾದ್, ನಿವೃತ್ತ ಪಿ.ಸಿ–297, 4ನೇ ಪಡೆ, ಕೆ.ಎಸ್.ಆರ್.ಪಿ. ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.740
SC.30

ಒಳಾಡಳಿತ ಸಚಿವಾಲಯ

ವಿಷಯ: : ಡಾ.ಬಿ.ಎಂ.ಮೋಹನ್, ನಿರ್ದೇಶಕರು (ನಿವೃತ್ತ) ಮತ್ತು ಶ್ರೀ ಪರ್ವತಪ್ಪ ಬರಿಗಿಡದ್, ವೈಜ್ಞಾನಿಕ ಸಹಾಯಕರು(ಹಾಲಿ ಅಮಾನತ್ತು)ರವರುಗಳ ವಿರುದ್ಧ ಇಲಾಖಾ ವಿಚಾರಣೆಗೆ ಆದೇಶಿಸುವ ಬಗ್ಗೆ.

ಓದಲಾಗಿದೆ : 1) ಡಿಜಿ ಮತ್ತು ಐಜಿಪಿ ರವರ ಪತ್ರ ಸಂಖ್ಯೆ: ಸಿಬ್ಬಂದಿ–02/43/ಎಡಿಜಿಪಿ(ಅ&ತಾಂಸೇ)/09–10, ದಿನಾಂಕ: 14–05–2012.

2) ಸರ್ಕಾರದ ಆದೇಶ ಸಂಖ್ಯೆ:ಒಇ 42 ಪೊಸಿಲಿ 2012, ದಿನಾಂಕ: 26–05–2012.

3) ಸರ್ಕಾರದ ಪತ್ರ ಸಂಖ್ಯೆ:ಒಇ 42 ಪೊಸಿಲಿ 2012, ದಿನಾಂಕ: 31–07–2012 ಮತ್ತು 05–04–2013.

4) ಸರ್ಕಾರದ ಅಧಿಸೂಚನೆ ಸಂಖ್ಯೆ:ಒಇ 42 ಪೊಸಿಲಿ 2012 (ಭಾಗ–3), ದಿನಾಂಕ:29–11–2012.

5) ಆರೋಪಿತ ಅಧಿಕಾರಿಗಳ ಪತ್ರಗಳ ದಿನಾಂಕ:20–02–2013 ಮತ್ತು 23–02–2013.

6) ಡಿಜಿ ಮತ್ತು ಐಜಿಪಿ ರವರ ಪತ್ರ ಸಂಖ್ಯೆ: ಸಿಬಿ(5)11/2012–13, 20–05–2013.

ಪ್ರಸ್ತಾವನೆ:

ಮೇಲೆ ಓದಲಾದ(1)ರ ಪತ್ರದಲ್ಲಿ ಡಾ:ಮೋಹನ್, ನಿರ್ದೇಶಕರು, ನ್ಯಾ.ವಿ.ಪ್ರ/ಸದಸ್ಯ ಕಾರ್ಯದರ್ಶಿರವರು ಶ್ರೀ ಪ್ರವೀಣ್ ಪರ್ವತಪ್ಪ ಬರಿಗಿಡದ್‌ರವರಿಗೆ ಅನುಭವ ಕುರಿತಂತೆ ಸುಳ್ಳು ಪ್ರಮಾಣ ಪತ್ರ ನೀಡಿರುವುದು ಸಿ.ಐ.ಡಿ. ತನಿಖಾ ವರದಿಯಿಂದ ದೃಢಪಟ್ಟಿರುವ ಹಿನ್ನಲೆಯಲ್ಲಿ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತಿನಲ್ಲಿಟ್ಟು, ಅವರ ವಿರುದ್ಧ ಮತ್ತು ಸುಳ್ಳು ಪ್ರಮಾಣ ಪತ್ರ ಹಾಜರು ಪಡಿಸಿ ನೇಮಕಗೊಂಡಿರುವ ಶ್ರೀ ಪ್ರವೀಣ್ ಪರ್ವತಪ್ಪ ಬರಿಗಿಡದ್‌ರವರ ವಿರುದ್ಧ ಸೂಕ್ತ ಶಿಸ್ತು ಕ್ರಮ ಜರುಗಿಸಲು ಕ್ರಮ ಕೈಗೊಳ್ಳುವಂತೆ ಡಿಜಿ ಮತ್ತು ಐಜಿಪಿರವರು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಡಾ:ಬಿ.ಎಂ.ಮೋಹನ್, ನಿರ್ದೇಶಕರು, ನ್ಯಾಯ ವಿಜ್ಞಾನ ಪ್ರಯೋಗಾಲಯ, ಬೆಂಗಳೂರು ಮತ್ತು ಸದಸ್ಯ ಕಾರ್ಯದರ್ಶಿ, ವಿಶೇಷ ಆಯ್ಕೆ ಸಮಿತಿ ಮತ್ತು ಶ್ರೀ ಪ್ರವೀಣ್ ಪರ್ವತಪ್ಪ ಬರಿಗಿಡದ್, ವೈಜ್ಞಾನಿಕ ಸಹಾಯಕ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ ನಿಯಮ–11ನ್ನು ನಿಯಮ–13ರೊಂದಿಗೆ ಓದಿಕೊಂಡಂತೆ ಜಂಟಿ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ಡಾ.ಬಿ.ಎಂ.ಮೋಹನ್, ನಿರ್ದೇಶಕರು, ನ್ಯಾಯ ವಿಜ್ಞಾನ ಪ್ರಯೋಗಾಲಯ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸರ್ಕಾರಿ ಸೇವೆಯಿಂದ ಅಮಾನತ್ತಿನಲ್ಲಿಡಲಾಗಿದೆ ಎಂದು ಆದೇಶಿಸಲಾಗಿತ್ತು.

ಮೇಲೆ ಓದಲಾದ (3)ರ ದಿನಾಂಕ:31–07–2012ರಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957 ನಿಯಮ 11 & ನಿಯಮ 13ರ ಪ್ರಕಾರ ಡಾ.ಬಿ.ಎಂ.ಮೋಹನ್, ನಿರ್ದೇಶಕರು, ಎಫ್‌ಎಸ್‌ಎಲ್, ಬೆಂಗಳೂರು ಮತ್ತು ಶ್ರೀ ಪ್ರವೀಣ್ ಪರ್ವತಪ್ಪ ಬರಿಗಿಡದ್, ವೈಜ್ಞಾನಿಕ ಸಹಾಯಕರು, ಆರ್‌ಎಫ್‌ಎಸ್‌ಎಲ್, ಬೆಳಗಾವಿರವರುಗಳ ವಿರುದ್ಧ ದೋಷಾರೋಪಣೆ ಪಟ್ಟಿಯನ್ನು ಹೊರಡಿಸಲಾಗಿತ್ತು.

ಮೇಲೆ ಓದಲಾದ (4)ರ ಅಧಿಸೂಚನೆಯಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:2751/2012ರಲ್ಲಿ ದಿನಾಂಕ: 15–11–2012ರಂದು ನೀಡಿರುವ ಆದೇಶವನ್ನು ಪರಿಶೀಲಿಸಿ ಡಾ:ಬಿ.ಎಂ.ಮೋಹನ್ ಇವರ ವಿರುದ್ಧದ ಜಂಟಿ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಅವರ ಅಮಾನತ್ತನ್ನು ತೆರವುಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಿರ್ದೇಶಕರು, ನ್ಯಾಯ ವಿಜ್ಞಾನ ಪ್ರಯೋಗಾಲಯ, ಬೆಂಗಳೂರು ಹುದ್ದೆಗೆ ನೇಮಿಸಿ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (5)ರ ಪತ್ರಗಳಲ್ಲಿ ಆರೋಪಿತ ಅಧಿಕಾರಿಗಳಾದ ಡಾ.ಬಿ.ಎಂ.ಮೋಹನ್ ಮತ್ತು ಶ್ರೀ ಪರ್ವತಪ್ಪ ಬರಿಗಿಡದ್‌ರವರು ಉಲ್ಲೇಖಿತ (3)ರಲ್ಲಿ ಹೊರಡಿಸಲಾಗಿದ್ದ ದೋಷಾರೋಪಣೆಗಳಿಗೆ ಸಮಜಾಯಿಷಿಗಳನ್ನು ಒದಗಿಸಿರುತ್ತಾರೆ. ಸದರಿ ಸಮಜಾಯಿಷಿಗಳನ್ನು ಉಲ್ಲೇಖಿತ (2)ರ ದಿನಾಂಕ: 05–04–2013ರ ಪತ್ರದಲ್ಲಿ ಡಿಜಿ ಮತ್ತು ಐಜಿಪಿರವರಿಗೆ ಕಳುಹಿಸಿ, ಪರಿಶೀಲಿಸಿ ವರದಿ/ಅಭಿಪ್ರಾಯ ನೀಡುವಂತೆ ಕೋರಲಾಗಿತ್ತು.

ಮೇಲೆ ಓದಲಾದ (6)ರ ಪತ್ರದಲ್ಲಿ ಡಿಜಿ ಮತ್ತು ಐಜಿಪಿರವರು ಡಾ:ಬಿ.ಎಂ.ಮೋಹನ್, ನಿರ್ದೇಶಕರು (ನಿವೃತ್ತ) ಮತ್ತು ಶ್ರೀ ಪರ್ವತಪ್ಪ ಬರಿಗಿಡದ್, ವೈಜ್ಞಾನಿಕ ಸಹಾಯಕರು (ಹಾಲಿ ಅಮಾನತ್ತು)ರವರುಗಳ ಸಮಜಾಯಿಷಿಯನ್ನು ಪರಿಶೀಲಿಸಿ, ಸರ್ಕಾರದ ಕಾರಣ ಕೇಳುವ ನೋಟೀಸ್‌ನಲ್ಲಿ ಡಾ:ಬಿ.ಎಂ.ಮೋಹನ್, ನಿರ್ದೇಶಕರು (ನಿವೃತ್ತ)ರವರು ವಿರುದ್ಧ 9 ಆರೋಪಗಳನ್ನು ಹೊರಿಸಲಾಗಿದ್ದು, ಸದರಿಯವರು ಸಲ್ಲಿಸಿರುವ ಸಮಜಾಯಿಷಿಯಲ್ಲಿ ಕೇವಲ 7 ಆರೋಪಗಳಿಗೆ ಮಾತ್ರ ಉತ್ತರಿಸಿದ್ದು, ಅವುಗಳು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ ಎಂದೂ ಹಾಗೂ ಶ್ರೀ ಪರ್ವತಪ್ಪ ಬರಿಗಿಡದ್, ವೈಜ್ಞಾನಿಕ ಸಹಾಯಕರು (ಹಾಲಿ ಅಮಾನತ್ತು)ರವರು ಸಲ್ಲಿಸಿರುವ ಸಮಜಾಯಿಷಿಯು ಅಪೂರ್ಣವಾಗಿರುತ್ತದೆ ಎಂದೂ ತಿಳಿಸಿ ಪ್ರಕರಣದಲ್ಲಿ ಮೇಲ್ಕಂಡ ಅಧಿಕಾರಿಗಳ ವಿರುದ್ಧ ಕ್ರಮಬದ್ಧ ಇಲಾಖಾ ವಿಚಾರಣೆಗೆ ಆದೇಶಿಸಿ, ಶ್ರೀ ಎನ್.ನಾರಾಯಣ್, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯಾಗಿ ಮತ್ತು ಶ್ರೀ ಎನ್.ನಾಗರಾಜ್, ಅಡಿಷನಲ್ ಎಸ್.ಪಿ., ಬೆಂಗಳೂರು ಜಿಲ್ಲೆರವರನ್ನು ಮಂಡನಾಧಿಕಾರಿಯಾಗಿ ನೇಮಕ ಮಾಡುವಂತೆ ಕೋರಿರುತ್ತಾರೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಡಾ.ಮೋಹನ್, ನಿರ್ದೇಶಕರು (ನಿವೃತ್ತ) ಮತ್ತು ಶ್ರೀ ಪರ್ವತಪ್ಪ ಬರಿಗಿಡದ್, ವೈಜ್ಞಾನಿಕ ಸಹಾಯಕರು (ಹಾಲಿ ಅಮಾನತ್ತು)ರವರುಗಳ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಇಲಾಖಾ ವಿಚಾರಣೆಯನ್ನು ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 42 ಪೊಸಿಲಿ 2012 ಬೆಂಗಳೂರು, ದಿನಾಂಕ:04–07–2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2003ರಲ್ಲಿ ನಡೆದ ವೈಜ್ಞಾನಿಕ ಸಹಾಯಕ ನೇಮಕಾತಿ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮ ಅವ್ಯವಹಾರ ಕುರಿತಂತೆ ಸಿ.ಐ.ಡಿ. ತನಿಖಾ ವರದಿ ಅನ್ವಯ ಡಾ.ಮೋಹನ್, ನಿರ್ದೇಶಕರು (ನಿವೃತ್ತ) ಮತ್ತು ಶ್ರೀ ಪರ್ವತಪ್ಪ ಬರಿಗಿಡದ್, ವೈಜ್ಞಾನಿಕ ಸಹಾಯಕರು (ಹಾಲಿ ಅಮಾನತ್ತು)ರವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದ ಪ್ರಕರಣದಲ್ಲಿ ಶ್ರೀ ಎನ್.ನಾರಾಯಣ್, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯಾಗಿ ಮತ್ತು ಶ್ರೀ ಎನ್.ನಾಗರಾಜ್, ಅಡಿಷನಲ್ ಎಸ್.ಪಿ., ಬೆಂಗಳೂರು ಜಿಲ್ಲೆರವರನ್ನು ಮಂಡನಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ. ವಿಚಾರಣೆಯನ್ನು ನಿಯಮಾನುಸಾರ ನಡೆಸಿ ಮೂರು ತಿಂಗಳೊಳಗಾಗಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.741

ಒಳಾಡಳಿತ ಸಚಿವಾಲಯ

ವಿಷಯ: ವಿದೇಶಿ ವಿನಿಮಯ ಸಂರಕ್ಷಣೆ ಹಾಗೂ ಕಳ್ಳ ಸಾಗಣೆ ಚಟುವಟಿಕೆ ಪ್ರತಿಬಂಧಕ ಅಧಿನಿಯಮ 1974ರಡಿ ರಚಿತವಾಗಿರುವ ಸಲಹಾ ಮಂಡಳಿಯ ಗೌರವಾನ್ವಿತ ಉಚ್ಛ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ಸಿಬ್ಬಂದಿಗಳಿಗೆ ಗೌರವ ಧನವನ್ನು ನೀಡುವ ಬಗ್ಗೆ

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ ಹೆಚ್‌ಡಿ 18 ಎಸ್‌ಸಿಎಫ್ 1990; ದಿನಾಂಕ. 24.10.1990.
2. ಸರ್ಕಾರದ ಆದೇಶ ಸಂಖ್ಯೆ ಹೆಚ್‌ಡಿ 570 ಎಸ್‌ಎಸ್‌ಟಿ 1994; ದಿನಾಂಕ 10.09.1996
3. ಸರ್ಕಾರದ ಆದೇಶ ಸಂಖ್ಯೆ ಹೆಚ್‌ಡಿ 416 ಎಸ್‌ಎಸ್‌ಟಿ 1998; ದಿನಾಂಕ 08.12.1998
4. ಸರ್ಕಾರದ ಆದೇಶ ಸಂಖ್ಯೆ ಹೆಚ್‌ಡಿ 35 ಎಸ್‌ಸಿಎಫ್ 1998; ದಿನಾಂಕ. 16.12.1998.
5. ಸರ್ಕಾರದ ಆದೇಶ ಸಂಖ್ಯೆ ಹೆಚ್‌ಡಿ 05 ಎಸ್‌ಎಸ್‌ಟಿ 2013; ದಿನಾಂಕ 08.03.2013

ಪ್ರಸ್ತಾವನೆ:

ವಿದೇಶಿ ವಿನಿಮಯ ಸಂರಕ್ಷಣೆ ಹಾಗೂ ಕಳ್ಳ ಸಾಗಣೆ ಚಟುವಟಿಕೆ ಪ್ರತಿಬಂಧಕ ಅಧಿನಿಯಮ 1974ರಡಿ ರಚಿತವಾಗಿರುವ ಸಲಹಾ ಮಂಡಳಿಯ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಸಿಬ್ಬಂದಿಗಳಿಗೆ ಗೌರವ ಧನವನ್ನು ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಹೆಚ್ಚಿಸಲಾಗಿದೆ. ತದನಂತರ, ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸಿಬ್ಬಂದಿಗಳಿಗೆ ನೀಡುವ ಗೌರವ ಧನವನ್ನು ಹೊರತುಪಡಿಸಿ, ಗೌರವಾನ್ವಿತ ನ್ಯಾಯಾಧೀಶರಿಗೆ ನಿಗಧಿಪಡಿಸಿದ ಗೌರವ ಧನವನ್ನು ರದ್ದುಪಡಿಸಿ ಆದೇಶ ಹೊರಡಿಸಲಾಗಿದೆ. ಮೇಲೆ (3)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸಲಹಾ ಸಮಿತಿಯ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಇನ್ನಿತರೇ ಸಿಬ್ಬಂದಿ ವರ್ಗದವರಿಗೆ ಗೌರವ ಧನವನ್ನು ಮರು ನಿಗಧಿಪಡಿಸಿ ಆದೇಶ ಹೊರಡಿಸಲಾಗಿದ್ದು, ಸದರಿ ಆದೇಶದಂತೆ ವಿದೇಶಿ ವಿನಿಮಯ ಸಂರಕ್ಷಣೆ ಹಾಗೂ ಕಳ್ಳ ಸಾಗಣೆ ಚಟುವಟಿಕೆ ಪ್ರತಿಬಂಧಕ ಅಧಿನಿಯಮ 1974ರಡಿ ರಚಿತವಾಗಿರುವ ಸಲಹಾ ಮಂಡಳಿಯ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಸಿಬ್ಬಂದಿಗಳಿಗೆ ಗೌರವ ಧನವನ್ನು ಮೇಲೆ (4)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ. ಮೇಲೆ (5)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಅಕ್ರಮ ಭಟ್ಟಿಸಾರಾಯಿ, ಮಾದಕವಸ್ತು ಅಪರಾದಗಳು, ಜೂಜುಕೋರರು, ಗೂಂಡಗಳ ಅನೈತಿಕ ವ್ಯವಹಾರ ಅಪರಾದಗಳು ಮತ್ತು ಕೊಳಚೆ ಪ್ರದೇಶಗಳನ್ನು ಕಬಳಿಸುವವರು, ಅಪಾಯಕಾರಿ ಚಟುವಟಿಕೆಗಳ ಪ್ರತಿಬಂಧಕ ಅಧಿನಿಯಮ 1985ರ ಗೂಂಡಾ ಕಾಯ್ದೆಯಡಿ ರಚಿಸಲಾದ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಇನ್ನಿತರೆ ಸಿಬ್ಬಂದಿಗಳ ಗೌರವ ಧನವನ್ನು ಈ ಕೆಳಕಂಡಂತೆ ನಿಗಧಿಪಡಿಸಿ ಆದೇಶ ಹೊರಡಿಸಿರುತ್ತದೆ.

1	ಗೌರವಾನ್ವಿತ ಅಧ್ಯಕ್ಷರು ಮತ್ತು ಸದಸ್ಯರು, ಸಲಹಾ ಮಂಡಳಿ	` 2,500–00(ಪ್ರತಿ ಪ್ರಕರಣಕ್ಕೆ)
2	ಅಧ್ಯಕ್ಷರು ಮತ್ತು ಸದಸ್ಯರುಗಳ ಆಪ್ತ ಕಾರ್ಯದರ್ಶಿಗಳು	` 0250–00(ಪ್ರತಿ ಪ್ರಕರಣಕ್ಕೆ)
3	ಅಧ್ಯಕ್ಷರು ಮತ್ತು ಸದಸ್ಯರುಗಳ ಜಮೇದಾರ್	` 0150–00(ಪ್ರತಿ ಪ್ರಕರಣಕ್ಕೆ)

4	ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಕಾನೂನು ಮತ್ತು ಸುವ್ಯವಸ್ಥೆ)ಇಲ್ಲಿ ಕರ್ತವ್ಯ ನಿರ್ವಹಿಸುವ ಗ್ರೂಪ್-ಡಿ ನೌಕರರು	` 0150-00 (ಪ್ರತಿ ಪ್ರಕರಣಕ್ಕೆ)

ಇತ್ತೀಚಿನ ದಿನಗಳಲ್ಲಿ ಬೆಲೆ ಏರಿಕೆಯನ್ನು ಗಮನದಲ್ಲಿರಿಸಿ ಹಾಗೂ ಕರ್ನಾಟಕ ಅಕ್ರಮ ಭಟ್ಟಿಸಾರಾಯಿ, ಮಾದಕವಸ್ತು ಅಪರಾದಗಳು, ಜೂಜುಕೋರರು, ಗೂಂಡಗಳ ಅನೈತಿಕ ವ್ಯವಹಾರ ಅಪರಾದಗಳು ಮತ್ತು ಕೊಳಚೆ ಪ್ರದೇಶಗಳನ್ನು ಕಬಳಿಸುವವರು, ಅಪಾಯಕಾರಿ ಚಟುವಟಿಕೆಗಳ ಪ್ರತಿಬಂಧಕ ಅಧಿನಿಯಮ 1985ರ ಗೂಂಡಾ ಕಾಯ್ದೆಯಡಿ ರಚಿಸಲಾದ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಇನ್ನಿತರೆ ಸಿಬ್ಬಂದಿಗಳ ಗೌರವ ಧನವನ್ನು ನಿಗಧಿಪಡಿಸಿದಂತೆ ವಿದೇಶಿ ವಿನಿಮಯ ಸಂರಕ್ಷಣೆ ಹಾಗೂ ಕಳ್ಳ ಸಾಗಣೆ ಚಟುವಟಿಕೆ ಪ್ರತಿಬಂಧಕ ಅಧಿನಿಯಮ 1974ರಡಿ ರಚಿತವಾಗಿರುವ ಸಲಹಾ ಮಂಡಳಿಯ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಸಿಬ್ಬಂದಿಗಳಿಗೆ ಗೌರವ ಧನವನ್ನು ಪುನರ್ ನಿಗಧಿಪಡಿಸುವುದು ಸೂಕ್ತವೆಂದು ಸರ್ಕಾರವು ಮನಗಂಡಿದೆ. ಆದುದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 04 ಎಸ್‌ಸಿಎಫ್ 2013 ಬೆಂಗಳೂರು, ದಿನಾಂಕ: 02.07.2013

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ವಿದೇಶಿ ವಿನಿಮಯ ಸಂರಕ್ಷಣೆ ಹಾಗೂ ಕಳ್ಳ ಸಾಗಣೆ ಚಟುವಟಿಕೆ ಪ್ರತಿಬಂಧಕ ಅಧಿನಿಯಮ 1974ರಡಿ ರಚಿತವಾಗಿರುವ ಸಲಹಾ ಮಂಡಳಿಯ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಸಿಬ್ಬಂದಿಗಳ ಗೌರವ ಧನವನ್ನು ಈ ಕೆಳಗಿನಂತೆ ನಿಗಧಿಪಡಿಸಲು ಸರ್ಕಾರವು ಹರ್ಷಿಸುತ್ತದೆ.

1	ಗೌರವಾನ್ವಿತ ಅಧ್ಯಕ್ಷರು ಮತ್ತು ಸದಸ್ಯರು, ಸಲಹಾಮಂಡಳಿ	` 2,500-00(ಪ್ರತಿ ಪ್ರಕರಣಕ್ಕೆ)
2	ಅಧ್ಯಕ್ಷರು ಮತ್ತು ಸದಸ್ಯರುಗಳ ಆಪ್ತ ಕಾರ್ಯದರ್ಶಿಗಳು	` 0250-00(ಪ್ರತಿ ಪ್ರಕರಣಕ್ಕೆ)
3	ಅಧ್ಯಕ್ಷರು ಮತ್ತು ಸದಸ್ಯರುಗಳ ಜಮೇದಾರ್	` 0150-00(ಪ್ರತಿ ಪ್ರಕರಣಕ್ಕೆ)
4	ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ(ಕಾಫಿಪೋಸಾ)ಇಲ್ಲಿ ಕರ್ತವ್ಯ ನಿರ್ವಹಿಸುವ ಗ್ರೂಪ್-ಡಿ ನೌಕರರು	` 0150-00 (ಪ್ರತಿ ಪ್ರಕರಣಕ್ಕೆ)

2. ಈ ಆದೇಶವು ತಕ್ಷಣದಿಂದ ಜಾರಿಗೆ ಬರತಕ್ಕದ್ದು.

3. ಈ ವೆಚ್ಚವನ್ನು ಲೆಕ್ಕಶೀರ್ಷಿಕೆ "2052-Secretariat-General Services-090-Secretariat-I-02-Expenditure connected with Committees, Conferences and Tribunals etc., (Non-Plan)"ರ ಅಡಿಯಲ್ಲಿ ಭರಿಸತಕ್ಕದ್ದು.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ/168/ವೆಚ್ಚ-11/2013, ದಿ:28.05.2013ರಲ್ಲಿ ನೀಡಿರುವ ಸಹಮತಿಯ ರೀತ್ಯಾ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ದೇವೆಂದ್ರಪ್ಪ ಕಟ್ಟಿಮನಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಕಾಫಿಪೋಸ್ & ಅಭಿಯೋಗಗಳು)

PR.742
SC.25

ಒಳಾಡಳಿತ ಸಚಿವಾಲಯ

ವಿಷಯ: ದಿನಾಂಕ:30.06.2013ರ ವರಗೆ ಕಾರ್ಯಾವಧಿಯನ್ನು ವಿಸ್ತರಿಸಿರುವ 54 ತ್ವರಿತ ವಿಲೇವಾರಿ ನ್ಯಾಯಾಲಯಗಳಿಗೆ ಹೊಂದಿಕೊಂಡಂತಿರುವ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ 63 ಸರ್ಕಾರಿ ಅಭಿಯೋಜಕರ ತಾತ್ಕಾಲಿಕ ಹುದ್ದೆಗಳ ಕಾರ್ಯಾವಧಿಯನ್ನು ಸಹ ಮುಂದುವರೆಸಲು ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂ:ಒಇ 266 ಪಿಪಿಇ 2012, ದಿನಾಂಕ:10.07.2012,
2. ಸರ್ಕಾರದ ಆದೇಶ ಸಂ:ಒಇ 164 ಪಿಪಿಇ 2012, ದಿನಾಂಕ:24.07.2012,
3. ಸರ್ಕಾರದ ಆದೇಶ ಸಂ:ಒಇ 421 ಪಿಪಿಇ 2012, ದಿನಾಂಕ:20.12.2012,
4. ಸರ್ಕಾರದ ಆದೇಶ ಸಂ:ಲಾ 112 ಎಲ್‌ಸಿಇ 2012, ದಿನಾಂಕ:28.12.2012,
5. ಸರ್ಕಾರದ ಆದೇಶ ಸಂ:ಲಾ 112 ಎಲ್‌ಸಿಇ 2012, ದಿನಾಂಕ:28.03.2013,
6. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರು ಇವರ ಪತ್ರದ ದಿನಾಂಕ:06.04.2013.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:10.07.2012ರ ಸರ್ಕಾರದ ಆದೇಶದನ್ವಯ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಸರ್ಕಾರಿ ಅಭಿಯೋಜಕರ ತಾತ್ಕಾಲಿಕ ಹುದ್ದೆಗಳನ್ನು ಈ ಕೆಳಕಂಡಂತೆ ಸ್ಥಳಾಂತರಿಸಲಾಗಿದೆ.

ಕ್ರ.ಸಂ:	ಹುದ್ದೆಯು ಇದ್ದ ಶೀಘ್ರಗತಿ ನ್ಯಾಯಾಲಯ	ಹುದ್ದೆಯನ್ನು ಸ್ಥಳಾಂತರಿಸಲಾದ ಶೀಘ್ರಗತಿ ನ್ಯಾಯಾಲಯ	ಹುದ್ದೆಗಳ ಸಂಖ್ಯೆ
1	2ನೇ ಶೀಘ್ರಗತಿ ನ್ಯಾಯಾಲಯ ಕಾರವಾರ	ಶೀಘ್ರಗತಿ ನ್ಯಾಯಾಲಯ, ವೀರಾಜಪೇಟೆ	01
2	2ನೇ ಶೀಘ್ರಗತಿ ನ್ಯಾಯಾಲಯ, ಕೊಪ್ಪಳ	ಶೀಘ್ರಗತಿ ನ್ಯಾಯಾಲಯ, ಕನಕಪುರ, ರಾಮನಗರ ಜಿಲ್ಲೆ	01
		ಒಟ್ಟು ಹುದ್ದೆಗಳು	02

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3)ರ ದಿನಾಂಕ:24.07.2012ರ ಮತ್ತು 20.12.2012ರ ಸರ್ಕಾರದ ಆದೇಶಗಳನ್ವಯ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ 93 ಸರ್ಕಾರಿ ಅಭಿಯೋಜಕರ ತಾತ್ಕಾಲಿಕ ಹುದ್ದೆಗಳಲ್ಲಿ ಕ್ರಮವಾಗಿ 30 ಹಾಗೂ 63 ಸರ್ಕಾರಿ ಅಭಿಯೋಜಕರ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ:31.03.2013ರ ವರೆಗೆ ಅಥವಾ ಸದರಿ ನ್ಯಾಯಾಲಯಗಳು ಅಸ್ಥಿತ್ವದಲ್ಲಿರುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮುಂದುವರೆಸಲು ಮಂಜೂರಾತಿಯನ್ನು ನೀಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ದಿನಾಂಕ:28.12.2012ರ ಸರ್ಕಾರದ ಆದೇಶದನ್ವಯ ರಾಜ್ಯದಲ್ಲಿನ 93 ತ್ವರಿತಗತಿ ನ್ಯಾಯಾಲಯಗಳಲ್ಲಿ 54 ನ್ಯಾಯಾಲಯಗಳನ್ನು ರದ್ದುಗೊಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ದಿನಾಂಕ:28.12.2012ರ ಸರ್ಕಾರದ ಆದೇಶದಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ದಿನಾಂಕ:28.12.2012ರ ಸರ್ಕಾರದ ಆದೇಶದನ್ವಯ ರದ್ದುಗೊಳಿಸಿದ್ದ 54 ತ್ವರಿತಗತಿ ನ್ಯಾಯಾಲಯಗಳ ಕಾರ್ಯಾವಧಿಯನ್ನು ದಿನಾಂಕ:30.06.2013ರ ವರೆಗೆ ವಿಸ್ತರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ದಿನಾಂಕ:0604.2013ರ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರು ಇವರ ಪತ್ರದಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಿಂದ (5)ರ ಸರ್ಕಾರದ ಆದೇಶಗಳ ಹಿನ್ನಲೆಯಲ್ಲಿ 54 ತ್ವರಿತ ವಿಲೇವಾರಿ ನ್ಯಾಯಾಲಯಗಳಿಗೆ ಹೊಂದಿಕೊಂಡಂತೆ ಸೃಜನೆಗೊಂಡು, ದಿನಾಂಕ:31.03.2013ಕ್ಕೆ ಕಾರ್ಯಾವಧಿಯು ಪೂರ್ಣಗೊಂಡ 54 ಸರ್ಕಾರಿ ಅಭಿಯೋಜಕರ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ:30.06.2013ರವರೆಗೆ ಮುಂದುವರೆಸಲು ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ

ಸರ್ಕಾರದ ಆದೇಶ ಸಂಖ್ಯೆ: ಒಇ 224 ಪಿಪಿಇ 2013, ಬೆಂಗಳೂರು, ದಿನಾಂಕ: 29ನೇ ಜೂನ್ 2013.

ಪ್ರಸ್ತಾವನೆಯಲ್ಲಿನ ವಿವರಗಳ ಹಿನ್ನಲೆಯಲ್ಲಿ, ಈ ಕೆಳಕಂಡ ತ:ಖ್ತೆಯ ಅಂಕಣ (2)ರ ಸ್ಥಳದಲ್ಲಿನ ತ್ವರಿತ ವಿಲೇವಾರಿ ನ್ಯಾಯಾಲಯಗಳಿಗೆ ಹೊಂದಿಕೊಂಡಂತೆ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಗೆ ಸೃಜನೆಗೊಂಡು, ದಿನಾಂಕ:31.03.2013ಕ್ಕೆ ಕಾರ್ಯಾವಧಿಯು ಪೂರ್ಣಗೊಂಡ 54 ಸರ್ಕಾರಿ ಅಭಿಯೋಜಕರುಗಳ ತಾತ್ಕಾಲಿಕ ಹುದ್ದೆಗಳ ಕಾರ್ಯಾವಧಿಯನ್ನು ದಿನಾಂಕ:30.06.2013ರವರೆಗೆ ಮಾತ್ರ ಮುಂದುವರೆಸಲು ಮಂಜೂರಾತಿ ನೀಡಿದೆ.

1.	16ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬೆಂಗಳೂರು ನಗರ	28.	ಶೀಘ್ರ ವಿಲೇವಾರಿ ನ್ಯಾಯಾಲಯ, ಹಾವೇರಿ,
2.	17ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬೆಂಗಳೂರು ನಗರ	29.	ಶೀಘ್ರ ವಿಲೇವಾರಿ ನ್ಯಾಯಾಲಯ, ರಾಣೆಬೆನ್ನೂರು
3.	4ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬೆಂಗಳೂರುಗ್ರಾಮಂತರ	30.	ಶೀಘ್ರ ವಿಲೇವಾರಿ ನ್ಯಾಯಾಲಯ, ಕೊಡಗು– ಮಡಿಕೇರಿ
4.	5ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬೆಂಗಳೂರು ಗ್ರಾಮಾಂತರ	31.	ಶೀಘ್ರ ವಿಲೇವಾರಿ ನ್ಯಾಯಾಲಯ, ವಿರಾಜಪೇಟೆ,
5.	ಶೀಘ್ರ ವಿಲೇವಾರಿ ನ್ಯಾಯಾಲಯ, ಆನೇಕಲ್	32.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಕೋಲಾರ
6.	ಶೀಘ್ರ ವಿಲೇವಾರಿ ನ್ಯಾಯಾಲಯ, ದೊಡ್ಡಬಳ್ಳಾಪುರ	33.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಕೊಪ್ಪಳ,
7.	ಶೀಘ್ರ ವಿಲೇವಾರಿ ನ್ಯಾಯಾಲಯ, ದೇವನಹಳ್ಳಿ	34.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಮಂಡ್ಯ
8.	4ನೇಶೀಘ್ರ ವಿಲೇವಾರಿ ನ್ಯಾಯಾಲಯ, ಬೆಳಗಾವಿ,	35.	ಶೀಘ್ರ ವಿಲೇವಾರಿ ನ್ಯಾಯಾಲಯ, ಶ್ರೀರಂಗಪಟ್ಟಣ
9.	ಶೀಘ್ರ ವಿಲೇವಾರಿ ನ್ಯಾಯಾಲಯ, ಹುಕ್ಕೇರಿ	36.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಮೈಸೂರು
10.	ಶೀಘ್ರ ವಿಲೇವಾರಿ ನ್ಯಾಯಾಲಯ, ಬೈಲಹೊಂಗಲ	37.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಮೈಸೂರು
11.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬಳ್ಳಾರಿ,	38.	3ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಮೈಸೂರು
12.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬಳ್ಳಾರಿ,	39.	4ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಮೈಸೂರು
13.	ಶೀಘ್ರ ವಿಲೇವಾರಿ ನ್ಯಾಯಾಲಯ, ಹೊಸಪೇಟೆ	40.	5ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಮೈಸೂರು
14.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬೀದರ್	41.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ರಾಯಚೂರು
15.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬೀದರ್	42.	ಶೀಘ್ರ ವಿಲೇವಾರಿ ನ್ಯಾಯಾಲಯ, ರಾಮನಗರ
16.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಬಿಜಾಪುರ	43.	ಶೀಘ್ರ ವಿಲೇವಾರಿ ನ್ಯಾಯಾಲಯ, ಕನಕಪುರ. ರಾಮನಗರ ಜಿಲ್ಲೆ
17.	ಶೀಘ್ರ ವಿಲೇವಾರಿ ನ್ಯಾಯಾಲಯ, ಚಿಕ್ಕಬಳ್ಳಾಪುರ	44.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಶಿವಮೊಗ್ಗ
18.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಚಿಕ್ಕಮಗಳೂರು	45.	3ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಶಿವಮೊಗ್ಗ
19	ಶೀಘ್ರ ವಿಲೇವಾರಿ ನ್ಯಾಯಾಲಯ, ಚಿತ್ರದುರ್ಗ	46.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ತುಮಕೂರು
20.	ಶೀಘ್ರ ವಿಲೇವಾರಿ ನ್ಯಾಯಾಲಯ, ಮಂಗಳೂರು, ದ.ಕ.,	47.	3ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ತುಮಕೂರು
21.	ಶೀಘ್ರ ವಿಲೇವಾರಿ ನ್ಯಾಯಾಲಯ, ಪುತ್ತೂರು,	48.	ಶೀಘ್ರ ವಿಲೇವಾರಿ ನ್ಯಾಯಾಲಯ, ಮಧುಗಿರಿ
22.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಧಾರವಾಡ	49.	ಶೀಘ್ರ ವಿಲೇವಾರಿ ನ್ಯಾಯಾಲಯ, ತಿಪಟೂರು
23.	3ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಧಾರವಾಡ	50.	ಶೀಘ್ರ ವಿಲೇವಾರಿ ನ್ಯಾಯಾಲಯ, ಉಡುಪಿ,
24.	ಶೀಘ್ರ ವಿಲೇವಾರಿ ನ್ಯಾಯಾಲಯ, ಗದಗ್,	51.	ಶೀಘ್ರ ವಿಲೇವಾರಿ ನ್ಯಾಯಾಲಯ, ಕುಂದಾಪುರ

25.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಗುಲ್ಬರ್ಗ	52.	ಶೀಘ್ರ ವಿಲೇವಾರಿ ನ್ಯಾಯಾಲಯ, ಕಾರ್ಕಳ,
26.	2ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಹಾಸನ	53.	1ನೇ ಶೀಘ್ರ ವಿಲೇವಾರಿ ನ್ಯಾಯಾಲಯ, ಕಾರವಾರ ಉ.ಕ.,
27.	ಶೀಘ್ರ ವಿಲೇವಾರಿ ನ್ಯಾಯಾಲಯ, ಹೊಳೇನರಸೀಪುರ,	54.	ಶೀಘ್ರ ವಿಲೇವಾರಿ ನ್ಯಾಯಾಲಯ, ಯಾದಗಿರಿ

ಸದರಿ ಹುದ್ದೆಗಳಿಗೆ ತಗಲುವ ವೆಚ್ಚವನ್ನು 2014–00–114–0–02(ಯೋಜನೇತರ)" ಈ ಲೆಕ್ಕ ಶೀರ್ಷಿಕೆಯಡಿ ಭರಿಸತಕ್ಕದ್ದು.

ಸದರಿ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ: 10.07.1996ರಲ್ಲಿ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರುಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕಾಧಿಕಾರವನ್ನು ಚಲಾಯಿಸಿ, ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ:ಆಇ 176 ವೆಚ್ಚ–11/2013, ದಿನಾಂಕ:21.06.2013ರಲ್ಲಿ ನೀಡಿರುವ ನಿರ್ದೇಶನದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ದೇವೆಂದ್ರಪ್ಪ ಕಟ್ಟಿಮನಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು –ಬಿ)

PR.746

ಒಳಾಡಳಿತ ಸಚಿವಾಲಯ

ವಿಷಯ: ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಅಭಿಯೋಜಕರುಗಳಿಗೆ ಹಿರಿಯ ವೇತನ ಶ್ರೇಣಿಗೆ ಸ್ವಯ:ಚಾಲಿತ ವಿಶೇಷ ಮುಂಬಡ್ತಿಯನ್ನು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಅಧಿಸೂಚನೆ ಸಂ: ಲಾ 123 ಪಿಪಿಇ 85, ದಿನಾಂಕ:05.08.1986,
2) ಸರ್ಕಾರದ ಅಧಿಸೂಚನೆ ಸಂ: ಲಾ 161 ಪಿಪಿಇ 86, ದಿನಾಂಕ:24.07.1989,
3) ಸರ್ಕಾರದ ಅಧಿಸೂಚನೆ ಸಂ:ಲಾ 225 ಪಿಪಿಇ 1991, ದಿನಾಂಕ:10.06.1994
4) ಸರ್ಕಾರದ ಆದೇಶ ಸಂ:ಲಾ 173 ಪಿಪಿಇ 94, ದಿನಾಂಕ:22.08.1994,
5) ಸರ್ಕಾರದ ಆದೇಶ ಸಂ:ಲಾ 173 ಪಿಪಿಇ 94, ದಿನಾಂಕ:18.01.1996,
6) ಸರ್ಕಾರದ ಆದೇಶ ಸಂ:ಲಾ 228 ಪಿಪಿಇ 96, ದಿನಾಂಕ:21.12.1996,
7) ಸರ್ಕಾರದ ಆದೇಶ ಸಂ:ಲಾ 228 ಪಿಪಿಇ 96, ದಿನಾಂಕ:15.09.1999,
8) ಸರ್ಕಾರದ ಆದೇಶ ಸಂ:ಲಾ 228 ಪಿಪಿಇ 96, ದಿನಾಂಕ:02.03.2000,
9) ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ನಡವಳಿ– ಇಲಾಖಾ_ವಿಚಾರಣೆ ಸಂ:ಡಿಪಿಎನ್/ ಸಿಶಾ.1 /36/ 97–98, ದಿನಾಂಕ:02.03.2000,
10) ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಆದೇಶ ಸಂ:ಡಿಪಿಎನ್/ ಆದಾ/14/ 2006–07, ದಿನಾಂಕ:25.07.2007,
11) ಸರ್ಕಾರದ ಆದೇಶ ಸಂ:ಒಇ 255 ಪಿಪಿಇ 2007, ದಿನಾಂಕ:20.06.2008,
12) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1 /176/ 2006–07, ದಿನಾಂಕ:31.10.2008,
13) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ–1/70/ 2000–01, ದಿನಾಂಕ:01.12.2008,
14) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1 /176/ 2007–08, ದಿನಾಂಕ:02.07.2009,
15) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1 /58/ 2008–09, ದಿನಾಂಕ:06.10.2010,
16) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1 /298/ 2009–10, ದಿನಾಂಕ:21.12.2010,
17) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1/ಎ /05, 89/ 2010–11, ದಿನಾಂಕ:04.01.2011,
18) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1 /ಎ/01, 02, 03, 04, 81, 82, 83, 84, 85, 86, 87, 88, 90, 91, 92, 94, 95/2010–11, ದಿನಾಂಕ:05.01.2011,
19) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1/ಎ/93/ 2010–11, ದಿನಾಂಕ:23.07.2011,
20) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1/ಎ /141/ 2010–11, ದಿನಾಂಕ:26.09.2011,

21) ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ನಂ.ಡಿಪಿಎನ್/ ಸಿಶಾ.1:ಎ /59/ 2011–12, ದಿನಾಂಕ:14.12.2012,

22) ದಿನಾಂಕ:10.01.2013ರ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿ

ಪ್ರಸ್ತಾವನೆ:–

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯನ್ವಯ ಈ ಮುಂದಿನ ಕ್ರಮ ಸಂಖ್ಯೆ (1)ರಲ್ಲಿನ ಅಭಿಯೋಜಕರು, ಮೇಲೆ (2)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯನ್ವಯ ಕ್ರಮ ಸಂಖ್ಯೆ (2), (3), (4) ಮತ್ತು (5)ರಲ್ಲಿನ ಅಭಿಯೋಜಕರು ಹಾಗೂ ಮೇಲೆ (3)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯನ್ವಯ ಕ್ರಮ ಸಂಖ್ಯೆ (6) ರಿಂದ (28)ರಲ್ಲಿನ ಅಭಿಯೋಜಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಗೆ ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಗೆ ನೇರನೇಮಕಾತಿ ಮೂಲಕ ಆಯ್ಕೆಗೊಂಡು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.

ಕ್ರ. ಸಂ:	ಅಭಿಯೋಜಕರ ಹೆಸರು ಶ್ರೀ/ಶ್ರೀಮತಿ	ಕ್ರ. ಸಂ:	ಅಭಿಯೋಜಕರ ಹೆಸರು ಶ್ರೀ/ಶ್ರೀಮತಿ
1	ಜಿ.ಜಿ.ಗುರುದೇವ	2	ಎಸ್.ಪರಶಿವಮೂರ್ತಿ
3	ಎನ್.ನಾಗೇಂದ್ರಪ್ಪ	4	ಆರ್.ಎನ್.ಪಠಾಣ್
5	ಎಂ.ಹೆಚ್.ಜಗದಾಳೆ	6	ಮಂಜುನಾಥ್
7	ಎ.ಐ.ಖಾಜಿ	8	ಎ.ಕೆ.ಜಾಡಗೌಡ
9	ಎಸ್.ಬಿ.ಹಾವೇರಿ	10	ಬಿ.ವೀರಣ್ಣ
11	ಕೆ.ಎಸ್.ರೇವಣಸಿದ್ದಪ್ಪ	12	ಬಿ.ದೊಡ್ಡಯ್ಯ
13	ಎಲ್.ನಾಗರಾಜ್	14	ದಿವಂಗತ ಶ್ರೀ ಎಸ್.ಹೆಚ್.ಪಾಟೀಲ್
15	ಎಂ.ಉದಯಕುಮಾರ್	16	ಬಾಬಸಾಹೇಬ್ ಅಪ್ಪಾಸಾಹೇಬ್ ಗಣಿ
17	ಎಸ್.ಎಸ್.ಕುದರಿ	18	ಪಿ.ಇಕ್ಬಾಲ್ ಅಹಮದ್
19	ಎ.ಜಿ.ಪಠಾಣ	20	ಬಿ.ವಿ.ಹುಚ್ಚಾರೆಡ್ಡಿ
21	ಕೆ.ಕೆಂಚಪ್ಪ	22	ಎಂ.ಹೆಚ್.ಭಬ್ಬಿ
23	ಟಿ.ಎಂ.ನರೇಂದ್ರ	24	ಎಸ್.ಜಿ.ಫೀರಜಾದೆ
25	ರಾಜುಪೂಜಾರಿ	26	ಕೆ.ನಾಗರಾಜಾಚಾರ್
27	ಜಿ.ವೆಂಕಟೇಶ್		

ಮೇಲೆ (4)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಶ್ರೀ ಎಸ್.ಪರಶಿವಮೂರ್ತಿ (ಕ್ರಮ ಸಂಖ್ಯೆ:2) ಇವರನ್ನು ಲೋಕಾಯುಕ್ತ ಪ್ರಕರಣದ ಸಂಬಂಧ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತಿನಲ್ಲಿಟ್ಟು, ಮೇಲೆ (5)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅಭಿಯೋಜನೆ ವಿಷಯ(Prosecution)ವನ್ನು ಬಾಕಿ ಇಟ್ಟು ಅಮಾನತ್ತನ್ನು ರದ್ದು ಪಡಿಸಿದೆ. ಮುಂದೆ, ಮೇಲೆ (11)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಇವರನ್ನು ಅಮಾನತ್ತಿನಲ್ಲಿಟ್ಟ ದಿನಾಂಕ:22.08.1994 ರಿಂದ 30.01.1996ರ ವರೆಗಿನ ಅಮಾನತ್ತಿನ ಅವಧಿ (ಎರಡೂ ದಿನಗಳು ಸೇರಿ) ಎಲ್ಲಾ ಉದ್ದೇಶಗಳಿಗೂ **'ಕರ್ತವ್ಯದ ಅವಧಿ'** ಎಂಬುದಾಗಿ ಪರಿಗಣಿಸಿದೆ.

ಮೇಲೆ (6)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಶ್ರೀ ಜಿ.ಜಿ.ಗುರುದೇವ (ಕ್ರಮ ಸಂಖ್ಯೆ:1) ಇವರ ವಿರುದ್ಧ ಇಲಾಖಾ ವಿಚಾರಣೆ ಸಂಬಂಧ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತಿನಲ್ಲಿಟ್ಟು, ಮೇಲೆ (7)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಇವರ ವಿರುದ್ಧ ಆರೋಪಗಳು ಇಲಾಖಾ ವಿಚಾರಣೆಯಿಂದ ಸಾಬೀತಾಗಿಲ್ಲವಾದ್ದರಿಂದ ಅಮಾನತ್ತನ್ನು ಕೂಡಲೇ ರದ್ದು ಪಡಿಸಿ ಪುನರ್‌ನೇಮಿಸಲಾಗಿದೆ. ನಂತರದಲ್ಲಿ ಮೇಲೆ (8)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಇವರನ್ನು ಅಮಾನತ್ತಿನಲ್ಲಿಟ್ಟ ದಿನಾಂಕ:21.12.1996 ರಿಂದ 26.09.1999ರ(ಎರಡೂ ದಿನಗಳು ಸೇರಿ)ವರೆಗಿನ ಅಮಾನತ್ತಿನ ಅವಧಿಯನ್ನು **'ಕರ್ತವ್ಯದ ಅವಧಿ'** ಎಂಬುದಾಗಿ ಪರಿಗಣಿಸಿದೆ.

ಮೇಲೆ (12) ರಿಂದ (21) ರಲ್ಲಿ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ಇಲಾಖೆಯ ಪತ್ರಗಳಲ್ಲಿ, ಮೇಲೆ (1) ರಿಂದ (3)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಗಳನ್ವಯ ಅಭಿಯೋಗ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಗೆ ನೇರ ನೇಮಕಾತಿ ಮೂಲಕ ಆಯ್ಕೆಗೊಂಡು ಕರ್ತವ್ಯಕ್ಕೆ ಹಾಜರಾದ ಮೇಲೆ ಹೇಳಲಾದ ಕ್ರಮ ಸಂಖ್ಯೆ (1) ರಿಂದ (27)ರ ವರೆಗಿನ ಅಭಿಯೋಜಕರುಗಳು ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಯಲ್ಲಿ 10 ವರ್ಷಗಳ ನಿರಂತರ ಸೇವೆಯನ್ನು ಸಲ್ಲಿಸಿದ್ದಕ್ಕಾಗಿ ಆಯ್ಕೆಕಾಲಿಕ ವೇತನ ಶ್ರೇಣಿಗೆ ಈಗಾಗಲೇ ಮಂಜೂರಾತಿಯನ್ನು ನೀಡಲಾಗಿದೆ. ಮುಂದುವರೆದು, ಸದರಿಯವರುಗಳು ಸದರಿ ಹುದ್ದೆಯಲ್ಲೇ ಯಾವುದೇ ಮುಂಬಡ್ತಿ ಇಲ್ಲದೆ 15ವರ್ಷಗಳ ನಿರಂತರ ಸೇವೆಯನ್ನು ಸಲ್ಲಿಸಿರುತ್ತಾರೆ. ಆದ್ದರಿಂದ, ಇವರುಗಳು ಸದರಿ ಹುದ್ದೆಯಲ್ಲಿ 1991ರ ಕರ್ನಾಟಕ ನಾಗರೀಕಾ ಸೇವಾ(ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ) ನಿಯಮಗಳನ್ವಯ ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ಮುಂಬಡ್ತಿ ಅರ್ಹರಿರುತ್ತಾರೆ. ಸದರಿಯವರುಗಳು ಅವರುಗಳ ಸೇವಾವಧಿಯಲ್ಲಿ ಯಾವುದೇ ವೇತನ ರಹಿತ / ಅಸಾಧಾರಣ ರಜೆಯನ್ನು ಪಡೆದಿರುವುದಿಲ್ಲ ಹಾಗೂ ಅನಧಿಕೃತವಾಗಿ ಕರ್ತವ್ಯಕ್ಕೆ ಗೈರು ಹಾಜರಾಗಿರುವುದಿಲ್ಲ. ಈ ಮುಂದೆ ಹೇಳಲಾದ ಶ್ರೀ ಜಿ.ಜಿ.ಗುರುದೇವ ಮತ್ತು ಶ್ರೀ ಎಸ್.ಪರಶಿವಮೂರ್ತಿ ಇವರುಗಳನ್ನು ಹೊರತು ಪಡಿಸಿ ಇತರರನ್ನು ಅಮಾನತ್ತಿನಲ್ಲಿ ಇಟ್ಟಿರುವುದಿಲ್ಲ. ಇವರುಗಳ ವಿರುದ್ಧ ಸದರಿ ಅವಧಿಯಲ್ಲಿ ಯಾವುದೇ ಕ್ರಿಮಿನಲ್ ಪ್ರಕರಣ ದಾಖಲಾಗಿರುವುದಿಲ್ಲ.

ಆದರೆ, ಮೇಲೆ (6), (7) ಮತ್ತು (8)ರಲ್ಲಿ ಓದಲಾದ ಸರ್ಕಾರದ ಆದೇಶಗಳನ್ವಯ ಶ್ರೀ ಜಿ.ಜಿ.ಗುರುದೇವ (ಕ್ರಮ ಸಂಖ್ಯೆ:1) ಇವರನ್ನು ಅಮಾನತ್ತಿನಲ್ಲಿಟ್ಟು, ಅಮಾನತ್ತನ್ನು ರದ್ದು ಪಡಿಸಿ ಹಾಗೂ ದಿನಾಂಕ:21.12.1996 ರಿಂದ 26.09.1999ರ(ಎರಡೂ ದಿನಗಳು ಸೇರಿ)ವರೆಗಿನ ಅಮಾನತ್ತಿನ ಅವಧಿಯನ್ನು **'ಕರ್ತವ್ಯದ ಅವಧಿ'** ಎಂಬುದಾಗಿ ಪರಿಗಣಿಸಿದೆ.

ಮೇಲೆ (4) (5) ಮತ್ತು (11) ರಲ್ಲಿ ಓದಲಾದ ಸರ್ಕಾರದ ಆದೇಶಗಳನ್ವಯ ಶ್ರೀ ಎಸ್.ಪರಶಿವಮೂರ್ತಿ (ಕ್ರಮ ಸಂಖ್ಯೆ:2) ಇವರ ದಿನಾಂಕ:22.08.1994 ರಿಂದ 30.01.1996ರ ವರೆಗಿನ ಅಮಾನತ್ತಿನ ಅವಧಿಯನ್ನು, (ಎರಡೂ ದಿನಗಳು ಸೇರಿ) ಎಲ್ಲಾ ಉದ್ದೇಶಗಳಿಗೂ **'ಕರ್ತವ್ಯದ ಅವಧಿ'** ಎಂಬುದಾಗಿ ಪರಿಗಣಿಸಿದೆ.

ಮೇಲೆ (9)ರಲ್ಲಿ ಓದಲಾದ ಶ್ರೀ ಎಂ.ಹೆಚ್.ಜಗದಾಳೆ(ಕ್ರ.ಸಂ:5) ಇವರ ವಿರುದ್ಧ ಇಲಾಖಾ ವಿಚಾರಣೆ ಸಂಬಂಧದ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆರವರ ನಡವಳಿಯಲ್ಲಿ ಮುಂದಿನ ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ರಹಿತವಾಗಿ ತಡೆಹಿಡಿಯಲು ಆದೇಶಿಸಲಾಗಿದೆ.

ಮೇಲೆ (10)ರಲ್ಲಿ ಓದಲಾದ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಆದೇಶದನ್ವಯ ಶ್ರೀ ಬಿ.ದೊಡ್ಡಯ್ಯ(ಕ್ರಮ ಸಂಖ್ಯೆ:12) ಇವರ ಮುಂದಿನ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತರಹಿತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿದೆ.

ಸದರಿ ಅಭಿಯೋಜಕರುಗಳಿಗೆ 1991ರ ಕರ್ನಾಟಕ ನಾಗರೀಕಾ ಸೇವಾ(ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ) ನಿಯಮಗಳನ್ವಯ ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ಮುಂಬಡ್ತಿ ನೀಡುವ ಅವಧಿಯ ನಿಟಕಪೂರ್ವದ 5 ವರ್ಷಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಪರಿಶೀಲಿಸಿದೆ. ಯಾವುದೇ ಪ್ರತಿಕೂಲ ಷರಾ ಇರುವುದಿಲ್ಲ.

ಮೇಲೆ (22)ರಲ್ಲಿ ಓದಲಾದ ದಿನಾಂಕ:10.01.2013ರಂದು ಜರುಗಿದ ಇಲಾಖಾ ಮುಂಬಡ್ತಿ ಸಮಿತಿಯ ಸಭೆಯು ಇವರುಗಳಿಗೆ 1991ರ ಕರ್ನಾಟಕ ನಾಗರೀಕಾ ಸೇವಾ(ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ) ನಿಯಮಗಳನ್ವಯ ಮತ್ತು ಈ ಸಂಬಂಧದ ಚಾಲ್ತಿಯಲ್ಲಿರುವ ನಿಯಮಗಳನುಸಾರ ಮೇಲೆ ಹೇಳಲಾದ ಅಭಿಯೋಜಕರುಗಳಿಗೆ ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವೇತನ ಶ್ರೇಣಿಯನ್ನು ಅರ್ಹರಿರುವ ದಿನಾಂಕದಿಂದ ಮಂಜೂರು ಮಾಡಲು ಅನುಮೋದನೆ ನೀಡಿದೆ.

ಆದ್ದರಿಂದ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂ. ಒಇ 225 ಪಿಪಿಇ 2011, ಬೆಂಗಳೂರು, ದಿನಾಂಕ : 28ನೇ ಜೂನ್ 2013

ಪ್ರಸ್ತಾವನೆಯಲ್ಲಿನ ಅಂಶಗಳ ಹಿನ್ನಲೆಯಲ್ಲಿ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಈ ಕೆಳಕಂಡ ಅಂಕಣ (2)ರಲ್ಲಿನ ಅಭಿಯೋಜಕರುಗಳಿಗೆ 1991ರ ಕರ್ನಾಟಕ ನಾಗರೀಕಾ ಸೇವಾ(ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ) ನಿಯಮಗಳನ್ವಯ ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ಮುಂಬಡ್ತಿಯನ್ನು ಸರ್ಕಾರದ ಆದೇಶ ಸಂ:ಎಫ್‌ಡಿ 24 ಎಸ್‌ಆರ್‌ಪಿ 2006, ದಿನಾಂಕ:27.11.2006ರ / 2007ರ ಕರ್ನಾಟಕ ನಾಗರೀಕಾ ಸೇವಾ (ವೇತನ ಪರಿಷ್ಕರಣೆ) ನಿಯಮಗಳ ಸರ್ಕಾರಿ ಆದೇಶ ಸಂ: ಎಫ್‌ಡಿ 17 ಎಸ್‌ಆರ್‌ಪಿ 2007, ದಿನಾಂಕ:16.05.2007ರನ್ವಯ ಅಂಕಣ (3)ರ ದಿನಾಂಕದಿಂದ ಅನ್ವಯವಾಗುವಂತೆ ಅಂಕಣ (4)ರ ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ ನೀಡಲು ಮಂಜೂರಾತಿ ನೀಡಿದೆ.

ಕ್ರ. ಸಂ:	ಅಭಿಯೋಜಕರ ಹೆಸರು ಶ್ರೀ/ಶ್ರೀಮತಿ	ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿಗೆ ಮಂಜೂರಾತಿ ನೀಡಿರುವ ದಿನಾಂಕ:	ಮಂಜೂರು ಮಾಡಿರುವ ಹಿರಿಯ ವೇತನ ಶ್ರೇಣಿ
1	ಜಿ.ಜಿ.ಗುರುದೇವ	18.08.2001	`.7400–200–8800–260–10880–320–13120
2	ಎಸ್.ಪರಶಿವಮೂರ್ತಿ	04.08.2004	` .7400–200–8800–260–10880–320–13120
3	ಎನ್.ನಾಗೇಂದ್ರಪ್ಪ	05.08.2004	` .7400–200–8800–260–10880–320–13120
4	ಆರ್.ಎನ್.ಪಠಾಣ್	05.08.2004	` .7400–200–8800–260–10880–320–13120
5	ಎಂ.ಹೆಚ್.ಜಗದಾಳೆ	05.08.2006	` .7400–200–8800–260–10880–320–13120
6	ಮಂಜುನಾಥ್	24.06.2009	`.13000–350–14400–400–16800–450–19500–525–22650–600–23850
7	ಎ.ಐ.ಖಾಜಿ	23.06.2009	`.13000–350–14400–400–16800–450–19500–525–22650–600–23850
8	ಎ.ಕೆ.ಜಾಡಗೌಡ	23.06.2009	`.13000–350–14400–400–16800–450–19500–525–22650–600–23850
9	ಎಸ್.ಬಿ.ಹಾವೇರಿ	24.06.2009	`.13000–350–14400–400–16800–450–19500–525–22650–600–23850
10	ಬಿ.ವೀರಣ್ಣ	24.06.2009	`.13000–350–14400–400–16800–450–19500–525–22650–600–23850
11	ಕೆ.ಎಸ್.ರೇವಣಸಿದ್ದಪ್ಪ	23.06.2009	`.13000–350–14400–400–16800–450–19500–525–22650–600–23850
12	ಬಿ.ದೊಡ್ಡಯ್ಯ	23.06.2010	`.13000–350–14400–400–16800–450–19500–525–22650–600–23850

ಕ್ರ. ಸಂ:	ಅಭಿಯೋಜಕರ ಹೆಸರು ಶ್ರೀ/ಶ್ರೀಮತಿ	ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿಗೆ ಮಂಜೂರಾತಿ ನೀಡಿರುವ ದಿನಾಂಕ:	ಮಂಜೂರು ಮಾಡಿರುವ ಹಿರಿಯ ವೇತನ ಶ್ರೇಣಿ
13	ಎಲ್.ನಾಗರಾಜ್	24.06.2009	`.13000–350–14400–400–16800–450–19500–525–22650–600–23850
14	ದಿವಂಗತ ಶ್ರೀ ಎಸ್.ಹೆಚ್.ಪಾಟೀಲ್	25.06.2009	`.13000–350–14400–400–16800–450–19500–525–22650–600–23850
15	ಎಂ.ಉದಯಕುಮಾರ್	27.06.2009	`.13000–350–14400–400–16800–450–19500–525–22650–600–23850
16	ಬಾಬಸಾಹೇಬ್ ಅಪ್ಪಾಸಾಹೇಬ್ ಗಣಿ	22.06.2009	`.13000–350–14400–400–16800–450–19500–525–22650–600–23850
17	ಎಸ್.ಎಸ್.ಕುದರಿ	25.06.2009	`.13000–350–14400–400–16800–450–19500–525–22650–600–23850
18	ಪಿ.ಇಕ್ಬಾಲ್ ಅಹಮದ್	25.06.2009	`.13000–350–14400–400–16800–450–19500–525–22650–600–23850
19	ಎ.ಜಿ.ಪಠಾಣ	26.06.2009	`.13000–350–14400–400–16800–450–19500–525–22650–600–23850
20	ಬಿ.ವಿ.ಹುಚ್ಚಾರೆಡ್ಡಿ	25.06.2009	`.13000–350–14400–400–16800–450–19500–525–22650–600–23850
21	ಕೆ.ಕೆಂಚಪ್ಪ	25.06.2009	`.13000–350–14400–400–16800–450–19500–525–22650–600–23850
22	ಎಂ.ಹೆಚ್.ಛಬ್ಬಿ	24.06.2009	`.13000–350–14400–400–16800–450–19500–525–22650–600–23850
23	ಟಿ.ಎಂ.ನರೇಂದ್ರ	23.06.2009	`.13000–350–14400–400–16800–450–19500–525–22650–600–23850
24	ಎಸ್.ಜಿ.ಫೀರಜಾದೆ	25.06.2009	`.13000–350–14400–400–16800–450–19500–525–22650–600–23850
25	ರಾಜುಪೂಜಾರಿ	25.06.2009	`.13000–350–14400–400–16800–450–19500–525–22650–600–23850
26	ಕೆ.ನಾಗರಾಜಾಚಾರ್	24.06.2009	`.13000–350–14400–400–16800–450–19500–525–22650–600–23850
27	ಜಿ.ವೆಂಕಟೇಶ್	24.06.2009	`.13000–350–14400–400–16800–450–19500–525–22650–600–23850

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ದೇವೆಂದ್ರಪ್ಪ ಕಟ್ಟಿಮನಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು –ಬಿ)

PR.745

ಒಳಾಡಳಿತ ಸಚಿವಾಲಯ

ವಿಷಯ: ಕರ್ನಾಟಕ ರಾಜ್ಯದಲ್ಲಿ ವಿಪತ್ತು ಸ್ಪಂದನಾ ಪಡೆಯನ್ನು ರಚಿಸುವ ಕುರಿತು.

ಓದಲಾಗಿದೆ: 1. ರಾಷ್ಟ್ರೀಯ ನಿರ್ವಹಣಾ ಪ್ರಾಧಿಕಾರಿ ಪತ್ರ ಸಂ: NDMA/NDRF/ SDRF-Trg/254 (Pt-III) /2012-4467, ದಿನಾಂಕ: 12–10–2012.

2. ಆರಕ್ಷಕ ಮಹಾ ನಿರೀಕ್ಷಕರು, ಗೃಹ ರಕ್ಷಕದಳ ಮಹಾಸಮಾದೇಷ್ಟರು ಮತ್ತು ನಿರ್ದೇಶಕರು, ಪೌರರಕ್ಷಣೆ ಹಾಗೂ ಮಹಾ ನಿರ್ದೇಶಕರು, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಇವರ ಪತ್ರ ಸಂ: ಡಿಜಿಪಿ/ಎಫ್ಇಎಸ್/ಎನ್‌ಡಿಆರ್‌ಎಫ್ (ಪಿ) 2/2012–13, ದಿನಾಂಕ: 26–02–2013

ಪ್ರಸ್ತಾವನೆ:

ಮೇಲೆ ಓದಲಾದ (1)ರ ಪತ್ರದಲ್ಲಿ ರಾಷ್ಟ್ರೀಯ ನಿರ್ವಹಣಾ ಪ್ರಾಧಿಕಾರವು (National Disaster Management Authority) ನೀಡಿರುವ ಸಲಹೆ ಮೇರೆಗೆ ವಿಪತ್ತು ನಿರ್ವಹಣೆ ಅಧಿನಿಯಮ 2005 ರನ್ವಯ ಈಗಾಗಲೇ ರಾಷ್ಟ್ರ ಮಟ್ಟದಲ್ಲಿ ಎನ್.ಡಿ.ಆರ್.ಎಫ್. ಕಾರ್ಯ ನಿರ್ವಹಿಸುತ್ತಿದೆ. ಅದ್ದರಿಂದ, ಪ್ರತಿ ರಾಜ್ಯದಲ್ಲಿಯೂ ರಾಜ್ಯ ವಿಪತ್ತು ಸ್ಪಂದನಾ ಪಡೆಯನ್ನು ರಚಿಸಬೇಕಾಗಿದ್ದು, ಕರ್ನಾಟಕ ರಾಜ್ಯದಲ್ಲಿ ರಾಜ್ಯ ವಿಪತ್ತು ಸ್ಪಂದನಾ ಪಡೆ (ಎಸ್.ಡಿ.ಆರ್.ಎಫ್.) ಯನ್ನು ರಚಿಸುವ ಕುರಿತಂತೆ ದಿನಾಂಕ: 19–12–2012 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರು, ಕಂದಾಯ ಇಲಾಖೆಯ ಕಾರ್ಯದರ್ಶಿ ಹಾಗೂ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ, ಪೊಲೀಸ್ ಇಲಾಖೆಯ ಅಧಿಕಾರಿಗಳನ್ನೊಳಗೊಂಡಂತೆ ಸುದೀರ್ಘವಾಗಿ ಸಭೆ ನಡೆಯಿತು. ಹಿಂದಿನ ಸನ್ಮಾನ್ಯ ಮುಖ್ಯ ಮಂತ್ರಿಯವರು 2013–14ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 230ರಲ್ಲಿ ರಾಜ್ಯದಲ್ಲಿ ಎಸ್.ಡಿ.ಆರ್.ಎಫ್. ರಚಿಸುವುದಾಗಿ ಘೋಷಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಎಸ್.ಡಿ.ಆರ್.ಎಫ್. ರಚಿಸುವ ಬಗ್ಗೆ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿರುತ್ತದೆ.

ಅ) ರಾಷ್ಟ್ರೀಯ ವಿಪತ್ತು ಸ್ಪಂದನಾ ಪಡೆಯ ಮಾದರಿಯಲ್ಲೇ ರಾಜ್ಯ ವಿಪತ್ತು ಸ್ಪಂದನಾ ಪಡೆಯನ್ನು ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ಸಮಾದೇಷ್ಟರು, ಗೃಹರಕ್ಷಕ ದಳ ಮತ್ತು ನಿರ್ದೇಶಕರು ಪೌರರಕ್ಷಣೆ ಹಾಗೂ ಮಹಾ ನಿರ್ದೇಶಕರು, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಇವರ ನೇತೃತ್ವದಲ್ಲಿ ಸೃಜಿಸುವುದು;

ಆ) ಈ ಪಡೆಯು ಮುಖ್ಯವಾಗಿ ಕೆ.ಎಸ್.ಆರ್.ಪಿ., ಕೆ.ಎಸ್.ಐ.ಎಸ್.ಎಫ್, ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಇಲಾಖೆ ಹಾಗೂ ರಾಜ್ಯ ಗೃಹರಕ್ಷಕದಳ ಹಾಗೂ ಪೌರರಕ್ಷಣೆ ಇಲಾಖೆಗಳಿಂದ ನಿಯೋಜಿಸಿದ ಸಿಬ್ಬಂದಿಗಳನ್ನು ಒಳಗೊಂಡಿರುತ್ತದೆ.

2) ರಾಜ್ಯದಲ್ಲಿ ರಚಿಸಲು ಉದ್ದೇಶಿಸಿರುವ ರಾಜ್ಯ ವಿಪತ್ತು ಸ್ಪಂದನಾ ಪಡೆಯ ಆಯವ್ಯಯದ ವಿವರ ಇತ್ಯಾದಿ ಅಂಶಗಳನ್ನೊಳಗೊಂಡಂತೆ ಸಮಗ್ರವಾದ ವಿವರ ಈ ಕೆಳಕಂಡಂತೆ ಇದೆ.

ಚಾವಿಸನಿನಿ	410434	98.33
	2290621	**294.24**

ಸರ್ಕಾರವು ಈ ಯೋಜನೆಯನ್ನು ಪರಿಶೀಲಿಸಿದ್ದು ದಿನಾಂಕ: 13.05.2013ರ ವರೆಗೆ ಭಾಗ್ಯ ಜ್ಯೋತಿ / ಕುಟೀರ ಜ್ಯೋತಿ ಸ್ಥಾವರಗಳ ಲೆಕ್ಕದಲ್ಲಿರುವ ವಿದ್ಯುತ್ ಬಾಕಿಯನ್ನು ಮನ್ನಾ ಮಾಡಲು ನಿರ್ಧರಿಸಿರುವ ಹಿನ್ನಲೆಯಲ್ಲಿ, ಪ್ರಸ್ತುತ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಇಎನ್ 34 ಪಿಎಸ್ ಆರ್ 2013, ಬೆಂಗಳೂರು, ದಿನಾಂಕ: 17.05.2013

ಮೇಲಿನ ಪ್ರಸ್ತಾವನೆಯಲ್ಲಿನ ಅಂಶಗಳನ್ನು ಒಳಗೊಂಡು, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ:–

1. ದಿನಾಂಕ: 13.05.2013 ರಲ್ಲಿದ್ದಂತೆ, ಭಾಗ್ಯಜ್ಯೋತಿ / ಕುಟೀರ ಜ್ಯೋತಿ ಸ್ಥಾವರಗಳ ದಂಡ ಸಹಿತ ಬಾಕಿ ಮೊತ್ತವನ್ನು ಮನ್ನಾ ಮಾಡಲಾಗಿದೆ.
2. ಈ ಸಂಬಂಧ ಭಾಗ್ಯಜ್ಯೋತಿ / ಕುಟೀರ ಜ್ಯೋತಿ ಸ್ಥಾವರಗಳಿಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಿದ್ದಲ್ಲಿ ಅಂತಹ ಸ್ಥಾವರಗಳಿಗೆ ಕೂಡಲೆ ವಿದ್ಯುತ್ ಸಂಪರ್ಕಗೊಳಿಸುವುದು.
3. ಮುಂದುವರೆದು, ದಿನಾಂಕ 14.05.2013ರಿಂದ ಭಾಗ್ಯಜ್ಯೋತಿ / ಕುಟೀರ ಜ್ಯೋತಿ ಸ್ಥಾವರಗಳ ಫಲಾನುಭವಿ ಗ್ರಾಹಕರಿಂದ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ನಿಯಮಾವಳಿ ಪ್ರಕಾರ ವಿದ್ಯುತ್ ದರವನ್ನು ಆಯಾ ವಿದ್ಯುತ್ ಸರಬರಾಜು ಕಂಪನಿಗಳು ತಪ್ಪದೆ ಕಾಲಮಿತಿಯೊಳಗೆ ವಸೂಲಿ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ ಮತ್ತು ಅವರ ಹೆಸರಿನಲ್ಲಿ,

ಎ.ಎ. ಚಪ್ಪರ್‌ಬಂದ್

ಸರ್ಕಾರದ ಅಧೀನ ಕಾರ್ಯದರ್ಶಿ.

ಇಂಧನ ಇಲಾಖೆ.

PR.723

ENERGY SECRETARIAT

Sub Relaxation of Article 17 (c) (4) of KFC 1957 for the first six months of 2013-14.

Read: Finance Department U.O. Note NO: FD 506 Exp/1 2013 dated: 14.05.2013.

Preamble:

1. As per the Article 17 (c)(4) of KFC 1957 the Accountant General is required to issue the authority of intimation for payment by State Huzur Treasury on account of Government investments in Companies.
2. The Finance Dept has concurred for relaxation of Article 17 (c) (4) of the Karnataka Financial Code 1957 for the first six months of 2013-14 vide Note No. FD 506 Exp/1 2013 dated: 14.05.2013. Hence, this order.

GOVERNMENT ORDER NO. EN 15 PSR 2013 BANGALORE, DATED 24th May 2013

1. Under the circumstances explained above, Government is pleased to relax the conditions of issuing of Authority of Intimation by Accountant General for payment by Treasuries on account of Government's Investments (Equity) required under Article 17 (c)(4) of Karnataka Financial Code 1957 for the first six months of FY 2013-14.
2. This order is issued with the concurrence of the Finance Dept vide Note No: FD 506 Exp/1 2013 dated: 14.05.2013.

BY ORDER AND IN THE NAME OF GOVERNOR OF KARNATAKA,
A.A. CHAPPARBAND
UNDER SECRETARY TO GOVERNMENT,
ENERGY DEPARTMENT

PR.722

ಇಂಧನ ಸಚಿವಾಲಯ

ವಿಷಯ: ಕವಿಪ್ರನಿನಿ ಮತ್ತು ವಿಸಕಂಗಳ ಪಿಂಚಣಿ ಮತ್ತು ಉಪದಾನ ಟ್ರಸ್ಟ್‌ಗಳಿಗೆ ಪಿಂಚಣಿ ಹಣ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: 1. ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಇ 14 ಪಿಎಸ್‌ಆರ್ 2002 ದಿನಾಂಕ 31.05.2002
2. ಸರ್ಕಾರಿ ಆದೇಶ ಸಂಖ್ಯೆ: ಡಿಇ 15 ಪಿಎಸ್‌ಆರ್ 2002 ದಿನಾಂಕ 19.12.2002
3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2013 ದಿನಾಂಕ 20.04.2013.

ಪ್ರಸ್ತಾವನೆ:

1. ಮೇಲೆ (1) ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ (ಕವಿಪ್ರನಿನಿ) ಉದ್ಯಮಗಳು ಮತ್ತು ಅದರ ಸಿಬ್ಬಂದಿಯು ವಿದ್ಯುಚ್ಛಕ್ತಿ ವಿತರಣಾ ಮತ್ತು ವಿದ್ಯುತ್ ಸರಬರಾಜು ಕಂಪನಿಗಳ ವರ್ಗಾವಣೆ) ನಿಯಮಗಳು, 2002, ನಿಯಮ 4(13)(1) ಪ್ರಕಾರ ನಿರ್ದಿಷ್ಟಪಡಿಸಲಾದ ಸಿಬ್ಬಂದಿಯ ಸೇವೆಗಳನ್ನು ಎರಡನೇ ವರ್ಗಾವಣೆ ದಿನಾಂಕದ ಜಾರಿಗೆ ಮೊದಲು ಮತ್ತು ಕರ್ನಾಟಕ ವಿದ್ಯುತ್ ಮಂಡಳಿ ಮತ್ತು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ (ಕವಿಪ್ರನಿನಿ) ನಿರ್ದಿಷ್ಟಪಡಿಸಲಾದ ಸಿಬ್ಬಂದಿಯು ಸಲ್ಲಿಸಿದ ಸೇವೆಗಳಿಗಾಗಿ ನಿವೃತ್ತಿ ವೇತನ ನಿಧಿಗಳು ಮತ್ತು ಶಾಸನ ಪ್ರದತ್ತ ಹಾಗೂ ಇತರೇ ಸಿಬ್ಬಂದಿ ಸಂಬಂಧಿತ ನಿಧಿಗಳ ಸಂಗ್ರಹಣೆಗೆ ರಾಜ್ಯ ಸರ್ಕಾರವು ಜವಾಬ್ದಾರಿಯಾಗಿರುವುದೇ ಹೊರತು ವಿದ್ಯುತ್ ಸರಬರಾಜು ಕಂಪನಿಯದಲ್ಲ ಮತ್ತು ನಿರ್ದಿಷ್ಟಪಡಿಸಲಾದ ಸಿಬ್ಬಂದಿಯ ಎರಡನೇ ವರ್ಗಾವಣೆ ಜಾರಿಯಾದ ಆಯಾಯ ದಿನಾಂಕದಲ್ಲಿದ್ದಂತೆ ನಿಧಿ ಸಂಗ್ರಹಣೆ ಮಾಡದ ಮಟ್ಟಿಗೆ ರಾಜ್ಯ ಸರ್ಕಾರವು ಹೊಣೆಯಾಗಿರುವುದೇ ಹೊರತು ವಿದ್ಯುತ್ ಸರಬರಾಜು ಕಂಪನಿಯದಲ್ಲವೆಂದು ತಿಳಿಸಲಾಗಿದೆ.
2. ಮೇಲೆ(2) ರಲ್ಲಿ ಓದಲಾದ ಸರ್ಕಾರಿ ಆದೇಶದ ಪ್ರಕಾರ, ಕವಿಪ್ರನಿನಿ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ನ್ನು, "ಕವಿಪ್ರನಿನಿ ಮತ್ತು ಎಸ್ಕಾಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗಳೆಂದು" ಮರುನಾಮಕರಣ ಮಾಡಿ, Pay as You Go ಪದ್ದತಿಯನ್ನು ಅನುಸರಿಸಿ ಕವಿಪ್ರನಿನಿ ಮತ್ತು ಎಸ್ಕಾಂಗಳ ನೌಕರರ ನಿವೃತ್ತಿ ಸೌಲಭ್ಯಗಳನ್ನು (Terminal Benefits) ಪಾವತಿಸಲು ಒಪ್ಪಿಗೆ ನೀಡಿದೆ.
3. 2013–14ನೇ ಸಾಲಿನ ಆಯವ್ಯಯದಲ್ಲಿ ಕವಿಪ್ರನಿನಿ ಮತ್ತು ವಿಸಕಂಗಳ ಪಿಂಚಣಿ ಮತ್ತು ಉಪದಾನ ಟ್ರಸ್ಟ್‌ಗಳಿಗೆ ಪಿಂಚಣಿ ವಂತಿಗೆಗಾಗಿ "2801–80–101–1–13–106 (ಯೋಜನೇತರ)" ಲೆಕ್ಕಶೀರ್ಷಿಕೆಯಡಿ ರೂ.500.00 ಕೋಟಿಗಳನ್ನು ಒದಗಿಸಲಾಗಿರುತ್ತದೆ.
4. ಕವಿಪ್ರನಿನಿ ಮತ್ತು ವಿಸಕಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗಳ ಕೋರಿಕೆಯನ್ನು ಸರ್ಕಾರವು ಪರಿಶೀಲಿಸಿ, 2013–14ನೇ ಸಾಲಿನ ಮೊದಲನೇ ತ್ರೈಮಾಸಿಕಕ್ಕೆ ಲೆಕ್ಕಶೀರ್ಷಿಕೆ "2801–80–101–1–13–106" ಸಹಾಯಧನ (ಯೋಜನೇತರ) ಅಡಿಯಲ್ಲಿ ರೂ. 125.00 ಕೋಟಿಗಳ ಅನುದಾನ ಬಿಡುಗಡೆ ಮಾಡಲು ಪ್ರಸ್ತುತ ಸರ್ಕಾರಿ ಆದೇಶ.

ಸರ್ಕಾರದ ಆದೇಶ ಸಂಖ್ಯೆ ಇಎನ್ 7 ಪಿಎಸ್‌ಆರ್ 2013 ಬೆಂಗಳೂರು, ದಿನಾಂಕ: 10.05.2013

1. ಸರ್ಕಾರವು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ಎಸ್ಕಾಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗೆ 2013–14ನೇ ಸಾಲಿನ ಮೊದಲನೇ ತ್ರೈಮಾಸಿಕಕ್ಕೆ ಲೆಕ್ಕಶೀರ್ಷಿಕೆ "2801–80–101–1–13–106" ಸಹಾಯಧನ (ಯೋಜನೇತರ)ದ ಅಡಿಯಲ್ಲಿ ರೂ. 125.00 ಕೋಟಿ (ನೂರ ಇಪ್ಪತ್ತೈದು ಕೋಟಿಗಳು ಮಾತ್ರ) ಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ.
2. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಸರ್ಕಾರದ ಉಪ ಕಾರ್ಯದರ್ಶಿ, ಇಂಧನ ಇಲಾಖೆಯವರ ಮೇಲು ರುಜುವನ್ನು ಸ್ವೀಕೃತ ರಸೀದಿಯಲ್ಲಿ ಪಡೆದು ಹಣವನ್ನು ಪಡೆಯತಕ್ಕದ್ದು.
3. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು "ಕವಿಪ್ರನಿನಿ ಮತ್ತು ಎಸ್ಕಾಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗೆ" ಬಿಡುಗಡೆ ಮಾಡಿರುವ ಅನುದಾನದ ಬಳಕೆಯ ಬಗ್ಗೆ ದೃಢೀಕರಣ ಪತ್ರ (Utilisation Certificate)ನ್ನು ಸಲ್ಲಿಸತಕ್ಕದ್ದು.
4. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ FD 01 TFP 2013, ಬೆಂಗಳೂರು, ದಿನಾಂಕ: 20.04.2013ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ ಮತ್ತು ಅವರ ಹೆಸರಿನಲ್ಲಿ,
ಹೆಚ್.ಆರ್.ನಾಗೇಂದ್ರ,
ಸರ್ಕಾರದ ಉಪ ಕಾರ್ಯದರ್ಶಿ.
ಇಂಧನ ಇಲಾಖೆ.

PR.720

ಇಂಧನ ಸಚಿವಾಲಯ

ವಿಷಯ: ಭಾಗ್ಯಜ್ಯೋತಿ/ಕುಟೀರಜ್ಯೋತಿ ಮತ್ತು 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುವುದಕ್ಕಾಗಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಸಹಾಯಧನ ಬಿಡುಗಡೆ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಇಎನ್ 145 ಪಿಎಸ್‌ಆರ್ 2004 ದಿನಾಂಕ 15.03.2005.

2. ಸರ್ಕಾರಿ ಆದೇಶ ಸಂಖ್ಯೆ: ಇಎನ್ 55 ಪಿಎಸ್‌ಆರ್ 2008 ದಿನಾಂಕ 04.09.2008.

3. ಸರ್ಕಾರಿ ಆದೇಶ ಸಂಖ್ಯೆ: ಇಎನ್ 13 ಪಿಎಸ್‌ಆರ್ 2013 ದಿನಾಂಕ 05.04.2013, 26.04.2013 ಮತ್ತು 02.05.2013.

ಪ್ರಸ್ತಾವನೆ:

1. ಮೇಲಿನ ಕ್ರಮಾಂಕ-1ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ "ಭಾಗ್ಯಜ್ಯೋತಿ/ಕುಟೀರಜ್ಯೋತಿ ವಿದ್ಯುತ್ ಸ್ಥಾವರ ಒಂದಕ್ಕೆ ಪ್ರತಿ ತಿಂಗಳು 18 ಯೂನಿಟ್‌ವರೆಗೆ ಮಾತ್ರ ಉಚಿತ ವಿದ್ಯುತ್ ಒದಗಿಸಲು (ನಿಗದಿಪಡಿಸಿದ ನಿಬಂಧನೆ ಮತ್ತು ಷರತ್ತಿಗೆ ಒಳಪಟ್ಟು) ಅನುಮೋದನೆ ನೀಡಲಾಗಿರುತ್ತದೆ.
2. ಮೇಲಿನ ಕ್ರಮಾಂಕ-2ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ [ಗೊತ್ತುಪಡಿಸಲಾದ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು] ಮುಂದಿನ ಆದೇಶದವರೆಗೆ ದಿನಾಂಕ 01-08-2008ರಿಂದ ಜಾರಿಗೆ ಬರುವಂತೆ ರೈತರ 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುವುದಕ್ಕೆ ಸಂಬಂಧಿಸಿದಂತೆ ವಿದ್ಯುತ್ ಸರಬರಾಜು ಕಂಪನಿಗಳ ಬೇಡಿಕೆ ಮೊಬಲಗು ಸರ್ಕಾರದಿಂದ ಮರುಪಾವತಿಸುವುದಕ್ಕೆ ಅನುಮೋದನೆ ನೀಡಲಾಗಿರುತ್ತದೆ.
3. ವಿದ್ಯುತ್ ಸರಬರಾಜು ಕಂಪನಿಗಳು ಭಾಗ್ಯಜ್ಯೋತಿ/ಕುಟೀರಜ್ಯೋತಿ ಮತ್ತು 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುವುದಕ್ಕಾಗಿ 2013-14ನೇ ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳು ಲೆಕ್ಕಶೀರ್ಷಿಕೆ "2801-80-101-1-04-106 ಸಹಾಯಧನ (ಯೋಜನೇತರ)"ದ ಅಡಿಯಲ್ಲಿ ರೂ. 5250.00 ಕೋಟಿಗಳನ್ನು ಒದಗಿಸಲಾಗಿದೆ.
4. ಮೇಲೆ ಕ್ರಮಾಂಕ-1 ಮತ್ತು 2 ರಲ್ಲಿ ಓದಲಾದ ಸರ್ಕಾರಿ ಆದೇಶಗಳ ಅನುಸರಣೆಯಲ್ಲಿ, ಆರ್ಥಿಕ ವರ್ಷ 2013-14ರಲ್ಲಿ ಈವರೆವಿಗೆ ರೂ. 900 ಕೋಟಿಗಳನ್ನು (ಒಂಭೈನೂರು ಕೋಟಿಗಳು ಮಾತ್ರ) ಕ್ರಮಾಂಕ (3)ರಲ್ಲಿ ಸೂಚಿಸಿರುವ ಸರ್ಕಾರಿ ಆದೇಶಗಳಲ್ಲಿ ಬಿಡುಗಡೆ ಮಾಡಿದೆ.
5. ಆರ್ಥಿಕ ಇಲಾಖೆಯು ಮಾಸಿಕ ರೂ. 350 ಕೋಟಿಗಳ ಸಹಾಯಧನವನ್ನು ಬಿಡುಗಡೆ ಮಾಡಲು ಸೂಚಿಸಿದೆ. 2013ರ ಏಪ್ರಿಲ್ ತಿಂಗಳಿನಲ್ಲಿ ರೂ. 200 ಕೋಟಿಗಳಷ್ಟು ಅಧಿಕವಾಗಿ ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಬಿಡುಗಡೆ ಮಾಡಿದೆ. ಮೇ ತಿಂಗಳಿನಲ್ಲಿ ಈಗಾಗಲೇ ಮಾಡಿರುವ ರೂ. 350 ಕೋಟಿಗಳ ಜೊತೆಗೆ ರೂ. 150 ಕೋಟಿಗಳನ್ನು ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಬಿಡುಗಡೆ ಮಾಡಲು ಸೂಚಿಸಿದೆ. ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ಬಿಡುಗಡೆ ಮಾಡಿರುವ ರೂ. 200.00 ಕೋಟಿ ಮತ್ತು ಈ ಆದೇಶದಲ್ಲಿ ಬಿಡುಗಡೆ ಮಾಡಲಿರುವ ರೂ.150.00 ಕೋಟಿಗಳನ್ನು ಜೂನ್-2013ನೇ ಸಾಲಿಗೆಂದು ಪರಿಗಣಿಸಲು ಆರ್ಥಿಕ ಇಲಾಖೆ ಸೂಚಿಸಿದೆ. ಆದ್ದರಿಂದ 2013ರ ಜೂನ್ ತಿಂಗಳ ಸಹಾಯಧನವಾದ ರೂ.350 ಕೋಟಿಗಳನ್ನು ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿಯೇ ಮುಂಗಡವಾಗಿ ಬಿಡುಗಡೆ ಮಾಡಲಾಗಿದೆ ಎಂದು ಆರ್ಥಿಕ ಇಲಾಖೆ ಸೂಚಿಸಿದೆ. ಆದ್ದರಿಂದ 2013ರ ಜೂನ್ ತಿಂಗಳಿನಲ್ಲಿ ಯಾವುದೇ ಸಹಾಯಧನ ಬಿಡುಗಡೆ ಮಾಡಲು ಅವಕಾಶವಿರುವುದಿಲ್ಲವೆಂದೂ ಆರ್ಥಿಕ ಇಲಾಖೆಯು ತಿಳಿಸಿದೆ.
6. ಸರ್ಕಾರವು 2013-14ನೇ ಸಾಲಿನ ಮೇ ತಿಂಗಳಿನಲ್ಲಿ ರೂ. 150 ಕೋಟಿಗಳ ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಬಿಡುಗಡೆ ಮಾಡಲು ಪ್ರಸ್ತುತ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ ಇಎನ್ 13 ಪಿಎಸ್‌ಆರ್ 2013 ಬೆಂಗಳೂರು, ದಿನಾಂಕ 28.05.2013

1. ಸರ್ಕಾರವು ಭಾಗ್ಯಜ್ಯೋತಿ / ಕುಟೀರಜ್ಯೋತಿ ಮತ್ತು 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುತ್ತಿರುವುದಕ್ಕಾಗಿ ರೂ. 150.00 ಕೋಟಿಗಳ (ರೂ. ನೂರಐವತ್ತು ಕೋಟಿಗಳು ಮಾತ್ರ) ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಲೆಕ್ಕಶೀರ್ಷಿಕೆ ("2801-80-101-1-04-106 (ಸಹಾಯಧನ) (ಯೋಜನೇತರ) ಬಾಬ್ತು ಈ ಕೆಳಕಂಡಂತೆ ಬಿಡುಗಡೆಗೊಳಿಸಿ ಆದೇಶಿಸಿದೆ.

(ರೂ. ಕೋಟಿಗಳಲ್ಲಿ)

ವಿದ್ಯುತ್ ಸರಬರಾಜು ಕಂಪನಿಗಳು	ವಿಸಕಂಗಳ ಪರವಾಗಿ ಕವಿನಿನಿಗೆ ಬಿಡುಗಡೆ
ಬೆವಿಕಂ	50.00
ಮವಿಕಂ	18.00
ಹುವಿಕಂ	36.00
ಗುವಿಕಂ	25.00
ಚಾವಿಸನಿನಿ	21.00
ಒಟ್ಟು	**150.00**

2. ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಸಹಾಯಧನವನ್ನು 10ಹೆಚ್‌ಪಿವರೆಗಿನ ನೀರಾವರಿ ಪಂಪುಸೆಟ್‌ಗಳ ಬಾಬ್ತು ಎಂದು ಪರಿಗಣಿಸುವುದು.
3. ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ರೂ. 150.00 ಕೋಟಿಗಳನ್ನು ಬಿಡುಗಡೆ ಮಾಡಿದೆ. ಹಣ ಸ್ವೀಕೃತಿ ರಸೀದಿಯ ಮೇಲೆ ಸರ್ಕಾರದ ಉಪ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಮೇಲು ರುಜು ಪಡೆದು ಹಣ ಪಡೆಯತಕ್ಕದ್ದು.

4. ಈ ಆದೇಶದ ಪ್ರಕಾರ ಹಣ ಸ್ವೀಕೃತಿ ಮಾಡುವ ಸಂಸ್ಥೆಗಳು ಮೂರು ದಿನಗಳೊಳಗೆ ಅನುಸರಣ ವರದಿ ಮತ್ತು ಬಳಕೆಯ ಪ್ರಮಾಣ ಪತ್ರ (Utilization Certificate) ಸಲ್ಲಿಸತಕ್ಕದ್ದು.
5. ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಬಿಡುಗಡೆ ಮಾಡಿದ ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳ ವಿದ್ಯುತ್ ಖರೀದಿ–ಅಸಲು ಬಾಕಿಗೆ ಲೆಕ್ಕೀಕರಿಸುವುದು.
6. ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳು, ತಮ್ಮ ವಿದ್ಯುತ್ ಖರೀದಿ ಬಾಕಿಗಳನ್ನು ಪಾವತಿಸಲು ನಿಯತಕ್ರಿಯಾ ಯೋಜನೆಯೊಂದನ್ನು ಹೊಂದಿರತಕ್ಕದ್ದು ಹಾಗೂ ವಿದ್ಯುತ್ ಖರೀದಿ ಬಾಕಿಯನ್ನು ವಿದ್ಯುತ್ ಸರಬರಾಜು ಕಂಪನಿಗಳ ಸ್ವಂತ ಸಂಪನ್ಮೂಲಗಳಿಂದ ಪಾವತಿಸತಕ್ಕದ್ದು.
7. 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ಟುಗಳಿಗೆ ಮತ್ತು ಭಾಗ್ಯಜ್ಯೋತಿ/ ಕುಟೀರಜ್ಯೋತಿ ವಿದ್ಯುತ್ ಸ್ಥಾವರಗಳಿಗೆ ಸಂಬಂಧಿಸಿದ ಎಲ್ಲಾ ಬೇಡಿಕೆಗಳ ಬಗ್ಗೆ ಮಹಾ ಲೇಖಪಾಲರಿಂದ ಪರಿಶೀಲಿಸಿ/ಲೆಕ್ಕ ಪರಿಶೋಧನೆಗೆ ಒಳಪಡಿಸತಕ್ಕದ್ದು ಹಾಗು ಲೆಕ್ಕ ಪರಿಶೋಧನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
8. ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ FD 594 Exp-I 2013, ಬೆಂಗಳೂರು, ದಿನಾಂಕ: 27.05.2013ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಎ. ಚಪ್ಪರ್‌ಬಂದ್
ಸರ್ಕಾರದ ಅಧೀನ ಕಾರ್ಯದರ್ಶಿ.
ಇಂಧನ ಇಲಾಖೆ.

PR.721

ಇಂಧನ ಸಚಿವಾಲಯ

ವಿಷಯ: ಭಾಗ್ಯಜ್ಯೋತಿ/ಕುಟೀರಜ್ಯೋತಿ ಮತ್ತು 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುವುದಕ್ಕಾಗಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಸಹಾಯಧನ ಬಿಡುಗಡೆ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಇಎನ್ 145 ಪಿಎಸ್‌ಆರ್ 2004 ದಿನಾಂಕ 15.03.2005.
2. ಸರ್ಕಾರಿ ಆದೇಶ ಸಂಖ್ಯೆ: ಇಎನ್ 55 ಪಿಎಸ್‌ಆರ್ 2008 ದಿನಾಂಕ 04.09.2008.
3. ಸರ್ಕಾರಿ ಆದೇಶ ಸಂಖ್ಯೆ: ಇಎನ್ 13 ಪಿಎಸ್‌ಆರ್ 2008 ದಿನಾಂಕ 05.04.2013 ಮತ್ತು 26.04.2013.

ಪ್ರಸ್ತಾವನೆ:

1. ಮೇಲಿನ ಕ್ರಮಾಂಕ–1ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ "ಭಾಗ್ಯಜ್ಯೋತಿ/ಕುಟೀರಜ್ಯೋತಿ ವಿದ್ಯುತ್ ಸ್ಥಾವರ ಒಂದಕ್ಕೆ ಪ್ರತಿ ತಿಂಗಳು 18 ಯೂನಿಟ್‌ವರೆಗೆ ಮಾತ್ರ ಉಚಿತ ವಿದ್ಯುತ್ ಒದಗಿಸಲು (ನಿಗದಿಪಡಿಸಿದ ನಿಬಂಧನೆ ಮತ್ತು ಷರತ್ತಿಗೆ ಒಳಪಟ್ಟು) ಅನುಮೋದನೆ ನೀಡಲಾಗಿರುತ್ತದೆ.
2. ಮೇಲಿನ ಕ್ರಮಾಂಕ–2ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ [ಗೊತ್ತುಪಡಿಸಲಾದ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು] ಮುಂದಿನ ಆದೇಶದವರೆಗೆ ದಿನಾಂಕ01–08–2008ರಿಂದ ಜಾರಿಗೆ ಬರುವಂತೆ ರೈತರ 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುವುದಕ್ಕೆ ಸಂಬಂಧಿಸಿದಂತೆ ವಿದ್ಯುತ್ ಸರಬರಾಜು ಕಂಪನಿಗಳ ಬೇಡಿಕೆ ಮೊಬಲಗು ಸರ್ಕಾರದಿಂದ ಮರುಪಾವತಿಸುವುದಕ್ಕೆ ಅನುಮೋದನೆ ನೀಡಲಾಗಿರುತ್ತದೆ.
3. ವಿದ್ಯುತ್ ಸರಬರಾಜು ಕಂಪನಿಗಳು ಭಾಗ್ಯಜ್ಯೋತಿ/ಕುಟೀರಜ್ಯೋತಿ ಮತ್ತು 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುವುದಕ್ಕಾಗಿ 2013–14ನೇ ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳು ಲೆಕ್ಕಶೀರ್ಷಿಕೆ "2801–80–101–1–04–106 ಸಹಾಯಧನ (ಯೋಜನೇತರ)"ದ ಅಡಿಯಲ್ಲಿ ರೂ.5250.00 ಕೋಟಿಗಳನ್ನು ಒದಗಿಸಲಾಗಿದೆ.
4. 2013–14ನೇ ಸಾಲಿನ ಮೇ ಮಾಹೆಗೆ ರೂ. 350.00 ಕೋಟಿಗಳ ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಬಿಡುಗಡೆ ಮಾಡಲು ಪ್ರಸ್ತುತ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ ಇಎನ್ 13 ಪಿಎಸ್‌ಆರ್ 2013 ಬೆಂಗಳೂರು, ದಿನಾಂಕ 02.05.2013

1. ಸರ್ಕಾರವು ಭಾಗ್ಯಜ್ಯೋತಿ / ಕುಟೀರಜ್ಯೋತಿ ಮತ್ತು 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡುತ್ತಿರುವುದಕ್ಕಾಗಿ ರೂ. 350.00 ಕೋಟಿಗಳ (ರೂ. ಮುನ್ನೂರ ಐವತ್ತು ಕೋಟಿಗಳು ಮಾತ್ರ) ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಲೆಕ್ಕಶೀರ್ಷಿಕೆ ("2801–80–101–1–04–106 (ಸಹಾಯಧನ) (ಯೋಜನೇತರ) ಬಾಬ್ತು ಸಹಾಯಧನವನ್ನು ಈ ಕೆಳಕಂಡಂತೆ ಬಿಡುಗಡೆಗೊಳಿಸಿ ಆದೇಶಿಸಿದೆ.

(ರೂ. ಕೋಟಿಗಳಲ್ಲಿ)

ವಿದ್ಯುತ್ ಸರಬರಾಜು ಕಂಪನಿಗಳು	10ಹೆಚ್‌ಪಿ ವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸ್ಥಾವರಗಳಿಗೆ	ಭಾಗ್ಯ ಜ್ಯೋತಿ/ ಕುಟೀರ ಜ್ಯೋತಿ ಸ್ಥಾವರಗಳಿಗೆ	2013–14ರ ಮೇ ಮಾಹೆಗೆ ಬಿಡುಗಡೆ
ಬೆವಿಕಂ	45.00	3.00	**48.00**
ಮವಿಕಂ	21.00	1.00	**22.00**
ಹುವಿಕಂ	135.00	5.00	**140.00**
ಗುವಿಕಂ	77.00	4.00	**81.00**
ಚಾವಿಸನಿನಿ	53.00	2.00	**55.00**
ಹುಕ್ಕೇರಿ	4.00	0.00	**4.00**
ಒಟ್ಟು	**335.00**	**15.00**	**350.00**

(ರೂ. ಕೋಟಿಗಳಲ್ಲಿ)

ವಿದ್ಯುತ್ ಸರಬರಾಜು ಕಂಪನಿಗಳು	ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ನೇರ ಬಿಡುಗಡೆ	ವಿದ್ಯುತ್ ಸರಬರಾಜು ಕಂಪನಿಗಳಿಗೆ ನೇರ ಬಿಡುಗಡೆ	ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಗೆ ನೇರ ಬಿಡುಗಡೆ(GUVNL)	ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಕ್ಕೆ ನೇರ ಬಿಡುಗಡೆ (JSWPTC)	ಒಟ್ಟು ಮೊತ್ತ
ಬೆವಿಕಂ	48.00	0.00	0.00	0.00	48.00
ಮವಿಕಂ	14.00	0.00	0.00	8.00	22.00
ಹುವಿಕಂ	70.00	54.00*	20.00	0.00	144.00
ಗುವಿಕಂ	40.00	37.00	2.00	2.00	81.00
ಚಾವಿಸನಿನಿ	25.00	20.00	10.00	0.00	55.00
ಒಟ್ಟು	**197.00**	**111.00**	**32.00**	**10.00**	**350.00**

* ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಗೆ ನೇರ ಬಿಡುಗಡೆ ಮಾಡಿರುವ ರೂ. 54.00 ಕೋಟಿಗಳಲ್ಲಿ ರೂ. 4.00 ಕೋಟಿಯನ್ನು ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರ ಸಂಘದ ಬಾಬ್ತು ಸಹಾಯಧನವೆಂದು ಲೆಕ್ಕೀಕರಿಸುವುದು.

2. ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ರೂ. 197.00 ಕೋಟಿಗಳು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಗೆ ರೂ. 32.00 ಕೋಟಿಗಳು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಗೆ ರೂ. 54.00 ಕೋಟಿಗಳು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಗೆ ರೂ. 37.00 ಕೋಟಿಗಳು ಮತ್ತು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮಕ್ಕೆ ರೂ. 30.00 ಕೋಟಿಗಳನ್ನು ಬಿಡುಗಡೆ ಮಾಡಿದೆ.

3. ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ಮತ್ತು ವಿದ್ಯುತ್ ಸರಬರಾಜು ಕಂಪನಿಗಳು ಹಣ ಸ್ವೀಕೃತ ರಸೀದಿಯ ಮೇಲೆ ಸರ್ಕಾರದ ಉಪ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಮೇಲು ರುಜು ಪಡೆದು ಹಣ ಪಡೆಯತಕ್ಕದ್ದು. ಈ ಆದೇಶದ ಪ್ರಕಾರ ಹಣ ಸ್ವೀಕೃತಿ ಮಾಡುವ ಸಂಸ್ಥೆಗಳು ಮೂರು ದಿನಗಳೊಳಗೆ ಅನುಸರಣ ವರದಿ ಮತ್ತು ಬಳಕೆಯ ಪ್ರಮಾಣ ಪತ್ರ (Utilization Certificate) ಸಲ್ಲಿಸತಕ್ಕದ್ದು.

4. ಮೇಲಿನ ಕೋಷ್ಟಕಗಳಲ್ಲಿರುವಂತೆ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ಮತ್ತು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಗಳ ಪರವಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಗೆ ಮರುಹಂಚಿಕೆ ಮಾಡಿ ಬಿಡುಗಡೆ ಮಾಡಿರುವ ರೂ. 32.00 ಕೋಟಿಗಳ ಸಹಾಯಧನವನ್ನು ಗುಜರಾತ್ ಊರ್ಜಾ ವಿಕಾಸ ನಿಗಮ ನಿಯಮಿತ (GUVNL)ದಿಂದ ಖರೀದಿಸುತ್ತಿರುವ ಅಲ್ಪಾವಧಿ ವಿದ್ಯುತ್ ಖರೀದಿ ವೆಚ್ಚ ಭರಿಸಲು ಬಿಡುಗಡೆ ಮಾಡಿದೆ.

5. ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ಮತ್ತು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಕ್ಕೆ ಬಿಡುಗಡೆ ಮಾಡಿರುವ ರೂ. 10.00 ಕೋಟಿಗಳನ್ನು ಜಿಂದಾಲ್ ಸ್ಟೀಲ್ ವರ್ಕ್ಸ್ ಪವರ್ ಟ್ರೇಡಿಂಗ್ ಕಂಪನಿ (JSWPTC) ದಿಂದ ಖರೀದಿಸಿರುವ ವಿದ್ಯುತ್ ಖರೀದಿಯ ಬಾಕಿಗೆ ಲೆಕ್ಕೀಕರಿಸುವುದು.

6. ವಿದ್ಯುತ್ ಸರಬರಾಜು ಕಂಪನಿಗಳ ಪರವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಬಿಡುಗಡೆ ಮಾಡಿದ ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳ ವಿದ್ಯುತ್ ಖರೀದಿ-ಅಸಲು ಬಾಕಿಗೆ ಲೆಕ್ಕೀಕರಿಸುವುದು.

7. ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳು, ತಮ್ಮ ವಿದ್ಯುತ್ ಖರೀದಿ ಬಾಕಿಗಳನ್ನು ಪಾವತಿಸಲು ನಿಯತಕ್ರಿಯಾ ಯೋಜನೆಯೊಂದನ್ನು ಹೊಂದಿರತಕ್ಕದ್ದು ಹಾಗೂ ವಿದ್ಯುತ್ ಖರೀದಿ ಬಾಕಿಯನ್ನು ವಿದ್ಯುತ್ ಸರಬರಾಜು ಕಂಪನಿಗಳ ಸ್ವಂತ ಸಂಪನ್ಮೂಲಗಳಿಂದ ಪಾವತಿಸತಕ್ಕದ್ದು.

8. 10ಹೆಚ್‌ಪಿವರೆಗಿನ ನೀರಾವರಿ ಪಂಪ್‌ಸೆಟ್ಟುಗಳಿಗೆ ಮತ್ತು ಭಾಗ್ಯಜ್ಯೋತಿ/ ಕುಟೀರಜ್ಯೋತಿ ವಿದ್ಯುತ್ ಸ್ಥಾವರಗಳಿಗೆ ಸಂಬಂಧಿಸಿದ ಎಲ್ಲಾ ಬೇಡಿಕೆಗಳ ಬಗ್ಗೆ ಮಹಾ ಲೇಖಪಾಲರಿಂದ ಪರಿಶೀಲಿಸಿ/ಲೆಕ್ಕ ಪರಿಶೋಧನೆಗೆ ಒಳಪಡಿಸತಕ್ಕದ್ದು ಹಾಗು ಲೆಕ್ಕ ಪರಿಶೋಧನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

9. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ FD 01 TFP 2013, ಬೆಂಗಳೂರು, ದಿನಾಂಕ: 20.04.2013ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ ಮತ್ತು ಅವರ ಹೆಸರಿನಲ್ಲಿ,

ಎ.ಎ. ಚಪ್ಪರ್‌ಬಂದ್

ಸರ್ಕಾರದ ಅಧೀನ ಕಾರ್ಯದರ್ಶಿ.

ಇಂಧನ ಇಲಾಖೆ.

PR.719

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ಅಧಿಸೂಚನೆ_ಸಂಖ್ಯೆ:ಆಕುಕ 90 ಪಿಟಿಡಿ 2013, ಬೆಂಗಳೂರು, ದಿನಾಂಕ:26.06.2013

ಅಂತರ್-ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ ವಿಧೇಯಕ 2013(2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 35)ನ್ನು ದಿನಾಂಕ:15.03.2013ರಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲಾಗಿದೆ ಹಾಗೂ ಸದರಿ ವಿಧೇಯಕದ ಎಲ್ಲಾ ಉಪಬಂಧಗಳು 2ನೇ ಏಪ್ರಿಲ್ 2013ನೇ ದಿನಾಂಕದಿಂದ ಜಾರಿಗೆ ಬರಬೇಕೆಂದು ಗೊತ್ತುಪಡಿಸಿ ಅಧಿಸೂಚಿಸಲಾಗಿದೆ.

ಅಂತರ್–ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ ಅಧಿನಿಯಮ 2013ರ ಸೆಕ್ಷನ್ 3ರ ಅನುಸಾರ "ಫೌಂಡೇಷನ್ ಫಾರ್ ರೀವೈಟಲೈಸೇಶನ್ ಆಫ್ ಲೋಕಲ್ ಹೆಲ್ತ್ ಟ್ರೆಡಿಷನ್ಸ್, ಬೆಂಗಳೂರು"(Foundation for Revitalisation of local health Traditions, Bangalore) ಇವರು ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವೊಂದನ್ನು ಸ್ಥಾಪಿಸಲು ಪ್ರಸ್ತಾವನೆಯನ್ನು ಸಲ್ಲಿಸಿದೆ.

"ಫೌಂಡೇಷನ್ ಫಾರ್ ರೀವೈಟಲೈಸೇಶನ್ ಆಫ್ ಲೋಕಲ್ ಹೆಲ್ತ್ ಟ್ರೆಡಿಷನ್ಸ್, ಬೆಂಗಳೂರು" (Foundation for Revitalisation of local health Traditions, Bangalore) ಇವರು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯ ಸ್ಥಾಪಿಸಲು ಸಲ್ಲಿಸಿದ ಪ್ರಸ್ತಾವನೆಯನ್ನು ಸರ್ಕಾರವು ಅಧಿನಿಯಮದ ಸೆಕ್ಷನ್ 3(4)ರನ್ವಯ ರಚಿಸಿದ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಮೂರು ಸದಸ್ಯರನ್ನೊಳಗೊಂಡ ಪರಿಶೋಧನಾ ಸಮಿತಿಯ ಪರಿಶೀಲನೆಗೆ ಸಲ್ಲಿಸಿದ್ದು, ಆ ಸಮಿತಿಯು ಸರ್ಕಾರಕ್ಕೆ ತನ್ನ ಶಿಫಾರಸ್ಸನ್ನು ಸಲ್ಲಿಸಿದೆ.

ಸರ್ಕಾರವು, ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಮೂವರು ಸದಸ್ಯರುಗಳನ್ನೊಳಗೊಂಡ ಸಮಿತಿಯು ಸಲ್ಲಿಸಿದ ಶಿಫಾರಸ್ಸನ್ನು ಪರಿಶೀಲಿಸಿ, ಅಧಿನಿಯಮದಲ್ಲಿ ಅಗತ್ಯಪಡಿಸಲಾದಂತೆ ಪ್ರತಿಷ್ಠಾನವು ಅಗತ್ಯ ಮೂಲಭೂತ ಸೌಕರ್ಯ ಮತ್ತು ಇತರೆ ವಿಷಯಗಳನ್ನು ಹೊಂದಿರುವುದನ್ನು ಖಚಿತಪಡಿಸಿಕೊಂಡು ಒಂದು ಸಂಸ್ಥೆಯನ್ನು ನಡೆಸಲು ಪ್ರತಿಷ್ಠಾನವು ಸಮರ್ಥವಾಗಿದೆ ಎಂದು ಮನಗಂಡು, ಅಂಗೀಕರಿಸಿದೆ.

ಅಧಿನಿಯಮದ ಪ್ರಕರಣ 47ರನ್ವಯ ಪ್ರತಿಷ್ಠಾನವು ಕನಿಷ್ಠ 25 ಕೋಟಿ ರೂಪಾಯಿಗಳಿಗೆ ಕಡಿಮೆ ಇಲ್ಲದ ಒಂದು ಶಾಶ್ವತ ಶಾಸನ ಬದ್ಧ ದತ್ತಿ ನಿಧಿಯನ್ನು ಸ್ಥಾಪಿಸುವಂತೆ ಪ್ರತಿಷ್ಠಾನಕ್ಕೆ ನಿರ್ದೇಶನ ನೀಡಲಾಗಿತ್ತು ಹಾಗೂ ಸಂಸ್ಥೆಯು ಶಾಶ್ವತ ಶಾಸನ ಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಿರುವ ಮಾಹಿತಿಯನ್ನು ಪಡೆದಿರುವ ಸರ್ಕಾರವು, ಈ ಮೂಲಕ ಅಂತರ್–ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ ಅಧಿನಿಯಮ 2013ರನ್ವಯ ಮತ್ತು ಸದರಿ ಅಧಿನಿಯಮದ ಉಪಬಂಧಗಳಿಗೊಳಪಟ್ಟು, "ಫೌಂಡೇಷನ್ ಫಾರ್ ರೀವೈಟಲೈಸೇಶನ್ ಆಫ್ ಲೋಕಲ್ ಹೆಲ್ತ್ ಟ್ರೆಡಿಷನ್ಸ್, ಬೆಂಗಳೂರು" (Foundation for Revitalisation of local health Traditions, Bangalore) ಇವರು ಖಾಸಗಿ ವಲಯದಲ್ಲಿ ಅಧಿನಿಯಮದ ಸೆಕ್ಷನ್ 4(2)ರಲ್ಲಿ ಪ್ರದತ್ತವಾದ ಅಧಿಕಾರದನ್ವಯ "ಅಂತರ್–ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಒಂದು ಸಂಸ್ಥೆಯಾಗಿ ರಾಜ್ಯದಲ್ಲಿ ಸ್ಥಾಪಿಸಲು ಮಂಜೂರಾತಿಯನ್ನು ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ.ಎನ್.ಹರಿಣಿಯಮ್ಮ

ಸರ್ಕಾರದ ಅಧೀನ ಕಾರ್ಯದರ್ಶಿ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಭಾರತೀಯ ವೈದ್ಯ ಪದ್ಧತಿ)

PR.747

HEALTH & FAMILY WELFARE SECRETARIAT

NOTIFICATION No. HFW 90 PTD 2013 Bangalore, Dated: 26.06.2013

Whereas, The Institute of Trans-Disciplinary Health Sciences and Technology Act, 2013 (Karnataka Act No:35 of 2013) has been published on 15.3.2013 in the Special Issue of Karnataka Gazettee and it is notified that all the provisions of the said act shall come into effect from 2nd April, 2013.

Whereas, the Foundations for Revitalizations of local Health Traditions, Bangalore has submitted a proposal in accordance with and in follow up of Section 3 of The Institute of Trans-Disciplinary Health Sciences and Technology Act, 2013 for establishment of an University of unitary in nature.

Whereas, the proposal submitted by the Foundation for Revitalization of local Health Traditions, Bangalore for establishment of University of unitary in nature has been sent to a Screening Committee constituted as per section of 3(4) of the said Act consisting of three ex-officio members of Karnataka State Higher Education Council, for examination and submitting a report. Since the said Committee has submitted its report alongwith its recommendations.

Government, having examined the report submitted by the Screening Committee consisting of three members of Karnataka State Council for Higher Education, and ensuring that the foundation has required infrastructure and other related requirements and foundation is capable of establishing an institution has accepted the report.

Whereas , the Foundation was directed to establish a Permanent Statutory Endowment Fund of not less than Rs. 25.00 crores as per section 47 of the Act and Government having received the information about establishing a Permanent Statutory Endowment Fund . Government in accordance with The Institute of Trans-Disciplinary Health Sciences and Technology Act, 2013 and in exerscise of the powers conferred under Section 4(2) of the Act and subject to provisions contained therein hereby accords permission to Foundation for Revitalization of local Health Traditions, Bangalore for establishment of an University of unitary in nature as an Institution in private sector under the name "The Institute of Trans-Disciplinary Health Sciences and Technology" in the State.

By Order and in the name of the Governor of Karnataka,

K.N. HARINIYAMMA

Under Secretary to Government

Health & Family Welfare Department (IMD & Co-ordination)

PR.748

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಶ್ರೀ ಸಿ.ಕುಮಾರ್, ಸಹಾಯಕ ಔಷಧ ನಿಯಂತ್ರಣಾಧಿಕಾರಿ ಮತ್ತು ಶ್ರೀಮತಿ ವಿಶಾಲಾಕ್ಷಿ, ಔಷಧ ನಿರೀಕ್ಷಕಿ, ಇವರ ವಿರುದ್ಧ ದಾಖಲಾದ ಟ್ರ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಗೂ ಇನ್ನುಳಿದ ನೌಕರರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಕುರಿತು.

ಓದಲಾಗಿದೆ :

1. ಔಷಧ ನಿಯಂತ್ರಕರ ಪತ್ರ ಸಂ:ಔನಿಇ 692 ಸಿಬ್ಬಂದಿ 2012–13 ದಿನಾಂಕ: 7–12–2012 ಹಾಗೂ 10.12.2012.
2. ಸರ್ಕಾರಿ ಆದೇಶ ಸಂಖ್ಯೆ:ಆಕುಕ 251 ಐಎಂಎಂ 2012 ದಿನಾಂಕ11.12.2012 ಮತ್ತು 03.05.2013.
3. ಅಪರ ಪೋಲಿಸ್‌ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ:ಲೋಕ್/ ಐಎನ್‌ವಿ(ಜಿ)/ ಸಿಟಿ/ ಕ್ರೈಂ. 86/2012 ದಿನಾಂಕ:07–03–2013.
4. ಪತ್ರ ಸಂಖ್ಯೆ:ಲೋಕ್/ಐಎನ್‌ವಿ(ಜಿ)/ಸಿಟಿ/ಕ್ರೈಂ86–12 ದಿನಾಂಕ: 10.6.2013.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಸಂಖ್ಯೆ(1)ರ ಪತ್ರದಲ್ಲಿ ಶ್ರೀ ಸಿ.ಕುಮಾರ್, ಸಹಾಯಕ ಔಷಧ ನಿಯಂತ್ರಕರು, ಬೆಂಗಳೂರು ವೃತ್ತ-6 ಮತ್ತು ಶ್ರೀಮತಿ ವಿಶಾಲಾಕ್ಷಿ, ಔಷಧ ನಿರೀಕ್ಷಕರು, ಔಷಧ ನಿಯಂತ್ರಕರ ಕಚೇರಿ, ವೃತ್ತ-6, ಇವರುಗಳ ವಿರುದ್ಧ ಲೋಕಾಯುಕ್ತ ಪೊಲೀಸರು ದಿನಾಂಕ:5.12.2012ರಂದು ಟ್ರ್ಯಾಪ್ ಮಾಡಿದ್ದು ಸಂಖ್ಯೆ:86/2012ರಲ್ಲಿ ಪ್ರಕರಣವನ್ನು ದಾಖಲಿಸಿಕೊಂಡ ಹಿನ್ನೆಲೆಯಲ್ಲಿ ಹಾಗೂ ಇದೇ ವಿಷಯವಾಗಿ ದಿನಾಂಕ:7.12.2012ರಂದು ಟಿವಿ9 ಕನ್ನಡ ದೂರದರ್ಶನ ವಾಹಿನಿಯು ನಡೆಸಿದ ರಹಸ್ಯ ಕಾರ್ಯಾಚರಣೆಯಲ್ಲಿ ಚಿತ್ರಿತಗೊಂಡು "ಯಮದೂತರ ಕೈಯಲ್ಲಿ ಸಂಜೀವಿನಿ" ಎಂಬ ಶೀರ್ಷಿಕೆಯಡಿ ಪ್ರಸಾರವಾದ ಕಾರ್ಯಕ್ರಮದಲ್ಲಿ ಒಳಗೊಂಡ ಔಷಧ ಪರೀಕ್ಷಾ ಪ್ರಯೋಗಾಲಯದ ಜ್ಯೂನಿಯರ್ ಸೈಂಟಿಫಿಕ್ ಆಫೀಸರ್ ಆದ ಶ್ರೀ ನೀಲಕಂಠ, ಪ್ರಾಣಿ ಗೃಹ ಪರ್ಯವೇಕ್ಷಕರಾದ ಶ್ರೀ ಪರಮೇಶ್ವರಪ್ಪ, ಮತ್ತು ಕೇಂದ್ರ ಕಚೇರಿಯಲ್ಲಿ ಹಾಗೂ ಭಾಗಶ: ಸಹಾಯಕ ಔಷಧ ನಿಯಂತ್ರಕರು, ಬೆಂಗಳೂರು ವೃತ್ತ-6 ಇಲ್ಲಿ ಕೆಲಸ ನಿರ್ವಹಿಸುತ್ತಿರುವ ಪ್ರಥಮ ದರ್ಜೆ ಸಹಾಯಕರಾದ ಶ್ರೀ ಕೆ.ಎಲ್.ಸತೀಶಕುಮಾರ್, ಇವರುಗಳನ್ನು ಅಮಾನತ್ತುಗೊಳಿಸುವಂತೆ ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ರವರು ಕೋರಿರುವ ಮೇರೆಗೆ ಸರ್ಕಾರವು ಪರಿಶೀಲಿಸಿ ಮೇಲೆ ಓದಲಾದ ಕ್ರಮಸಂಖ್ಯೆ (2)ರ ದಿನಾಂಕ:11.12.2012ರ ಆದೇಶದಲ್ಲಿ ಶ್ರೀ ಸಿ.ಕುಮಾರ್, ಸಹಾಯಕ ಔಷಧ ನಿಯಂತ್ರಕರು, ಶ್ರೀಮತಿ ವಿಶಾಲಾಕ್ಷಿ, ಔಷಧ ನಿರೀಕ್ಷಕರು, ಇವರುಗಳನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)1957ರ ನಿಯಮ 10(2)(ಎ)ರನ್ವಯ, ಬಂಧನಕ್ಕೆ ಒಳಗಾದ ದಿನಾಂಕ:05.12.2012 ರಿಂದಲೇ ಜಾರಿಗೆ ಬರುವಂತೆ ಹಾಗೂ ಜ್ಯೂನಿಯರ್ ಸೈಂಟಿಫಿಕ್ ಆಫೀಸರಾದ ಶ್ರೀ ನೀಲಕಂಠ, ಪ್ರಾಣಿ ಗೃಹ ಪರ್ಯವೇಕ್ಷಕರಾದ ಶ್ರೀ ಪರಮೇಶ್ವರಪ್ಪ, ಮತ್ತು ಪ್ರಥಮ ದರ್ಜೆ ಸಹಾಯಕರಾದ ಶ್ರೀ ಕೆ.ಎಲ್.ಸತೀಶಕುಮಾರ್, ಇವರುಗಳನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) 1957ರ ನಿಯಮ 10(3)ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಅವರುಗಳ ವಿರುದ್ಧ ಇರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ಅಮಾನತ್ತುಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಪತ್ರದಲ್ಲಿ ಶ್ರೀ ಸಿ.ಕುಮಾರ್, ಸಹಾಯಕ ಔಷಧ ನಿಯಂತ್ರಕರು, ಬೆಂಗಳೂರು ವೃತ್ತ-6 ಮತ್ತು (2)ಶ್ರೀಮತಿ ವಿಶಾಲಾಕ್ಷಿ, ಔಷಧ ನಿರೀಕ್ಷಕರು, ಔಷಧ ನಿಯಂತ್ರಕರ ಕಚೇರಿ, ವೃತ್ತ-6, ಇವರುಗಳನ್ನು ಅಭಿಯೋಜನೆಗೊಳಿಸಲು ಮಂಜೂರಾತಿಯನ್ನು ನೀಡುವಂತೆ ಅಪರ ಪೋಲಿಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರುರವರು ಕೋರಿದ ಹಿನ್ನೆಲೆಯಲ್ಲಿ ಮೇಲೆ ಓದಲಾದ ಕ್ರಮಸಂಖ್ಯೆ (2)ರ ದಿನಾಂಕ3.5.2013ರ ಆದೇಶದಲ್ಲಿ ಸದರಿ ಅಧಿಕಾರಿಗಳನ್ನು ಅಭಿಯೋಜನೆಗೊಳಪಡಿಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿರುತ್ತದೆ.

ಆರೋಪಿತ ಅಧಿಕಾರಿಗಳ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಮರುನೇಮಕಗೊಳಿಸುವ ಬಗ್ಗೆ ಅಭಿಪ್ರಾಯವನ್ನು ನೀಡುವಂತೆ ದಿನಾಂಕ:21.4.2013ರ ಪತ್ರದಲ್ಲಿ ಅಪರ ಪೋಲಿಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರನ್ನು ಕೋರಲಾಗಿತ್ತು. ಆರೋಪಿತ ಅಧಿಕಾರಿಗಳಾದ ಶ್ರೀ ಸಿ.ಕುಮಾರ್, ಸಹಾಯಕ ಔಷಧ ನಿಯಂತ್ರಕರು, ಶ್ರೀಮತಿ ವಿಶಾಲಾಕ್ಷಿ, ಔಷಧ ನಿರೀಕ್ಷಕರು, ಇವರುಗಳನ್ನು ಅಮಾನತ್ತಿನಿಂದ ಬಿಡುಗಡೆ ಮಾಡಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ ತಮಗೆ ಸೂಕ್ತವೆನಿಸುವ ಕ್ರಮವನ್ನು ತೆಗೆದುಕೊಳ್ಳಬಹುದು. ಅಮಾನತ್ತಿನಿಂದ ತೆರವುಗೊಳಿಸಿದಲ್ಲಿ, ಸದರಿಯವರನ್ನು ಕೃತ್ಯ ನಡೆದ ಸ್ಥಳದಿಂದ ಬೇರೆ ಕಡೆಗೆ ನೇಮಿಸುವಂತೆ ಹಾಗೂ ತೆಗೆದುಕೊಂಡ ಕ್ರಮದ ಬಗ್ಗೆ ಲೋಕಾಯುಕ್ತ ಕಚೇರಿಗೆ ಮಾಹಿತಿಯನ್ನು ನೀಡುವಂತೆ ಅಪರ ಪೋಲಿಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರುರವರು ಮೇಲೆ ಓದಲಾದ (4)ರ ಪತ್ರದಲ್ಲಿ ಅಭಿಪ್ರಾಯ ನೀಡಿರುತ್ತಾರೆ. ಅಲ್ಲದೆ ಸದರಿ ಅಧಿಕಾರಿಗಳ ಜೊತೆಗೆ ಇನ್ನುಳಿದ ನೌಕರರ ಅಮಾನತ್ತನ್ನು ಸಹ ತೆರವುಗೊಳಿಸಲು ಸಹ ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ:ಆಕುಕ 251 ಐಎಂಎಂ 2012 ಬೆಂಗಳೂರು, ದಿನಾಂಕ: 29.06.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ (1) ಶ್ರೀ ಸಿ.ಕುಮಾರ್, ಸಹಾಯಕ ಔಷಧ ನಿಯಂತ್ರಕರು, (2) ಶ್ರೀಮತಿ ವಿಶಾಲಾಕ್ಷಿ, ಔಷಧ ನಿರೀಕ್ಷಕರು, (3) ಶ್ರೀ ನೀಲಕಂಠ, ಜ್ಯೂನಿಯರ್ ಸೈಂಟಿಫಿಕ್ ಆಫೀಸರ್ (4) ಶ್ರೀ ಪರಮೇಶ್ವರಪ್ಪ, ಪ್ರಾಣಿ ಗೃಹ ಪರ್ಯವೇಕ್ಷಕರು (5) ಶ್ರೀ ಕೆ.ಎಲ್.ಸತೀಶಕುಮಾರ್, ಪ್ರಥಮ ದರ್ಜೆ ಸಹಾಯಕರು, ಇವರುಗಳ ಅಮಾನತ್ತನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) 1957ರ ನಿಯಮ 10(5)(ಸಿ)ರನ್ವಯ ತೆರವುಗೊಳಿಸಿ ಇಲಾಖಾ ವಿಚಾರಣೆ ಕಾಯ್ದಿರಿಸಿ ಸೇವೆಗೆ ಪುನರ್ ಸ್ಥಾಪಿಸಿ ಆದೇಶಿಸಿದೆ.

ಮುಂದುವರಿದು, ಈ ಕೆಳಕಂಡಂತೆ ಸದರಿ ಅಧಿಕಾರಿ/ನೌಕರರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಿದೆ.

ಕ್ರಮ ಸಂಖ್ಯೆ	ಹೆಸರು ಮತ್ತು ಪದನಾಮ ಶ್ರೀಮತಿ/ಶ್ರೀ:	ಸ್ಥಳ ನಿಯುಕ್ತಿಗೊಳಿಸಿದ ಕಚೇರಿ
1	ಶ್ರೀ ಸಿ.ಕುಮಾರ್, ಸಹಾಯಕ ಔಷಧ ನಿಯಂತ್ರಕರು,	ಸಹಾಯಕ ಔಷಧ ನಿಯಂತ್ರಕರ ಕಚೇರಿ, ದಾವಣಗೆರೆ ವೃತ್ತ, ಇಲ್ಲಿ ಖಾಲಿ ಇರುವ ಹುದ್ದೆಗೆ.
2	ಶ್ರೀಮತಿ ವಿಶಾಲಾಕ್ಷಿ, ಔಷಧ ನಿರೀಕ್ಷಕರು,	ಸಹಾಯಕ ಔಷಧ ನಿಯಂತ್ರಕರ ಕಚೇರಿ, ಮಂಡ್ಯ ವೃತ್ತ, ಇಲ್ಲಿ ಖಾಲಿ ಇರುವ ಹುದ್ದೆಗೆ.
3	ಶ್ರೀ ನೀಲಕಂಠ, ಪ್ರಾಣಿ ಗೃಹ ಪರ್ಯವೇಕ್ಷಕರು	ಪ್ರಾದೇಶಿಕ ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ ಇಲ್ಲಿ ಖಾಲಿ ಇರುವ ಹುದ್ದೆಗೆ.
4	ಶ್ರೀ ಪರಮೇಶ್ವರಪ್ಪ, ಪ್ರಾಣಿ ಗೃಹ ಪರ್ಯವೇಕ್ಷಕರು	ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು ಇಲ್ಲಿ ಅಮಾನತ್ತಿನ ಪೂರ್ವದಲ್ಲಿ ಹೊಂದಿದ್ದ ಹುದ್ದೆಗೆ.
5	ಶ್ರೀ ಕೆ.ಎಲ್.ಸತೀಶಕುಮಾರ್, ಪ್ರಥಮ ದರ್ಜೆ ಸಹಾಯಕರು	ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು ಇಲ್ಲಿ ಖಾಲಿ ಇರುವ ಹುದ್ದೆಗೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಕೆ.ಎನ್.ಹರಿಣಿಯಮ್ಮ
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಭಾರತೀಯ ವೈದ್ಯ ಪದ್ಧತಿ)

PR.749

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಎ. ಸರ್ದಾರ್ ಪಾಷ, ಎ.ಪಿ.ಸಿ., (ವಾಹನ ಚಾಲಕ) 3ನೇ ಪಡೆ, ಕೆ.ಎಸ್.ಆರ್.ಪಿ., ಬೆಂಗಳೂರು, ಇವರ ಪರಿಷ್ಕರಣ ಮೇಲ್ಮನವಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1. ಶಿಸ್ತು ಪ್ರಾಧಿಕಾರ ಹಾಗೂ ಕಮಾಂಡೆಂಟ್, 3ನೇ ಪಡೆ, ಕೆ.ಎಸ್.ಆರ್.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ: ಸಿಬ್ಬಂದಿ–3/ಇವಿ–1/2007–08 ದಿನಾಂಕ: 03–4–2008
2. ಮೇಲ್ಮನವಿ ಪ್ರಾಧಿಕಾರ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ: ಅಪೀಲು/10/2011–12 ದಿನಾಂಕ: 09–02–2012
3. ಅರ್ಜಿದಾರರ ಮೇಲ್ಮನವಿ ಅರ್ಜಿ ದಿನಾಂಕ: 18–4–2012
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು/12/2011–12 ದಿನಾಂಕ: 26–7–2012 ಮತ್ತು 05–02–2013
5. ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 60 ಸಿಎನ್‌ಎಸ್ 2013 ದಿನಾಂಕ: 03–7–2013

ಪ್ರಸ್ತಾವನೆ:

ಶ್ರೀ ಎ. ಸರ್ದಾರ್ ಪಾಷ, ಎ.ಪಿ.ಸಿ., (ವಾಹನ ಚಾಲಕ) 3ನೇ ಪಡೆ, ಕೆ.ಎಸ್.ಆರ್.ಪಿ., ಬೆಂಗಳೂರು, ಇವರು (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ತೀವ್ರ ದುರ್ವರ್ತನೆ, ಬೇಜವಾಬ್ದಾರಿತನ, ವಾಹನ ಚಾಲನೆಯಲ್ಲಿ ಅತೀವ ನಿರ್ಲಕ್ಷ್ಯತೆ ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

"ಶ್ರೀ ಎ. ಸರದಾರ್ ಪಾಷ, ಪೇದೆ ಸಂಖ್ಯೆ: 574, "ಎಫ್" ದಳ, 3ನೇ ಪಡೆ, ಕೆ.ಎಸ್.ಅರ್.ಪಿ., ಬೆಂಗಳೂರು, ಆದ ನಿಮ್ಮನ್ನು ಪಡೆಯ ವಾಹನ ಸಂ: ಕೆಎ–01–ಜಿ–596 ಮಹೇಂದ್ರ ವ್ಯಾನಿಗೆ ಚಾಲಕರಾಗಿ ಕರ್ತವ್ಯ ನಿರ್ವಹಿಸಲು ನೇಮಕ ಮಾಡಲಾಗಿತ್ತು ದಿನಾಂಕ: 13–4–2007 ರಂದು ಬೆಳಿಗ್ಗೆ 08.10ರ ಸಮಯದಲ್ಲಿ ಕೋರಮಂಗಲ, 3ನೇ ಬ್ಲಾಕ್, 8ನೇ ಮುಖ್ಯ ರಸ್ತೆ, ಸುಧಾ ಎಂಟರ್ ಪ್ರೈಸಸ್ ಮುಂಭಾಗ ಅಜಾಗರೂಕತೆಯಿಂದ ವಾಹನವನ್ನು ವೇಗವಾಗಿ ಚಾಲನೆ ಮಾಡಿ ಮುಂದುಗಡೆ ಹೋಗುತ್ತಿದ್ದ ಟ್ರಾಕ್ಟರ್ ನೊಂದಣಿ ಸಂ: ಎಪಿ–26–ಎ–2882 ಹಾಗೂ ಅದರ ಟ್ರೇಲರ್ ಸಂ: ಎಪಿ–01–ಇಇ–2142 'ಹೊಂಡಾ' ವಾಹನಕ್ಕೆ ಅಪಘಾತ ಮಾಡಿರುತ್ತೀರಿ. ಈ ಅಪಘಾತದಿಂದಾಗಿ ಸದರಿ ದ್ವಿಚಕ್ರ ವಾಹನ ಚಾಲಕ ಶ್ರೀ ವೀರಮಣಿ ವಯಸ್ಸು 26 ಇವರಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತದೆ. ಅಲ್ಲದೆ ಪಡೆಯ ವಾಹನ ಸಂ: ಕೆಎ–01–ಜಿ–596ರ ಮುಂದಿನ ಭಾಗ ಮತ್ತು ವಾಹನದ ಸ್ಟೇರಿಂಗ್ ಹಾಗೂ ವಾಹನದ ಬಲಭಾಗದ ಹಿಂಬದಿಯಲ್ಲಿಯ ಬಾಡಿಯ ಮೂಲೆ ಭಾಗ ಜಖಂ ಆಗಿ ವಾಹನದ ಹೆಡ್ ಲೈಟ್ ಡೂಮ್ ಒಡೆದು ಹೋಗಿರುತ್ತದೆ.

ಸದರಿ ಟ್ರಾಕ್ಟರ್ ಚಾಲಕ ಶ್ರೀ ನಾರಾಯಣಪ್ಪ ತಂದೆ ಚಿನ್ನಪ್ಪ ವಯಸ್ಸು 30 ಆಂಜಿನಪ್ಪ ಬಿಲ್ಡಿಂಗ್, 24ನೇ ಮೈನ್ ರಸ್ತೆ, ಅಗರ, ಬೆಂಗಳೂರು ಇವರು ಆಡುಗೋಡಿ ಸಂಚಾರ ಪೊಲೀಸ್ ಠಾಣೆ, ಬೆಂಗಳೂರು, ಇಲ್ಲಿಗೆ ನೀಡಿದ ದೂರಿನ ಆಧಾರದ ಮೇರೆಗೆ ಆಡುಗೋಡಿ ಸಂಚಾರ ಪೊಲೀಸ್ ಠಾಣೆಯಲ್ಲಿ ದಿನಾಂಕ: 13–4–2007 ರಂದು ನಿಮ್ಮ ವಿರುದ್ಧ ಅಪರಾಧ ಕ್ರಮಾಂಕ 111/07 ಕಲಂ 279, 337 ಐ.ಪಿ.ಸಿ. ಪ್ರಕಾರ ಮೊಕದ್ದಮೆ ದಾಖಲಾಗಿದ್ದು, ನಿಮ್ಮನ್ನು ದಿನಾಂಕ: 13–4–2007 ರಂದು ದಸ್ತಗಿರಿ ಮಾಡಿ ನಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿರುತ್ತದೆ.

ಶ್ರೀ ಎ. ಸರದಾರ್ ಪಾಷ, ಪೇದೆ ಸಂಖ್ಯೆ: 574, "ಎಫ್" ದಳ, 3ನೇ ಪಡೆ, ಕೆ.ಎಸ್.ಅರ್.ಪಿ., ಬೆಂಗಳೂರು, ಆದ ನೀವು ಪಡೆಯ ವಾಹನ ಸಂ: ಕೆಎ–01–ಜಿ–596 ಮಹೇಂದ್ರ ವ್ಯಾನನ್ನು ನಿರ್ಲಕ್ಷತೆ ಮತ್ತು ಬೇಜವಾಬ್ದಾರಿಯಿಂದ ವೇಗವಾಗಿ ಚಾಲನೆ ಮಾಡಿ ಮುಂದೆ ಚಲಿಸುತ್ತಿದ್ದ ಟ್ರಾಕ್ಟರ್‌ನ ಹಿಂಬದಿಯ ಟ್ರೇಲರ್‌ಗೆ ಡಿಕ್ಕಿ ಹೊಡೆದ ಪರಿಣಾಮ ವಾಹನ ಬಲಭಾಗಕ್ಕೆ ತಿರುಗಿ ಉತ್ತರದಿಂದ ದಕ್ಷಿಣ ದಿಕ್ಕಿಗೆ ಬರುತ್ತಿದ್ದ ದ್ವಿಚಕ್ರ ವಾಹನಕ್ಕೂ ಅಪಘಾತ ಮಾಡಿ ದ್ವಿಚಕ್ರ ವಾಹನ ಚಾಲಕರಿಗೆ ತೀವ್ರ ಸ್ವರೂಪದ ಗಾಯಗಳಾಗಿರುವುದಕ್ಕೆ ಕಾರಣರಾಗಿರುವುದಲ್ಲದೆ ಪಡೆಯ ವಾಹನ ಜಖಂಗೂ ಕಾರಣರಾಗಿ, ಅಪರಾಧ ಪ್ರಕರಣದಲ್ಲಿ ಭಾಗಿಯಾಗಿರುವುದರಿಂದ ಕರ್ತವ್ಯದಲ್ಲಿ ತೀವ್ರ ದುರ್ವರ್ತನೆ, ಬೇಜವಾಬ್ದಾರಿತನ, ವಾಹನ ಚಾಲನೆಯಲ್ಲಿ ಅತೀವ ನಿರ್ಲಕ್ಷ್ಯತನವನ್ನು ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪವು ಸಾಬೀತಾಗಿರುವುದಿಲ್ಲವೆಂದು ವಿಚಾರಣಾಧಿಕಾರಿಗಳು ನೀಡಿದ ಅಭಿಪ್ರಾಯವನ್ನು ಒಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಕಮಾಂಡೆಂಟ್, 3ನೇ ಪಡೆ, ಕೆ.ಎಸ್.ಆರ್.ಪಿ., ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 03–4–2008ರ ಆದೇಶದಲ್ಲಿ ಅರ್ಜಿದಾರರಿಗೆ ಅಪಘಾತ ಮಾಡಿದ ಪಡೆಯ ವಾಹನಕ್ಕೆ ದುರಸ್ಥಿಪಡಿಸಲು ತಗುಲಿದ ವೆಚ್ಚ ರೂ. 10,061/– ಗಳನ್ನು ಸದರಿಯವರ ಏಪ್ರಿಲ್ 2008ರ ವೇತನದಿಂದ ಆರಂಭಿಸಿ 10 ಕಂತುಗಳಲ್ಲಿ ಕಡಿತ ಮಾಡುವುದು ಅಮಾನತ್ತಿನ ಅವಧಿಯನ್ನು ಅಮಾನತ್ತೆಂದು ಪರಿಗಣಿಸಿ ಜೀವನಾಂಶ ಭತ್ಯೆಗೆ ಸೀಮಿತಗೊಳಿಸಲಾದ ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 09–02–2012ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಅರ್ಜಿದಾರರಿಗೆ ವಿಧಿಸಿದ ದಂಡನೆಯು ಆರೋಪಕ್ಕೆ ಅನುಗುಣವಾಗಿಲ್ಲವೆಂದು ಪರಿಗಣಿಸಿ ಶಿಸ್ತು ಪ್ರಾಧಿಕಾರದ ದಂಡನಾದೇಶವನ್ನು ಭಾಗಶಃ ಮಾರ್ಪಡಿಸುವ ಕುರಿತಂತೆ ಓದಲಾದ (5)ರ ಪತ್ರದಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಸಹಮತಿಯನ್ನು ಪಡೆದು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 38 ಪೊಸಿಅ 2012 ಬೆಂಗಳೂರು, ದಿನಾಂಕ: 10.07.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎ. ಸರ್ದಾರ್ ಪಾಷ, ಎ.ಪಿ.ಸಿ., (ವಾಹನ ಚಾಲಕ) 3ನೇ ಪಡೆ, ಕೆ.ಎಸ್.ಆರ್.ಪಿ., ಬೆಂಗಳೂರು, ಇವರಿಗೆ ಶಿಸ್ತು ಪ್ರಾಧಿಕಾರವು ವಿಧಿಸಿರುವ ದಂಡನೆಯು ಆರೋಪಕ್ಕೆ ಅನುಗುಣವಾಗಿಲ್ಲವೆಂದು ಪರಿಗಣಿಸಿ ಇವರ ಪರಿಷ್ಕರಣ ಮೇಲ್ಮನವಿಯನ್ನು ಭಾಗಶಃ ಪುರಸ್ಕರಿಸಿ, ಸರ್ಕಾರಿ ವಾಹನದ ರಿಪೇರಿಗೆ ವೆಚ್ಚವಾಗಿರುವ ರೂ.10,061/– ಗಳಿಗೆ ವಿಮಾ ಇಲಾಖೆಯಿಂದ ಮಂಜೂರಾಗಿರುವ ರೂ.3339/– ಗಳನ್ನು ಹೊರತುಪಡಿಸಿ, ರೂ.6722/– ಗಳನ್ನು ಮಾತ್ರ ಪರಿಷ್ಕರಣ ಮೇಲ್ಮನವಿದಾರರ ವೇತನದಿಂದ ಸೂಕ್ತ ಕಂತುಗಳಲ್ಲಿ ಕಟಾವುಗೊಳಿಸಲು ಮತ್ತು ಪರಿಷ್ಕರಣ ಮೇಲ್ಮನವಿದಾರರು ಅರ್ಜಿ ಸಲ್ಲಿಸಿದಲ್ಲಿ, ಅವರ ಅಮಾನತ್ತಿನ ಅವಧಿಗೆ ಅವರ ಹಕ್ಕಿನಲ್ಲಿರುವ ರಜೆಯನ್ನು ಮಂಜೂರು ಮಾಡುವಂತೆ ಸಕ್ಷಮ ಪ್ರಾಧಿಕಾರಕ್ಕೆ ತಿಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

PR.788 ಸರ್ಕಾರದ ಅಧೀನ ಕಾರ್ಯದರ್ಶಿ,

SC.30 ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಸಂದೇಶ್ ಕುಮಾರ್, ಪಿ.ಐ., ಕೆ.ಆರ್. ಪೇಟೆ ವೃತ್ತ, ಮಂಡ್ಯ ಜಿಲ್ಲೆ, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:

1. ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ: ಇವಿ/22/2011–12 (ಓ.ಬಿ. ಸಂಖ್ಯೆ: 64/2011–12) ದಿನಾಂಕ: 28–3–2012
2. ಮೇಲ್ಮನವಿ ಪ್ರಾಧಿಕಾರ ಹಾಗೂ ಡಿ.ಜಿ. ಮತ್ತು ಐ.ಜಿ.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ: ಸಿಬಿ(8)12/2012–13 (ಓ.ಬಿ. ಸಂಖ್ಯೆ: 163/2012) ದಿನಾಂಕ: 20–10–2012
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 05–12–2012
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿಬಿ(8)12/2012–13 ದಿನಾಂಕ: 02–02–2013

ಪ್ರಸ್ತಾವನೆ:

ಶ್ರೀ ಸಂದೇಶ್ ಕುಮಾರ್, ಪಿ.ಐ., ಕೆ.ಆರ್. ಪೇಟೆ, ಇವರು ಈ ಹಿಂದೆ ಕೆ.ಆರ್. ನಗರ ವೃತ್ತದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

" ಶ್ರೀ ಎಸ್.ಎನ್. ಸಂದೇಶ್ ಕುಮಾರ್, ಸಿ.ಪಿ.ಐ., ಕೆ.ಆರ್.ಪೇಟೆ ವೃತ್ತ (ಈ ಹಿಂದೆ ಕೆ.ಆರ್. ನಗರ ವೃತ್ತ) ರವರು ಕರ್ತವ್ಯದಲ್ಲಿ ತೋರಿರುವ ನಿರ್ಲಕ್ಷ್ಯತೆ ಬಗ್ಗೆ."

ಮೇಲಿನ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 28–3–2012ರ ಆದೇಶದಲ್ಲಿ ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯನ್ನು ಒಂದು ವರ್ಷದ ಕಾಲ ನಂತರದ ವೇತನ ಬಡ್ತಿಯ ಮೇಲೆ ಪರಿಣಾಮ ಬೀರದಂತೆ ತಡೆಹಿಡಿಯಲಾದ ದಂಡನೆಯನ್ನು ವಿಧಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 20–10–2012ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 6 ಪೊಸಿಅ 2013 ಬೆಂಗಳೂರು, ದಿನಾಂಕ: 10.07.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಂದೇಶ್ ಕುಮಾರ್, ಪಿ.ಐ., ಕೆ.ಆರ್. ಪೇಟೆ ವೃತ್ತ, ಮಂಡ್ಯ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

PR.789 ಸರ್ಕಾರದ ಅಧೀನ ಕಾರ್ಯದರ್ಶಿ,

SC.30 ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಬಸವನಗೌಡ, ಆರ್.ಪಿ.ಸಿ., ಸಂ: 539, ಎಫ್.ದಳ 7ನೇ ಪಡೆ, ಮಂಗಳೂರು, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:

1. ಶಿಸ್ತು ಪ್ರಾಧಿಕಾರ ಹಾಗೂ ಕಮಾಂಡೆಂಟ್, 7ನೇ ಪಡೆ, ಕೆ.ಎಸ್.ಆರ್.ಪಿ., ಮಂಗಳೂರು, ಇವರ ಆದೇಶ ಸಂಖ್ಯೆ: 19/ಇವಿ.7/2011–12 ದಿನಾಂಕ: 24–11–2011
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೆ.ಎಸ್.ಆರ್.ಪಿ. ಬೆಂಗಳೂರು, ಇವರ ಆದೇಶ ಸಂಖ್ಯೆ: ಅಪೀಲು/13/ 2011–12 ದಿನಾಂಕ: 03–03–2012
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 08–10–2012
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)45/2012–13 ದಿನಾಂಕ: 28–01–2013

ಪ್ರಸಾವನೆ:

ಶ್ರೀ ಬಸವನಗೌಡ, ಆರ್.ಪಿ.ಸಿ., ಸಂ: 539, ಎಫ್.ದಳ 7ನೇ ಪಡೆ, ಮಂಗಳೂರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಪಡೆಯ ಮನೋರಂಜನಾ ಕೊಠಡಿಯ ಮೇಲ್ವಿಚಾರಕರೊಂದಿಗೆ ದುರ್ನಡತೆ ಬೇಜವಾಬ್ದಾರಿ ಮತ್ತು ಅಶಿಸ್ತು, ಪ್ರದರ್ಶಿಸಿರುವ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 7 ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

"ಶ್ರೀ ಬಸವನಗೌಡ, ಆರ್.ಪಿ.ಸಿ., ಸಂ: 539, ಎಫ್.ದಳ 7ನೇ ಪಡೆ, ಕರಾಮೀಪೊ, ಮಂಗಳೂರು, ಆದ ನೀವು ಪಡೆಯ ಮನೋರಂಜನಾ ಕೊಠಡಿಯ ಮೇಲ್ವಿಚಾರಕರೊಂದಿಗೆ ದುರ್ನಡತೆ ಬೇಜವಾಬ್ದಾರಿ ಮತ್ತು ಅಶಿಸ್ತು, ಪ್ರದರ್ಶಿಸಿರುತ್ತೀರಿ."

ಮೇಲಿನ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಕಮಾಂಡೆಂಟ್, 7ನೇ ಪಡೆ, ಕೆ.ಎಸ್.ಆರ್.ಪಿ., ಮಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 24–11–2011ರ ಆದೇಶದಲ್ಲಿ ಅರ್ಜಿದಾರರ ಮುಂಬರುವ ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ಬಡ್ತಿಗಳಿಗೆ ಬಾಧಕವಾಗದಂತೆ ಆರು(06) ತಿಂಗಳ ಕಾಲ ಮುಂದೂಡಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೆ.ಎಸ್.ಆರ್.ಪಿ., ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 03–03–2012ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕರ್ತವ್ಯದಲ್ಲಿ ದುರ್ನಡತೆ ಬೇಜವಾಬ್ದಾರಿ ಮತ್ತು ಅಶಿಸ್ತು, ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 105 ಪೊಸಿಅ 2012 ಬೆಂಗಳೂರು, ದಿನಾಂಕ: 10.07.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಬಸವನಗೌಡ, ಆರ್.ಪಿ.ಸಿ., ಸಂ: 539, ಎಫ್.ದಳ 7ನೇ ಪಡೆ, ಮಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

PR.790 ಸರ್ಕಾರದ ಅಧೀನ ಕಾರ್ಯದರ್ಶಿ,

SC.30 ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಸಿದ್ದರಾಜು, ಎ.ಪಿ.ಸಿ.–143, ಡಿ.ಎ.ಆರ್., ಮಂಡ್ಯ ಜಿಲ್ಲೆ, ಇವರ ಪರಿಷ್ಕರಣ ಮೇಲ್ಮನವಿಯ ಬಗ್ಗೆ ಅಂತಿಮ ಆದೇಶ.

ಓದಲಾಗಿದೆ:
1. ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ, ಇವರ ಆದೇಶ ಸಂಖ್ಯೆ: ಸಿಬ್ಬಂದಿ(2)ಡಿಇ/04–2010–11 (ಓ.ಬಿ. ಸಂಖ್ಯೆ: 417/10–11) ದಿನಾಂಕ: 27–01–2011
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ: ಅಪೀಲು(18)2011–12 (ಓ.ಬಿ. ಸಂಖ್ಯೆ:38/2011–12) ದಿನಾಂಕ: 30–9–2011
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 06–12–2012
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)65/202–13 ದಿನಾಂಕ: –3–2013

ಪ್ರಸ್ತಾವನೆ:

ಶ್ರೀ ಸಿದ್ದರಾಜು, ಎ.ಪಿ.ಸಿ.–143, ಡಿ.ಎ.ಆರ್., ಮಂಡ್ಯ ಜಿಲ್ಲೆ, ಇವರು ಸಶಸ್ತ್ರ ಮೀಸಲು ಪಡೆ ಪಿ.ಎಂ.ಟಿ. ವಿಭಾಗದಲ್ಲಿ ಚಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಅತೀವ ದುರ್ನಡತೆ ಹಾಗೂ ಅಶಿಸ್ತು ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6 ರಡಿಯಲ್ಲಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:–

1) "ಶ್ರೀ ಸಿದ್ದರಾಜು, ಎ.ಪಿ.ಸಿ.–143, ಜಿಲ್ಲಾ ಸಶಸ್ತ್ರ ಮೀಡಲು ಪಡೆ, ಮಂಡ್ಯ ಆದ ನಿಮಗೆ ಯಾವುದೇ ವಾಹನಗಳನ್ನು ತಡೆದು ನಿಲ್ಲಿಸುವ ಅಧಿಕಾರವು ನಿಯಮಗಳ ಪ್ರಕಾರ ನಿಮ್ಮ ಹುದ್ದೆಯ ವ್ಯಾಪ್ತಿಯಲ್ಲಿ ಇಲ್ಲದಿದ್ದರೂ ಸಹ ದಿ: 25–4–2020 ರಂದು ಜೀವನ್ ರಕ್ಷಾ ಕೇಂದ್ರದ ಜೀಪ್ ನಂ.ಕೆಎ–11–ಜಿ–231ರ ಚಾಲಕನಾಗಿ ಹೆದ್ದಾರಿಯ ಗಸ್ತು ಕರ್ತವ್ಯ ನಿರ್ವಹಿಸುತ್ತಿದ್ದಾಗ ಅದೇ ದಿನ ರಾತ್ರಿ 12–30 ಗಂಟೆ ಸಮಯದಲ್ಲಿ ಶ್ರೀರಂಗಪಟ್ಟಣ ಠಾಣಾ ಸರಹದ್ದಿನ ಜೀವನ ರಕ್ಷಾ ಕೇಂದ್ರದ ಸ್ವಲ್ಪ ಮುಂದೆ ಬೆಂಗಳೂರು–ಮೈಸೂರು ಮುಖ್ಯ ರಸ್ತೆಯಲ್ಲಿ ಬೆಂಗಳೂರು ಕಡೆಗಾದಂತೆ ಮರಗಳನ್ನು ತುಂಬಿಕೊಂಡು ಹೋಗುತ್ತಿದ್ದ ವಾಹನ ಸಂಖ್ಯೆ: ಕೆಎ–09–ಎ–3116ರ ಲಾರಿಯನ್ನು ಅಡ್ಡಗಟ್ಟಿ ತಡೆದು ನಿಲ್ಲಿಸಿ ನಿಮ್ಮ ಕರ್ತವ್ಯದಲ್ಲಿ ಅತೀವ ದುರ್ನಡತೆ ಹಾಗೂ ಅಶಿಸ್ತನ್ನು ಪ್ರದರ್ಶಿಸಿರುತ್ತೀರಿ.

2) ನೀವು ಬೆಂಗಳೂರು–ಮೈಸೂರು ಮುಖ್ಯ ರಸ್ತೆಯಲ್ಲಿ ಬೆಂಗಳೂರು ಕಡೆಗಾದಂತೆ ಮರಗಳನ್ನು ತುಂಬಿಕೊಂಡು ಹೋಗುತ್ತಿದ್ದ ವಾಹನ ಸಂಖ್ಯೆ: ಕೆಎ–09–ಎ–3116ರ ಲಾರಿಯನ್ನು ತಡೆದು ನಿಲ್ಲಿಸಿದಾಗ ಲಾರಿ ಕ್ಯಾಬಿನ್‌ನಲ್ಲಿ ಕುಳಿತಿದ್ದ ಕ್ಲೀನರ್ ಶ್ರೀ ಷರೀಫ್ ರವರು ಲಾರಿಯಿಂದ ಕೆಳಗಿಳಿದು ನೀವು ನಿಂತಿದ್ದ ಜೀವನ ರಕ್ಷಾ ಕೇಂದ್ರಕ್ಕೆ ಸರ್ಕಾರಿ ಕರ್ತವ್ಯ ನಿಮಿತ್ತ ಹಂಚಿಕೆಯಾಗಿರುವ ವಾಹನ ಸಂಖ್ಯೆ: ಕೆಎ–11–ಜಿ–231ರ ಜೀಪ್ ಬಳಿಗೆ ಬಂದಾಗ, ನೀವು ಲಾರಿ ಕ್ಲೀನರ್ ಶ್ರೀ ಷರೀಫ್‌ನನನ್ನು ಉದ್ದೇಶಿಸಿ ಹಣಕೊಡುವಂತೆ ಕೇಳಿ ಕ್ಲೀನರ್ ಶ್ರೀ ಷರೀಫ್ ರವರು ನೀಡಲು ತಂದಿದ್ದ ಹಣಕ್ಕಿಂತ ಹೆಚ್ಚಿನ ಹಣವನ್ನು ನೀಡುವಂತೆ ಒತ್ತಾಯಿಸಿ ಅತೀವ ದುರ್ನಡತೆ ಹಾಗೂ ಅಶಿಸ್ತನ್ನು ತೋರಿರುತ್ತೀರಿ

3) ನೀವು ಲಾರಿ ಕ್ಲೀನರ್ ಶ್ರೀ ಷರೀಫ್‌ನನ್ನು ಉದ್ದೇಶಿಸಿ ಹಣಕೊಡುವಂತೆ ಕೇಳಿದ್ದು, ಸದರಿಯವರು ನೀಡಲು ತಂದಿದ್ದ ಹಣಕ್ಕಿಂತ ಹೆಚ್ಚಿನ ಹಣವನ್ನು ನೀಡುವಂತೆ ಒತ್ತಾಯಿಸಿ ಹೆಚ್ಚಿನ ಹಣ ಇಲ್ಲವೆಂದು ತಿಳಿಸಿದ್ದಕ್ಕೆ ಶ್ರೀ ಷರೀಫ್ ರವರಿಗೆ ಏಕಾ–ಏಕಿ ನಿಮ್ಮ ಕೈಯಲ್ಲಿದ್ದ ಲಾಠಿಯಿಂದ ಎರಡು ತೋಳುಗಳ ಮೇಲೆ ಹೊಡೆದು ಗಾಯವನ್ನುಂಟು ಮಾಡಿದ್ದು, ಶ್ರೀ ಷರೀಫ್ ರವರು ನೋವಿನಿಂದ ಕೂಗಿಕೊಂಡಾಗ, ಘಟನೆ ಬಗ್ಗೆ ಕೇಳಲು ಬಂದ ಸಂಖ್ಯೆ ಕೆಎ–09–ಎ–3116ರ ಲಾರಿ ಚಾಲಕ ಶ್ರೀ ಮನ್ಸೂರ್ ರವರಿಗೂ ಸಹ ನಿಮ್ಮ ಕೈಯಲ್ಲಿದ್ದ ಲಾಠಿಯಿಂದ ಏಕಾ–ಏಕಿ ಆತನ ಎರಡು ತೋಳುಗಳ ಮೇಲೆ ಹೊಡೆದು ಗಾಯವನ್ನುಂಟು ಮಾಡಿ ನಿಮ್ಮ ಕರ್ತವ್ಯದಲ್ಲಿ ಅತೀವ ದುರ್ನಡತೆ ಹಾಗೂ ಅಶಿಸ್ತನ್ನು ಪ್ರದರ್ಶಿಸಿರುತ್ತೀರಿ.."

ಮೇಲಿನ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು, ಅದನ್ನೊಪ್ಪದ ಶಿಸ್ತು ಪ್ರಾಧಿಕಾರ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 27–01–2011ರ ಆದೇಶದಲ್ಲಿ ಅರ್ಜಿದಾರರ ಮುಂದಿನ ಮೂರು ವಾರ್ಷಿಕ ವೇತನ ಬಡ್ತಿಗಳನ್ನು ನಂತರದ ವಾರ್ಷಿಕ ವೇತನ ಬಡ್ತಿಯ ಮೇಲೆ ಪರಿಣಾಮ ಬೀರುವಂತೆ ಮುಂದೂಡುವ ದಂಡನೆಯನ್ನು ವಿಧಿಸಿ ದಿನಾಂಕ: 30–4–2010 ರಿಂದ 06–8–2010ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 30–9–2011ರ ಆದೇಶದಲ್ಲಿ ತಿರಸ್ಕರಿಸಲಾಗಿದೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಕರ್ತವ್ಯದಲ್ಲಿ ಅತೀವ ದುರ್ನಡತೆ ಹಾಗೂ ಅಶಿಸ್ತು ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರವು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 145 ಪೊಸಿಅ 2012 ಬೆಂಗಳೂರು, ದಿನಾಂಕ: 11.07.2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಿದ್ದರಾಜು, ಎ.ಪಿ.ಸಿ.–143, ಡಿ.ಎ.ಆರ್., ಮಂಡ್ಯ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PR.791
SC.30

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂಗಳೂರು